ಸಂಪುಟ: 13 Volume | ಸಂಚಿಕೆ: 241 Issue | ಪುಟಗಳು: 08 Pages | ಮಂಗಳವಾರ 11 ನವೆಂಬರ 2025 | ₹2 | PRGINO. 120927(RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಶರೀರ ಕೃಷಿ ಭೂಮಿಯಾಗಿದೆ . ಮನಸ್ಸು ಕೃಷಿಯಾಗಿದೆ . ಪಾಪ ಪುಣ್ಯಗಳು ಬೀಜಗಳಾಗಿವೆ.ಯಾವ ಬೀಜವನ್ನು ಬಿತ್ತುತ್ತಾನೋ ಅದನ್ನು ಕೊಯ್ಯುತ್ತಾನೆ .

ತುಳಸೀದಾಸರು .

4 ಬಾಲ ಭವನದಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ
2 ಮಕ್ಕಳ ಹಕ್ಕುಗಳ ರಕ್ಷಣೆ ಮೂಲ ಗುರಿ
8 ಮಾರ್ಷಲ್ ಆರ್ಟ್ಸ್ ಟ್ರೈನಿಂಗ್ ಸೆಂಟರ್
3 ವಿವರಗಳನ್ನು ಸಲ್ಲಿಸದ ಸಚಿವರು ಶಾಸಕರ ಪಟ್ಟಿ

# ದಳಪತಿ ಉರುಳಿಸಿದ ದಾಳ

## ಜಿಟಿಡಿಗೆ ಕುಮಾರಸ್ವಾಮಿ ಕೊಕ್, ಹೊಸ ಕೋರ್ ಕಮಿಟಿ ರಚನೆ, ಗರಿಗೆದರಿದ ಚಟುವಟಿಕೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ದಳಪತಿಗಳ ನೂತನ ರಾಜಕೀಯ ದಾಳ ಮತ್ತೆ ಶುರುವಾಗಿದೆ.

ಆಂತರಿಕಗೊಂದಲದಿಂದ ರಾಜ್ಯರಾಜಕೀಯದಲ್ಲಿ ಸಕ್ರಿಯತೆಯನ್ನು ಕಳೆದುಕೊಂಡಿದ್ದ ಜೆಡಿಎಸ್‌ಗೆ ಹೊಸ ರೂಪ ಕೊಡಲು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿಮುಂದಾಗಿದ್ದಾರೆ. ಇದರಮೊದಲ ಹೆಜ್ಜೆಯಾಗಿಕೋರ್‌ಕಮಿಟಿರಚಿಸಲಾಗಿದೆ. ಕೋರ್ ಕಮಿಟಿಗೆಅಧ್ಯಕ್ಷರಾಗಿದ್ದಜಿಟಿದೇವೇಗೌಡಅವರಿಗೆ ಕೊಕ್ ಕೊಡಲಾಗಿದೆ. ಅವರ ಬದಲಾಗಿ ಹೊಸ ಅಧ್ಯಕ್ಷರಾಗಿ ಕೃಷ್ಣಾ ರೆಡ್ಡಿ ಅವರಿಗೆ ಜವಾಬ್ದಾರಿ ನೀಡಲಾಗಿದೆ.

ನೂತನ ಕೋರ್ ಕಮಿಟಿ: ಎಂಕೃಷ್ಣಾರೆಡ್ಡಿ–ಅಧ್ಯಕ್ಷರು, ಎಮಂಜು–ಸಂಚಾಲಕರು, ಸದಸ್ಯರು:ರಾಜಾವೆಂಕಟಪ್ಪ ನಾಯಕದೊರೆ,ಎಚ್‌ಡಿರೇವಣ್ಣ, ಮಲ್ಲೇಶ್ ಬಾಬು, ಡಿಸಿ ತಮ್ಮಣ್ಣ, ಹನುಮಂತಪ್ಪ ವೈ ಆಲ್ಕೋಡ್,ಎಚ್ ಕೆ ಕುಮಾರಸ್ವಾಮಿ, ಸಿಎಸ್ ಪುಟ್ಟರಾಜು,ಎಚ್‌ಎಸ್‌ಶಿವಶಂಕರ್,ಕೆಎಂತಿಮ್ಮರಾಯಪ್ಪ, ಎ ಮಂಜುನಾಥ್, ದೊಡ್ಡಪ್ಪ ಗೌಡ ಪಾಟೀಲ್ ನರಿಬೋಳ್, ಕೆಜಿಪ್ರಸನ್ನಕುಮಾರ್, ಕರೆಮ್ಮನಾಯಕ್,ಕೆನೇಮಿರಾಜ್‌ನಾಯಕ್,ಸಮೃದ್ಧಿ ಮಂಜುನಾಥ್. ಶರಣಗೌಡಕಂದಕೂರು, ಗೋವಿಂದರಾಜು, ಚಂದ್ರಶೇಖರ ಸಿವಿ

### ನೂತನ ಕೋರ್ ಕಮಿಟಿಗೆ ಟಾಸ್ಕ್?

ಕೋರ್ ಕಮಿಟಿಗೆ ಹೊಸ ಟಾಸ್ಕ್ ನೀಡಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು

ಜಿಲ್ಲಾ ಮತ್ತು

ತಾಲ್ಲೂಕುಘಟಕಗಳನ್ನುಪಕ್ಷದ ಚಟುವಟಿಕೆ ಹಾಗೂ ಪಕ್ಷದ ಬಲವರ್ಧನೆಮತ್ತುಸಂಘಟನೆ ಕೈಗೊಳ್ಳಲುಚುರುಕುಗೊಳಿಸಬೇಕು ಎಂದುಸೂಚನೆನೀಡಲಾಗಿದೆ.

### ಹೊಸ ಕಮಿಟಿಯ ಪ್ರಮುಖ ಕಾರ್ಯ

ಗ್ರೇಟರ್ ಬೆಂಗಳೂರು ಪ್ರಾಧಿಕಾರದವತಿಯಿಂದ ಐದು ನಗರಪಾಲಿಕೆಗಳ ಮುಂಬರುವ ಚುನಾವಣೆ ಬಗ್ಗೆ. ಪೂರ್ವಸಿದ್ಧತೆ ಹಾಗೂ ಪಕ್ಷದ ಸಂಘಟನೆ, ಬಲವರ್ಧನೆ ಕೈಗೊಳ್ಳುವುದು, ನವೆಂಬರ್2026ರಲ್ಲಿಕರ್ನಾಟಕ ವಿಧಾನಪರಿಷತ್ತಿಗೆನಾಲ್ಕುಶಿಕ್ಷಕರ ಮತ್ತು ಪದವೀಧರ ಕ್ಷೇತ್ರಗಳಿಗೆ ನಡೆಯಲಿರುವ ಚುನಾವಣೆ ಬಗ್ಗೆ ಪಕ್ಷದವತಿಯಿಂದ ಪೂರ್ವಭಾವಿ ಸಿದ್ಧತೆ ಕೈಗೊಳ್ಳುವುದು ಸೇರಿ ಮುಂತಾದವು.

### ಚುನಾವಣೆಗೆ ಮಾತ್ರ ನಾನ್ ಬೇಕು: ಜಿಟಿಡಿ

ಮೈಸೂರಿನಲ್ಲಿ ಜೆಡಿಎಸ್ ಪಕ್ಷದ ಕುರಿತು ಜಿ.ಟಿ. ದೇವೇಗೌಡರು ತಮ್ಮ ಅಸಮಾಧಾನವನ್ನು ಹೊರಹಾಕಿದ್ದಾರೆ.

ಚುನಾವಣೆಸಮಯದಲ್ಲಿಮಾತ್ರ ತಮ್ಮನ್ನುಬಳಸಿಕೊಳ್ಳಲಾಗುತ್ತದೆಎಂದು ಅವರುಬೇಸರವ್ಯಕ್ತಪಡಿಸಿದರು. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ವಿಚಾರದಬಗ್ಗೆಯೂಮಾತನಾಡಿದ ಅವರು, ಈ ಎರಡೂ ಪಕ್ಷಗಳು ಚುನಾವಣೆ ಸಂದರ್ಭದಲ್ಲಿ ಒಂದಾಗುವಸಾಧ್ಯತೆಇದೆಎಂದು ವಿವರಿಸಿದ್ದಾರೆ.

### ರಾಜಕೀಯ ರಾದ್ಧಾಂತಕ್ಕೆ ಮುಖ್ಯ ಕಾರಣ?

ಮೈಸೂರಿನಲ್ಲಿ ಅ.3ರಂದು ನಡೆದ ನಾಡಹಬ್ಬ ಉದ್ಘಾಟನಾ ಸಮಾರಂಭದಲ್ಲಿ, ಜೆಡಿಎಸ್‌ಶಾಸಕಜಿ.ಟಿ.ದೇವೇಗೌಡರು ಸಿಎಂಸಿದ್ದರಾಮಯ್ಯನವರಪರವಾಗಿ ಮಾತನಾಡಿದ್ದರು. ಇದು ಜೆಡಿಎಸ್ ನಾಯಕರಲ್ಲಿಮುಜುಗರವನ್ನುಂಟು ಮಾಡಿತ್ತು. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಎಫ್‌ಐಆರ್ ದಾಖಲಾದಮಾತ್ರಕ್ಕೆಸಿಎಂರಾಜೀನಾಮೆ ನೀಡಬೇಕೆಂದಿದ್ದರೆ, ಹಲವಾರು ರಾಜಕಾರಣಿಗಳು ರಾಜೀನಾಮೆ ಕೊಡಬೇಕಾಗುತ್ತದೆ ಎಂದಿದ್ದೇ ಅಸಲಿ ರಾಜಕೀಯ ರಾದ್ದಾಂತಕ್ಕೆ ಪ್ರಮುಖ ಕಾರಣವಾಗಿದೆ.

### ಅದನ್ನು ಹೇಳೋಕೆ ಅವರ್ಯಾರ್?

ತುರುವೇಕೆರೆ ಜೆಡಿಎಸ್ ಶಾಸಕ ಎಂ.ಟಿ.ಕೃಷ್ಣಪ್ಪ, ನಮ್ಮನ್ನುಖರೀದಿ ಮಾಡಲು ಸಾಧ್ಯವಿಲ್ಲ. ಜಿ.ಟಿ. ದೇವೇಗೌಡರ ಹಾಗೆ ನಾವು ಚುನಾವಣೆಯಲ್ಲಿಗೆದ್ದಿದ್ದೇವೆ, ನಮಗೆ ಹೇಳಲು ಅವರ್ಯಾರು? ಎಂದು ವಾಗ್ದಾಳಿ ನಡೆಸಿದ್ದಾರೆ. ಪಕ್ಷಾಂತರ ಬಗ್ಗೆ ಪ್ರತಿಕ್ರಿಯಿಸಿ, ಯೋಗೇಶ್ವರ್ ಹೇಳುತ್ತಾರೆ, ಇಬ್ರಾಹಿಂ ಹೇಳುತ್ತಾರೆ, ಇನ್ನೊಬ್ಬರು ಹೇಳುತ್ತಾರೆ. ಆದರೆ, ಖರೀದಿ ಮಾಡಲು ಆಗುತ್ತಾ? ಕಾಂಗ್ರೆಸ್‌ಗೆ ಸೇರಲು ನನಗೆ ಏನು ಹುಚ್ಚು ಹಿಡಿದಿದೆಯೇ? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗ ಕೊಡುವುದು ಬಹಳ ಮುಖ್ಯ :ಬೊಮ್ಮಾಯಿ



ಹಾವೇರಿ(ಸವಣೂರು) ಕನ್ನಡಿಗರಿಗೆ ಶಿಕ್ಷಣಮತ್ತು ಉದ್ಯೋಗಕೊಡುವುದು ಬಹಳಮುಖ್ಯ ಕನ್ನಡಿಗರಿಗೆಕೆಲಸಸಿಕ್ಕರೆ ಸ್ವಾಭಿಮಾನಬರುತ್ತದೆ. ಕನ್ನಡಿಗರಿಗೆ ಸ್ವಾಭಿಮಾನದಬದುಕುಸಿಕ್ಕರೆಕನ್ನಡಕ್ಕೆ ಸ್ವಾಭಿಮಾನಸಿಗುತ್ತದೆಎಂದುಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜಬೊಮ್ಮಾಯಿಹೇಳಿದರು.

ಇಂದುಹಾವೇರಿಜಿಲ್ಲೆಯಸವಣೂರ ತಾಲೂಕಿನಗುಂಡೂರಗ್ರಾಮದಲ್ಲಿ ಕೀರ್ತಿಕಲಾಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾ ಮಟ್ಟದ ಪದವಿಪೂರ್ವ

2ನೇ ಪುಟನೋಡಿ

## ಬಸ್ ನಿಲ್ದಾಣದ ವ್ಯವಸ್ಥೆಗಳ ಬಗ್ಗೆ ನಾಗಲಕ್ಷ್ಮೀ ಪರಿಶೀಲನೆ



ಬೀದರ್.ನ.10:–ಇಲ್ಲಿನ ಬಸ್ ನಿಲ್ದಾಣಕ್ಕೆಮಹಿಳಾಆಯೋಗದಅಧ್ಯಕ್ಷೆ ನಾಗಲಕ್ಷ್ಮೀಚೌಧರಿಭೇಟಿನೀಡಿಬಸ್ ನಿಲ್ದಾಣದಅವ್ಯವಸ್ಥೆಪರಿಶೀಲಿಸಿದರು. ಇದೇವೇಳೆಮಹಿಳಾಪ್ರಯಾಣಿಕರ ಕುಂದು ಕೊರತೆ ಆಲಿಸಿದರು. ಬಸ್ ನಿಲ್ದಾಣದಲ್ಲಿನಕುಡಿಯುವನೀರು, ಶೌಚಾಲಯ, ಸಿಸಿಟಿವಿ, ಮಗುವಿಗೆ ಹಾಲುಣಿಸುವಕೇಂದ್ರದಪರಿಶೀಲನೆ ಮಾಡಿದರು. ಬಸ್ ನಿಲ್ದಾಣದ ಡಿ ದರ್ಜೆ ನೌಕರರ ಸಮಸ್ಯೆ ಆಲಿಸಿ, ಸುರಕ್ಷತಾ ಕವಚ ಕಲ್ಪಿಸುವಂತೆ ಸೂಚನೆನೀಡಿದರು. ಬಸ್‌ನಿಲ್ದಾಣದ ಅವ್ಯವಸ್ಥೆಕಂಡುನಿಲ್ದಾಣಾಧಿಕಾರಿಗಳಿಗೆ ತರಾಟೆ ತೆಗೆದುಕೊಂಡರು. ಬಸ್ ನಿಲ್ದಾಣದ ಡಿವಿಜನ್ ಟ್ರಾಫಿಕ್ ಅಧಿಕಾರಿಐ.ಜಿ.ಬಿರಾದಾರಗೆಕ್ಲಾಸ್ ತೆಗೆದುಕೊಂಡರು. ಇದೇವೇಳೆಕೋಳಾರ ಗ್ರಾಮದಮಹಿಳೆಯೊಬ್ಬರುಶಾರ್ಟ್ ಸರ್ಕ್ಯೂಟ್‌ನಿಂದಹಾನಿಯಾಗಿದರೂ ಪರಿಹಾರ ಸಿಕ್ಕಿಲ್ಲ ಎಂದು ಕಣ್ಣೀರು ಹಾಕಿದರು. ಸಂಬಂಧಿಸಿದಅಧಿಕಾರಿಗಳಿಗೆ ಕರೆಮಾಡಿಶೀಘ್ರವೇಪರಿಹಾರಒದಗಿಸಿ ಕೊಡುವಂತೆ ಸೂಚನೆ ನೀಡಿದರು.

ಡಿ ದರ್ಜೆ ನೌಕರರನ್ನ ಕಡಿಮೆ ಸಂಬಳಕ್ಕೆ ದುಡಿಸಿಕೊಳ್ಳುತ್ತಿದ್ದಾರೆ, ಅವರಿಗೆ ಯಾವುದೇ ಸೌಲಭ್ಯ ಕೊಟ್ಟಿಲ್ಲ. ಮಗುವಿಗೆಹಾಲುಣಿಸುವ ಕೇಂದ್ರದಲ್ಲಿತೊಟ್ಟಿಲಿಲ್ಲ, ಎಲ್ಲಾಧೂಳು ಹಿಡಿದಿದೆ. ಶುದ್ಧಕುಡಿಯುವನೀರಿನ ಘಟಕವಿದ್ದರೂಚಾಲ್ತಿಯಲ್ಲಿಲ್ಲ. ಬಸ್ ನಿಲ್ದಾಣದ ನಿರ್ವಹಣೆಗೆ ಸಾಕಷ್ಟು ಹಣಬಂದರೂಅಧಿಕಾರಿಗಳು ಏನು ಮಾಡುತ್ತಿದ್ದಾರೆಗೊತ್ತಾಗ್ತಿಲ್ಲಎಂದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ಬೇಸರವ್ಯಕ್ತಪಡಿಸಿದರು.

## ಹುಲಿ, 3 ಮರಿ ರಕ್ಷಣೆ: ಖಂಡ್ರೆ



ಬೆಂಗಳೂರು: ಕಾಡಿನಿಂದಹೊರಬಂದು ಜಾನುವಾರಗಳಮೇಲೆ ದಾಳಿ ಮಾಡುತ್ತಿತ್ತು ಎನ್ನಲಾದ 5 ವರ್ಷದ ಹೆಣ್ಣುಹುಲಿಹಾಗೂ ಅದರ 3 ಮರಿಗಳನ್ನು ಸೆರೆಹಿಡಿದಿರುವುದಾಗಿ ಅಧಿಕಾರಿಗಳುಮಾಹಿತಿ ನೀಡಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಗುಂಡ್ಲುಪೇಟೆತಾಲೂಕಿನಕಲ್ಲಹಳ್ಳಿ ಬಳಿಮೂರುಮರಿಗಳರಕ್ಷಣೆಯೊಂದಿಗೆ ಸೆರೆಹಿಡಿಯಲಾಗಿರುವಈಹೆಣ್ಣು ಹುಲಿವಸತಿಪ್ರದೇಶಗಳಿಗೆಬಂದು ಹಲವುಜಾನುವಾರಗಳ ಮೇಲೆದಾಳಿಮಾಡಿತ್ತು ಎಂಬುದನ್ನು ಖಚಿತಪಡಿಸಿಕೊಂಡು ಕಾರ್ಯಾಚರಣೆನಡೆಸಲಾಗಿದೆ ಎಂದುಅಧಿಕಾರಿಗಳು ತಿಳಿಸಿದ್ದಾಗಿಸಚಿವರು ವಿವರಿಸಿದ್ದಾರೆ.

ಇತ್ತೀಚೆಗೆಬಂಡೀಪುರ ಮತ್ತುನಾಗರಹೊಳೆಹುಲಿ ಸಂರಕ್ಷಿತಪ್ರದೇಶದವಸತಿ ಪ್ರದೇಶಗಳಲ್ಲಿಹುಲಿಗಳು ಕಾಣಿಸಿಕೊಂಡುಜನ, ಜಾನುವಾರುಗಳಮೇಲೆ ಪದೇಪದೇ ದಾಳಿ ಮಾಡುತ್ತಿರುವ ಹಿನ್ನೆಲೆಯಲ್ಲಿ ಅಂತಹಹುಲಿಗಳನ್ನು ಗುರುತಿಸಿಸೆರೆಹಿಡಿಯಲುಆದೇಶ ನೀಡಲಾಗಿತ್ತು.

## ಮುಗಿಯದ ರೈತರ ಹೋರಾಟ: ಪ್ರತಿಭಟನೆ ಮುಂದುವರಿಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ಜಿಲ್ಲೆಯ ಮುಧೋಳಪಟ್ಟಣದಲ್ಲಿರವಿವಾರ ಸಂಜೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರನೇತೃತ್ವದಲ್ಲಿ ನಡೆದಸಂಧಾನಸಭೆವಿಫಲಗೊಂಡ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ರೈತರ ಪ್ರತಿಭಟನೆ ಸೋಮವಾರವೂ ಮುಂದುವರೆಯಿತು.

ಟನ್ ಕಬ್ಬಿಗೆ 3500 ರೂ.ಬೆಲೆ ಕೊಡಲೇಬೇಕುಎಂದುಒತ್ತಾಯಿಸುತ್ತಿರುವ ರೈತಪರಸಂಘಟನೆಗಳು, ಸರ್ಕಾರ ನಿಗದಿಗೊಳಿಸಿರುವದರವನ್ನು ಒಪ್ಪದ ರೈತರುಸೋಮವಾರಮುಧೋಳ ಪಟ್ಟಣದಲ್ಲಿ ಬೃಹತ್ ಮೆರವಣಿಗೆ ನಡೆಸಿಕೆಲವುಸರ್ಕಾರಿಕಚೇರಿಗಳಿಗೆ


### ಮುಧೋಳದಲ್ಲಿ ಸರ್ಕಾರಿ ಕಚೇರಿಗಳಿಗೆ ಬೀಗ

ಬೀಗ ಜಡಿದು ಪ್ರತಿಭಟಿಸಿದರು.

ರಾಜ್ಯ ಸರ್ಕಾರ ಹಾಗೂ ಸಕ್ಕರೆ ಕಾರ್ಖಾನೆಗಳವಿರುದ್ಧಘೋಷಣೆ ಕೂಗಿದ ಪ್ರತಿಭಟನಾಕಾರರು, ಯಾವುದೇ ಕಾರಣಕ್ಕೂ ರೈತರು ಸರ್ಕಾರನಿಗದಿಪಡಿಸಿದದರವನ್ನು ಒಪ್ಪುವುದಿಲ್ಲ. ಹೋರಾಟದಿಂದ ಹಿಂದೆಸರಿಯುವುದಿಲ್ಲ. 3500 ರೂ. ಬೆಲೆಕೊಡಬೇಕು. ಅಲ್ಲಿಯವರೆಗೆ ಕಾರ್ಖಾನೆ ಪ್ರಾರಂಭಕ್ಕೆ ಅವಕಾಶ ನೀಡುವುದಿಲ್ಲ ಎಂದರು.

2ನೇ ಪುಟನೋಡಿ

## ದೆಹಲಿ ಸ್ಫೋಟ 2025 – ಬೆಂಗಳೂರು ಸೇರಿ ಕರ್ನಾಟಕದಾದ್ಯಂತ ಹೈ ಅಲರ್ಟ್



ದೆಹಲಿಯಲ್ಲಿ ಅನುಮಾಸ್ಪದ ಸ್ಫೋಟಸಂಭವಿಸಿದಹಿನ್ನೆಲೆಯಲ್ಲಿ ರಾಜ್ಯಾದ್ಯಂತಕಟ್ಟೆಚ್ಚರವಹಿಸಲು ಪೊಲೀಸ್ ಮಹಾ ನಿರ್ದೇಶಕರು ಆದೇಶಿಸಿದ್ದಾರೆ. ಬೆಂಗಳೂರಿನ ಜನನಿಬಿಡ ಪ್ರದೇಶಗಳಲ್ಲಿ ತೀವ್ರ ತಪಾಸಣೆ ನಡೆಸಲಾಗುವುದು. ರಾತ್ರಿ ಗಸ್ತುಗಳನ್ನು ಹೆಚ್ಚಿಸಲಾಗಿದೆ. ಲಾಡ್ಜ್‌ಗಳಪರಿಶೀಲನೆಗೂಸೂಚನೆ ನೀಡಲಾಗಿದೆ. ಜಿಲ್ಲೆಗಳಲ್ಲೂಮಾರುಕಟ್ಟೆ, ಸಿನಿಮಾಥಿಯೇಟರ್‌ಗಳಿಗೆವಿಶೇಷ ಭದ್ರತೆಒದಗಿಸಲಾಗುವುದು. ದೆಹಲಿ ಕೆಂಪುಕೋಟೆ

2ನೇ ಪುಟನೋಡಿ

## 5 ಕೋಟಿ ಗಿಡ ನೆಡುವ ಗುರಿ: ಎಂಬಿಪಿ




ಬೆಂಗಳೂರು:ತಮ್ಮನೇತೃತ್ವದಲ್ಲಿವಿಜಯಪುರಜಿಲ್ಲೆಯಲ್ಲಿ ನಡೆಯುತ್ತಿರುವ 'ಕೋಟಿ ವೃಕ್ಷ ಅಭಿಯಾನ'ದಡಿ ಕಳೆದ 9 ವರ್ಷಗಳಲ್ಲಿಒಂದೂವರೆಕೋಟಿಸಸಿಗಳನ್ನು ನೆಡಲಾಗಿದೆ. 2030ರ ವೇಳೆಗೆ ಇನ್ನೂ 3.50 ಕೋಟಿ ಸಸಿಗಳನ್ನು ನೆಟ್ಟು, 5 ಕೋಟಿಸಸಿಗಳ ಗುರಿ ಸಾಧಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.

ಸೋಮವಾರ ವಿಧಾನಸೌಧದಲ್ಲಿ ನಡೆದ ಮಾಧ್ಯಮ ಗೋಷ್ಠಿಯಲ್ಲಿ ವೃಕ್ಷೋಥಾನ್–2025 ಓಟದ ಪೋಸ್ಟರ್, ಟೀ ಶರ್ಟ್, ಮೆಡಲ್ ಬಿಡುಗಡೆ ಮಾಡಿದ ಅವರು ಈ ಉಪಕ್ರಮದ ಮೂಲಕ ಸಾಧಿಸಿರುವ ಸಂಗತಿಗಳ ಬಗ್ಗೆ ಮಾತನಾಡಿ, 2016ರಲ್ಲಿ ಜಿಲ್ಲೆಯಲ್ಲಿ ಕೇವಲ ಶೇಕಡ 0.17ರಷ್ಟುಮಾತ್ರ ಅರಣ್ಯವಿತ್ತು. ಆಗಜಿಲ್ಲಾಡಳಿತಹಾಗೂ ಪಕ್ಷಾತೀತವಾಗಿಹಲವುಸಂಘಸಂಸ್ಥೆಗಳು, ಬಿ.ಎಲ್.ಡಿ.ಇ. ಅಸೋಸಿಯೇಷನ್ ಮೂಲಕ ಕೋಟಿ ವೃಕ್ಷ ಅಭಿಯಾನ ರೂಪಿಸಲಾಯಿತು. ಹೀಗಾಗಿ ಈಗ ಜಿಲ್ಲೆಯಲ್ಲಿ ಹಸಿರು ಹೊದಿಕೆಯು ಶೇಕಡ 2.4ರಷ್ಟಕ್ಕೆವೃದ್ಧಿಸಿದೆ. ಜೊತೆಗೆಶುದ್ಧ ಗಾಳಿಯ ಗುಣಮಟ್ಟದಲ್ಲಿ ಇಡೀ ದೇಶದಲ್ಲಿ ವಿಜಯಪುರ ಜಿಲ್ಲೆಯು ತೃತೀಯ ಸ್ಥಾನದಲ್ಲಿದೆ. ಅಂತರ್ಜಲ ಮಟ್ಟ ವೃದ್ಧಿಸಿದ್ದು, ಮಣ್ಣಿನಸವಕಳಿಮತ್ತು ಮರುಅರಣ್ಯೀಕರಣ ಸಾಧ್ಯವಾಗಿದೆ. ಅಲ್ಲದೆ, ಬಿಸಿಲಿನತಾಪಮಾನಮೊದಲಿಗಿಂತ 0.5 ಡಿಗ್ರಿ ಸೆಲ್ಸಿಯಷ್ಟು ಕಡಿಮೆಯಾಗಿದ್ದು, ಮಳೆಯ ಪ್ರಮಾಣವು 550 ಮಿ.ಮೀ. ಇದ್ದಿದ್ದು ಈಗ 650 ಮಿ.ಮೀ. ವರೆಗೂ ಹೆಚ್ಚಳ ಕಂಡಿದೆ ಎಂದು ಅವರು ವಿವರಿಸಿದ್ದಾರೆ.

ಕೃಷ್ಣಾ ಭಾಗ್ಯ ಜಲ ನಿಗಮದ ಮೂಲಕ ಸಿಎಸ್‌ಆರ್ ನಿಧಿಯಡಿ ಮೊದಲ ಐದು ವರ್ಷ ತಲಾ 10 ಲಕ್ಷ ಸಸಿಗಳನ್ನು ವಿತರಿಸಲಾಯಿತು. ರೈತರಿಗೆ ತಮಗೆ ಬೇಕಾದ ಗಿಡಗಳನ್ನು ಉಚಿತವಾಗಿಹಂಚಲಾಗುತ್ತಿದೆ. ಇದಕ್ಕಾಗಿ 2016ರಲ್ಲಿಸರಕಾರದ ವಿಶೇಷಅನುದಾನವನ್ನೂ ಪಡೆದುಕೊಳ್ಳಲಾಗಿತ್ತು. ಇಂತಹ ಸೌಲಭ್ಯವನ್ನು ಮುಂದಿನ 5–10 ವರ್ಷಗಳಿಗೆವಿಸ್ತರಿಸಿಕೊಂಡು, 5 ಕೋಟಿ ಗಿಡ ನೆಡುವ ಮಹದಾಸೆ ನಮ್ಮದಾಗಿದೆ. ಈಗ ವಾರ್ಷಿಕ ಮಳೆಯ ದಿನಗಳು ಕೂಡ ಮೊದಲಿದ್ದ 20–30 ದಿನಗಳಿಂದ 40 ದಿನಗಳಿಗೆಹಿಗ್ಗಿದೆಎಂದುಅವರುನುಡಿದಿದ್ದಾರೆ. 'ಕೋಟಿ ವೃಕ್ಷ ಅಭಿಯಾನದಿಂದ ವಿಜಯಪುರ ಜಿಲ್ಲೆಯಲ್ಲಿ ಜೀವವೈವಿಧ್ಯ ಪೋಷಣೆ

2ನೇ ಪುಟನೋಡಿ

### ಡಿ.7ರಂದು ವೃಕ್ಷೋಥಾನ್–2025

ವೃಕ್ಷೋಥಾನ್-2025 ಈಬಾರಿಡಿ.7ರಭಾನುವಾರವಿಜಯಪುರ ಜಿಲ್ಲಾ ಕೇಂದ್ರದಲ್ಲಿ ನಡೆಯಲಿದ್ದು, 15 ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸುವ ನಿರೀಕ್ಷೆ ಇದೆ. ಇದರಲ್ಲಿ ವಿದ್ಯಾರ್ಥಿಗಳು, ಪೊಲೀಸ್ ಇಲಾಖೆ, ಸೇನಾ ಸಿಬ್ಬಂದಿ, ವಿಜಯಪುರ ಸೈಕ್ಲಿಂಗ್ ಗ್ರೂಪ್, ಅರಣ್ಯ ಇಲಾಖೆ, 50ಕ್ಕೂ ಹೆಚ್ಚು ಸಂಘಸಂಸ್ಥೆಗಳು ಸಕ್ರಿಯವಾಗಿ ತೊಡಗಿಕೊಳ್ಳಲಿವೆ. ಇದರಲ್ಲಿ ಒಟ್ಟು 10 ಲಕ್ಷ ರೂ. ಮೊತ್ತದ ಬಹುಮಾನ ನೀಡಲಾಗುವುದು. ವೃಕ್ಷೋಥಾನ್ ಯಾವುದೇ ವಯೋಮಿತಿಯ ನಿರ್ಬಂಧವಿಲ್ಲದೆ 5 ಕಿ.ಮೀ., 10 ಕಿ.ಮೀ. ಮತ್ತು 21 ಕಿ.ಮೀ. ವಿಭಾಗದಲ್ಲಿನಡೆಯಲಿದೆ. ಆಸಕ್ತರುತಿತಿತಿ.ಡಿಞಣಟಿ.ಧಿ.ಟಿಮೂಲಕ ನೋಂದಾಯಿಸಿಕೊಳ್ಳಬಹುದು ಎಂದು ಸಚಿವ ಎಂ ಬಿ ಪಾಟೀಲ ತಿಳಿಸಿದ್ದಾರೆ.

**ಸಂಜು ಸ್ಯಾಮ್ಸನ್ ಟ್ರೇಡ್ ಸರ್ಕಸ್; ಒಮ್ಮೆ ಡೆಲ್ಲಿ ಕ್ಯಾಪಿಟಲ್ಸ್, ಮತ್ತೊಮ್ಮೆ ಚೆನ್ನೈ ಸೂಪರ್ ಕಿಂಗ್ಸ್!**

## ಒಂದನೇ ಪುಟದಿಂದ

## ಬಹಳಮುಖ್ಯ :ಬೊಮ್ಮಾಯಿ

ವಿದ್ಯಾರ್ಥಿಗಳಿಗೆ ಆಯೋಜಿಸಿರುವ ವಿವಿಧ ಸ್ಪರ್ಧೆಗಳ ಉದ್ಘಾಟನಾ ಸಮಾರಂಭ ಹಾಗೂ ★ಕೀರ್ತಿ ಕನ್ನಡ ಕಲೋತ್ಸ ವ – 2025★ ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಶಂಕರಗೌಡರು ಅದ್ಭುತವಾಗಿರವ ಮನುಷ್ಯ ಸದಾ ಕ್ರಿಯಾಶೀಲರಾಗಿರುತ್ತಾರೆ. ಸವಣೂರಿನಲ್ಲಿ ಪೊಲೀಸ್ ಗೌಡರ ಮನೆತನ ದೊಡ್ಡ ಮನೆತನ. ಅವರು ಅರಾಮ ಆಗಿರಬಹುದಿತ್ತು. ಅವರು ಬೆಂಗಳೂರಿಗೆ ಹೋಗಿ ಸುಮಾರು 2 ಸಾವಿರ ಜನರು ಅವರ ಕೈಯಲ್ಲಿ ಕೆಲಸ ಮಾಡುತ್ತಾರೆ. ಬೆಂಗಳೂರಿಗೆ ಎಲ್ಲರೂಕೆಲಸಹುಡುಕಿಕೊಂಡುಹೋಗುತ್ತಾರೆ. ಆದರೆ, ಇವರುಎರಡು ಸಾವಿರಜನರಿಗೆಉದ್ಯೋಗಕೊಟ್ಟಿದ್ದಾರೆ. ಬಹಳಅದ್ಭುತವಾದಸಾಧನೆ ಮಾಡಿದ್ದಾರೆ ಎಂದರು.

ಅವರು ಬೆಂಗಳೂರಿನಲ್ಲಿ ಯಶಸ್ವಿಯಾಗಿದ್ದಾರೆ. ಆದರೂ ತಮ್ಮ ಬೇರುಗಳನ್ನುಮರೆತಿಲ್ಲ. ಯಾವನೆಲಅನ್ನಕೊಟ್ಟಿದೆ. ಆಶ್ರಯಕೊಟ್ಟಿದೆ. ಆ ನೆಲದ ಋಣ ತೀರಿಸಬೇಕೆಂದು ಪದವಿ ಕಾಲೇಜು ತೆರೆದರು. ಬಹಳ ಕಷ್ಟದಲ್ಲಿಪದವಿಕಾಲೇಜುತೆರೆದುಯಶಸ್ವಿಯಾಗಿಮುನ್ನಡೆಸುತ್ತಿದ್ದಾರೆ. ಈಕಾಲೇಜಿನಉದ್ಘಾಟನೆಯನ್ನುಅದ್ದೂರಿಯಾಗಿಮಾಡಿದ್ದರು. ಗುಣ ಮಟ್ಟದ ಶಿಕ್ಷಣ ಕೊಡುವ ಕೆಲಸ ಆಗಬೇಕು. ನಾವು ಸರ್ಕಾರಿ ಪದವಿ ಕಾಲೇಜು, ಪಿಯುಸಿ ಕಾಲೇಜು, ಮುರಾರ್ಜಿ ಕಾಲೇಜು, ಐಟಿಐ, ಆಯುರ್ವೇದಿಕ್‌ಕಾಲೇಜನ್ನುಸವಣೂರಿನಲ್ಲಿಮಾಡಿದ್ದೇವೆ. ಶಿಗ್ಗಾವಿಯಲ್ಲಿ ಪಾಲಿಟೆಕ್ನಿಕ್, ಐಟಿಐ ಜಿಟಿಟಿಸಿ, ವಟರ್ನರಿ ಐಟಿಐ ಶಿಕ್ಷಣ ಸಂಸ್ಥೆಗಳನ್ನು ನಮ್ಮ ಕ್ಷೇತಕ್ಕೆ ತಂದಿರುವ ಹೆಮ್ಮೆ ಇದೆ. ಇನ್ನಷ್ಟು ಶಿಕ್ಷಣ ಸಂಸ್ಥೆ ತರುವ ಇಚ್ಚೆ ಇದೆ ಎಂದರು.

ಕನ್ನಡಿಗರಿಗೆ ಉದ್ಯೋಗ ಸಿಗಬೇಕಿದೆ. ಬೆಂಗಳೂರಿನಲ್ಲಿ ಶೇ 65 ರಷ್ಟು ಜನರು ಹೊರಗಿನವರು ಇದ್ದಾರೆ. ನಾನು ಬೆಂಗಳೂರಿನಲ್ಲಿ ಕನ್ನಡ ರಾಜ್ಯೋತ್ಸ ವಕಾರ್ಯಕ್ರಮಕ್ಕೆಹೋಗಿದ್ದೆಅಲ್ಲಿಉತ್ತರಭಾರತೀಯರೇ ಹೆಚ್ಚಿದ್ದರು. ಕನ್ನಡಿಗರಿಗೆಶಿಕ್ಷಣಮತ್ತುಉದ್ಯೋಗಕೊಡುವುದುಬಹಳ ಮುಖ್ಯ ಕನ್ನಡಿಗರಿಗೆ ಕೆಲಸ ಸಿಕ್ಕರೆ ಸ್ವಾಭಿಮಾನ ಬರುತ್ತದೆ. ಕನ್ನಡಿಗರಿಗೆ ಸ್ವಾಭಿಮಾನದ ಬದುಕು ಸಿಕ್ಕರೆ ಕನ್ನಡಕ್ಕೆ ಸ್ವಾಭಿಮಾನ ಸಿಗುತ್ತದೆ. ಎಲ್ಲ ಹಂತದಲ್ಲಿ ಕನ್ನಡ ಕಡ್ಡಾಯ ಮಾಡುವ ಕಾನೂನು ನಾನು ತಂದಿದ್ದೆ ಅದನ್ನುಈಗಿನಸರ್ಕಾರಅನುಷ್ಠಾನಮಾಡುತ್ತಿಲ್ಲ. ಕನ್ನಡವನ್ನುಎಲ್ಲರೂ ಬೆಳೆಸುವುದು ಮುಖ್ಯ ಆ ಕೆಲಸವನ್ನು ಸವಣೂರಿನಲ್ಲಿ ಕೀರ್ತಿ ಸಂಸ್ಥೆ ಯಶಸ್ವಿಯಾಗಿ ಮಾಡುತ್ತಿದೆ. ವಿದ್ಯಾರ್ಥಿಗಳಿಗೆ ಹಲವಾರು ಸ್ಪರ್ಧೆ ಮಾಡಿ ಬಹುಮಾನ ಕೊಡುವ ಕೆಲಸ ಮಾಡಿದ್ದು ಒಳ್ಳೆಯ ಕೆಲಸ ಅವರಿಗೆ ಅಭಿನಂದನೆಗಳು ಎಂದು ಹೇಳಿದರು.

★5 ಸಾವಿರ ಮಹಿಳೆಯರಿಗೆ ಉದ್ಯೋಗ★

ಯಾರಾದರೂ ಶಿಗ್ಗಾವಿ ಸವಣೂರಿನಲ್ಲಿ 5 ಸಾವಿರ ಮಹಿಳೆಯರಿಗೆ ಉದ್ಯೋಗ ಸಿಗುತ್ತದೆ ಎಂದು ಅನಿಸಿತ್ತಾ. ನಾನು ದೀಪಾವಳಿ ಪೂಜೆಗೆ ಬಂದಾಗಮೊಟರ್‌ಸೈಕಲ್‌ಗಳನ್ನುಹೆಣ್ಣುಮಕ್ಕಳುಕೊಳ್ಳಲುಬಂದಿದ್ದರು. ಸುಮಾರು 5 ಸಾವಿರ ಹೆಣ್ಣು ಮಕ್ಕಳಿಗೆ ಕೆಲಸ ಕೊಟ್ಟಿದ್ದು ಸಮಾಧಾನ ಇದೆ. ಇದು ದೊಡ್ಡ ಕ್ರಾಂತಿಯಾಗುತ್ತದೆ. ಅಲ್ಲಿ ಯಾವುದೇ ಜಾತಿ ಅಂತ ಇಲ್ಲ. ಅಲ್ಪ ಸಂಖ್ಯಾತ ಹೆಣ್ಣು ಮಕ್ಕಳೂ ಕೆಲಸ ಮಾಡುತ್ತಿದ್ದಾರೆ. ನಮ್ಮ ಕ್ಷೇತದಲ್ಲಿ ಅತಿ ಹೆಚ್ಚು ಅಲ್ಪ ಸಂಖ್ಯಾತ ಹೆಣ್ಣು ಮಕ್ಕಳು ಕೆಲಸ ಮಾಡುತ್ತಿದ್ದಾರೆ. ಯಾರೂಕೂಡಅರ್ಜಿಕೊಟ್ಟುಹುಟ್ಟುವುದಿಲ್ಲ. ನಾವು ಹೇಗೆಬದುಕುತ್ತೇವೆಎನ್ನುವುದುಮುಖ್ಯನಮ್ಮ ನಿರ್ಧಾರಗಳುನ್ಯಾಯ ಸಮ್ಮತವಾಗಿರಬೇಕು ಎಂದರು.

★ಜ್ಞಾನ ಧ್ಯಾನ ಮುಖ್ಯ★

ಇದ್ಯಾರ್ಥಿಗಳಿಗೆ ಜ್ಞಾನ ಮತ್ತು ಧ್ಯಾನ ಮುಖ್ಯ. ಎಲ್ಲದರ ಬಗ್ಗೆ ಜ್ಞಾನವನ್ನು ಪಡೆಯಬೇಕು. ಮತ್ತು ಧ್ಯಾನ ಮಾಡುವುದರಿಂದ ವ್ಯಕ್ತಿತ್ವ ವಿಕಸನವಾಗುತ್ತದೆ. ಯಾಕೆ, ಏನು, ಎಲ್ಲಿ, ಎಷ್ಟು ಎನ್ನುವ ಪ್ರಶ್ನೆ ಹಾಕಿದಾಗ ತಾರ್ಕಿಕವಾಗಿ ಚಿಂತನೆ ಮಾಡಲು ಹಚ್ಚುತ್ತದೆ. ಆಗ ಯಾವುದೇ ಸಮಸ್ಯೆ ಬಂದರೂ ಅದನ್ನು ಬಗೆ ಹರಿಸುವ ಶಕ್ತಿ ಬರುತ್ತದೆ. ಪ್ರಶ್ನಿಸುವ ಗುಣ ಬೆಳೆಸಿಕೊಳ್ಳಬೇಕು. ಒಮ್ಮೆ ವಿದ್ಯಾರ್ಥಿ ಆದ ಮೇಲೆ ಜೀವನ ಪರಿಯಂತ ವಿದ್ಯಾರ್ಥಿ ಜೀವನ ಇರುತ್ತದೆ. ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳಬೇಕು. ಯಾರಿಗೆಜ್ಞಾನಇದೆಅವರುಜಗತ್ತನ್ನು ಆಳುತ್ತಾರೆ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಶ್ರೀ ಷ.ಬ್ರ ಡಾ.ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀಮದ್ ವಿಭೂತಿಪುರ, ವೀರಸಿಂಹಾಸನ ಸಂಸ್ಥಾನಮಠಬೆಂಗಳೂರು ಶ್ರೀಗಳುಸಾನಿಧ್ಯ ವಹಿಸಿದ್ದರು. ಕಾಲೇಜಿನ ಅಧ್ಯಕ್ಷರಾದ ಶಶಿಕಲಾ ಪೊಲಿಸಗೌಡ್ರ, ಶಂಕರಗೌಡ ಪೊಲಿಸಗೌಡ್ರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಪ್ರತಿಭಟನೆ ಮುಂದುವರಿಕೆ

ನೀರಾವರಿ, ಕೃಷಿ, ಲೋಕೋಪಯೋಗಿ ಹಾಗೂ ತಹಸೀಲ್ದಾರ ಕಚೇರಿಗಳಿಗೆತೆರಳಿದಪ್ರತಿಭಟನಾಕಾರರುಅಧಿಕಾರಿಗಳು, ಸಿಬ್ಬಂದಿಗಳನ್ನು ಹೊರಕಳಿಸಿ ಕಚೇರಿ ಬಾಗಿಲುಗಳಿಗೆ ಬೀಗ ಜಡಿದರು. ಹೋರಾಟ ಇಷ್ಟಕ್ಕೆ ನಿಲ್ಲುವುದಿಲ್ಲ. ಬರುವ ದಿನಗಳಲ್ಲಿ ಸಕ್ಕರೆ ಕಾರ್ಖಾನೆಗಳಿಗೂ ಬೀಗ ಹಾಕುವುದಾಗಿರೈತಮುಖಂಡರುತಿಳಿಸಿದರು. ಇದರಿಂದಾಗಿಹೋರಾಟ ಮತ್ತಷ್ಟು ತೀವ್ರಗೊಳ್ಳುವ ಲಕ್ಷಣಗಳು ಕಾಣುತ್ತಿವೆ.

ಸರ್ಕಾರ ಹಾಗೂ ಜಿಲ್ಲಾಡಳಿತ ನಮ್ಮ ಬೇಡಿಕೆಗಳಿಗೆ ಸ್ಪಂದಿಸುತ್ತಿಲ್ಲ. ರಿಕವರಿ ಆಧಾರಿತ ಬೆಲೆಯಿಂದಾಗಿ ರೈತರಿಗೆ ಮೋಸವಾಗುತ್ತದೆ ಎಂದು ರೈತರು ತಮ್ಮ ಅಳಲು ತೋಡಿಕೊಂಡರು. ರೈತ ಸಂಘದ ಜಿಲ್ಲಾಧ್ಯಕ್ಷ ಬಸವಂತಪ್ಪಕಾಂಬಳೆ, ರೈತಮುಖಂಡರಾದಈರಪ್ಪ, ದುಂಡಪ್ಪಯರಗಟ್ಟಿ, ಮುತ್ತಪ್ಪಕೋಮಾರ, ಸುರೇಶಚಿಂಚಲಿ, ಹನಮಂತನವಾಬ, ಸುಭಾಷ ಶಿರಬೂರ ಮತ್ತಿತರರು ನೇತೃತ್ವ ವಹಿಸಿದ್ದಾರೆ.

## ನೆಡುವ ಗುರಿ: ಎಂಬಿಪಿ

ಸಾಧ್ಯವಾಗಿದ್ದು, 180ಕ್ಕೂ ಹೆಚ್ಚು ಬಗೆಯ ಗಿಡಗಳನ್ನು ನೆಡಲಾಗಿದೆ. ಇವುಗಳಿಗೆ ಹನಿ ನೀರಾವರಿ ಮತ್ತು ಸೌರವಿದ್ಯುತ್ ಮೂಲಕ ನೀರು ಪೂರೈಸಲಾಗುತ್ತಿದೆ. ವಿಜಯಪುರಕ್ಕೆ ನೀರು ಒದಗಿಸುವ ಭೂತನಾಳ ಕೆರೆಯ ಸುತ್ತಮುತ್ತ ಒಂದು ಲಕ್ಷಕ್ಕೂ ಹೆಚ್ಚು ಗಿಡಗಳನ್ನು ನೆಡಲಾಗಿದೆ. ಜೊತೆಗೆ ಮಮದಾಪುರ ಕೆರೆಯ ಪ್ರದೇಶದಲ್ಲಿ 1,600 ಎಕರೆಯಲ್ಲಿ 1.27 ಲಕ್ಷ ಗಿಡ ನೆಟ್ಟು ಹಸಿರು ಹೊದಿಕೆಯನ್ನು ಸೃಷ್ಟಿಸಲಾಗಿದೆ. ಇಲ್ಲಿ ಇನ್ನೂ 20 ಸಾವಿರಕ್ಕೂ ಹೆಚ್ಚು ಗಿಡ ನೆಡಲಾಗುವುದು. ಇದು ಉಳಿದ ಜಿಲ್ಲೆಗಳಿಗೆ ಮೇಲ್ಪಂಕ್ತಿಯಾಗುವಂತಿದೆ ಎಂದು ಪಾಟೀಲ ಹೇಳಿದ್ದಾರೆ.

## ಕರ್ನಾಟಕದಾದ್ಯಂತ ಹೈ ಅಲರ್ಟ್

★ ದೆಹಲಿಯ ಕೆಂಪು ಕೋಟೆ ಬಳಿಯಿರುವ ಮೆಟ್ರೋ ರೈಲು ನಿಲ್ದಾಣದ ಗೇಟ್ ನಂಬರ್ 1 ಬಳಿ ಸ್ಫೋಟ.
★ ಕರ್ನಾಟಕದಾದ್ಯಂತ ಕಟ್ಟೆಚ್ಚರಕ್ಕೆ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾದ ಡಾ. ಸಲೀಂ ಸೂಚನೆ.
★ ಜಿಲ್ಲಾಮಟ್ಟದಲ್ಲೂ ಕಟ್ಟೆಚ್ಚರಕ್ಕೆ ಸೂಚನೆ.

ಮೆಟ್ರೋ ಬಳಿ ಕಾರೊಂದರಲ್ಲಿ ಸ್ಫೋಟ

ಬೆಂಗಳೂರು: ದೆಹಲಿಯಲ್ಲಿ ನಿಗೂಢ ಸ್ಫೋಟ ಸಂಭವಿಸಿದ ಪರಿಣಾಮ ರಾಜ್ಯಾದ್ಯಂತ ಕಟ್ಟೆಚ್ಚರ ವಹಿಸುವಂತೆ ರಾಜ್ಯ ಪೊಲೀಸ್ ಮಹಾ ನಿರ್ದೇಶ ಡಾ. ಎಂಎ ಸಲೀಂ ಆದೇಶಿಸಿದ್ದಾರೆ. ಬೆಂಗಳೂರಿನಲ್ಲಿ ಕೆಆರ್ ಮಾರುಕಟ್ಟೆ, ಮೆಜೆಸ್ಟಿಕ್, ಸಿನಿಮಾ ಮಂದಿರಗಳು, ಮಾಲ್ ಗಳು, ದೇವಾಲಯಗಳು ಸೇರಿದಂತೆ ಎಲ್ಲಾ ಜನನಿಬಿಡ ಜಾಗಗಳಲ್ಲಿ ತೀವ್ರ ತಪಾಸಣೆ ನಡೆಸುವಂತೆ ಅವರು ಪೊಲೀಸ್ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

## ವಾರ್ಡ್ ನಂ 03 ಮತ್ತು 04 ರಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಬೀದರ್. ನ. 10 :– ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಮಂದಕನಳ್ಳಿ ಗ್ರಾಮದ ವಾರ್ಡ್ ನೋ 03 ಮತ್ತು 04 ರಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನುನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ. ಯುವನಿಧಿ: ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಶಿವಕುಮಾರ ಕುತ್ತಾಬಬಾದ್, ಸೇವದಳ ಅಧ್ಯಕ್ಷರಾದ ಮೋಹಿನ್ ಪಠಾಣ್, ಮುಖಂಡರಾದ ರಮೇಶ ಶೇಟಗೊಂಡ, ಶಿವಕುಮಾರ ಬೆಲ್ದಾರ್, ಪವನ್ ಬಾಪೂರೆ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

## ಮಕ್ಕಳ ಹಕ್ಕುಗಳ ರಕ್ಷಣೆ ಮೂಲ ಗುರಿ




ಭಾಲ್ಕಿ: ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನೂತನ ಅಧ್ಯಕ್ಷರಾಗಿ ಅಧಿಕಾರ ವಹಿಸಿ ಕೊಂಡಿರುವ ಶಶಿಧರ ಕೋಸಂಬೆ ಅವರನ್ನು ವಿವಿದ ಸಂಘ ಸಂಸ್ಥೆ, ಸಂಘಟನೆಗಳ ಪ್ರಮುಖರು ಸನ್ಮಾನಿಸಿ, ಅಭಿನಂದಿಸಿದರು.

ಪಟ್ಟಣದಲ್ಲಿ ಭಾನುವಾರ ತಾಲೂಕು ಸರಕಾರಿ ನೌಕರರ ಸಂಘ, ತಾಲೂಕು ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಜಿಲ್ಲಾ ನಮ್ಮ ಕರ್ನಾಟಕ ಸೇನೆ, ತಾಲೂಕು ಜೈ ಭಾರತ ಸೇವಾ ಸಮಿತಿ ಸೇರಿ ವಿವಿಧ ಸಂಘಟನೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಆಯೋಗದ ಅಧ್ಯಕ್ಷರನ್ನು ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಮಾತನಾಡಿ, ರಾಜ್ಯದಲ್ಲಿ ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವುದು ತಮ್ಮ ಮೂಲ ಗುರಿಯಾಗಿದೆ. ರಾಜ್ಯದಾದ್ಯಂತ ಅಂಗನವಾಡಿ, ಶಾಲಾ, ವಸತಿ ನಿಲಯ, ಆಸ್ಪತ್ರೆಗಳಿಗೆ ನಿರಂತರವಾಗಿ ಬೇಟಿ ನೀಡಿ ಮಕ್ಕಳ ಕುಂದು ಕೊರತೆ ಪರಿಶೀಲಿಸಿ ನ್ಯಾಯ ಒದಗಿಸುವ ಪ್ರಯತ್ನ ಮಾಡುತ್ತೇನೆ ಎಂದರು. ಎಲ್ಲರೂ ಆತ್ಮೀಯವಾಗಿ ನನ್ನನ್ನು ಸನ್ಮಾನಿಸಿ, ಗೌರವಿಸಿ ಪ್ರೀತಿ ತೋರುತ್ತಿರುವುದು ಮತ್ತಷ್ಟು ಕೆಲಸ ಮಾಡಲು ಸ್ಫೂರ್ತಿ ತರಿಸಿದೆ. ಪ್ರತಿಯೊಬ್ಬರಿಗೂ ನಾನು ಋಣಿ ಆಗಿದ್ದೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ರಾಜ್ಯ ಪರಿಷತ್ ಕಾರ್ಯದರ್ಶಿ ಬಸವರಾಜ ಬಂಗಾರೆ, ತಾಲೂಕು ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಉಪಾಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್, ಕಾರ್ಯದರ್ಶಿ ಅಶೋಕ ಕುಂಬಾರ, ಪ್ರಮುಖರಾದ ಪ್ರಭು ಡಿಗ್ಗೆ, ಸಂತೋಷ ವಾಡೆ, ಕೃಷ್ಣ ಲಾಂಚೇಕರ್, ಬಾಲಾಜಿ ಬೈರಾಗೆ, ಮಧುಕರ, ಸಿಆರ್‌ಪಿ ಚನ್ನಪ್ಪ ಸೇರಿದಂತೆ ಹಲವರು ಇದ್ದರು. ನಮ್ಮ ಕರ್ನಾಟಕ ಸೇನೆ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್ ಅವರು ಆಯೋಗದ ಅಧ್ಯಕ್ಷರಿಗೆ ಬಸವಣ್ಣನವರ ಫೋ–ಟೊ ನೀಡಿ ಗೌರವಿಸಿದರು. ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಪ್ರಥಮ ದರ್ಜೆ ಗುತ್ತಿಗೆದಾರ ರವೀಂದ್ರ ಚಿಡಗುಪ್ಪೆ, ತಾಲೂಕು ಬೊರವೇಲ್ಸ್ ಸಂಘದ ಅಧ್ಯಕ್ಷ ಸತೀಶ ಧರ್ಮಣ್ಣ, ವಕೀಲ ನೀಲಕಂಠ ಬಿರಾದಾರ್, ಶಿಕ್ಷಕ ಲಕ್ಷ್ಮಣ ಮೇತ್ರೆ, ಪ್ರಮುಖರಾದ ಸಂತೋಷ ಬಿಜಿ ಪಾಟೀಲ್, ಸಂಗಮೇಶ ಭೂರೆ, ಬಸವರಾಜ ಕಾರಬಾರಿ, ಜಗದೀಶ ಪಾಟೀಲ್, ಲೋಕೇಶ್ ಪಾಟೀಲ್ ಸೇರಿದಂತೆ ಹಲವರು ಇದ್ದರು.

### ಜೈ ಭಾರತ್ ಸೇವಾ ಸಮಿತಿಯಿಂದ ಗೌರವ

ತಾಲೂಕು ಜೈ ಭಾರತ್ ಸೇವಾ ಸಮಿತಿ ವತಿಯಿಂದ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರನ್ನು ಸನ್ಮಾನಿಸಲಾಯಿತು. ತಾಲೂಕು ಜೈ ಭಾರತ್ ಸೇವಾ ಸಮಿತಿ ಅಧ್ಯಕ್ಷ ಪಪ್ಪು ಪಾಟೀಲ್ ಖಾನಾಪೂರ ಅವರು ಆಯೋಗದ ಅಧ್ಯಕ್ಷರಿಗೆ ತಾಯಿ ಭಾರತಾಂಬೆ ಫೋಟೊ ನೀಡಿ ಗೌರವಿಸಿದರು. ಈ ಸಂದರ್ಭದಲ್ಲಿ ಮನ್ಮಥ ಸ್ವಾಮಿ, ವಿಜಯಕುಮಾರ ಸಜ್ಜನ್, ಸತೀಶ ಕಲಾ ಸೇರಿದಂತೆ ಹಲವರು ಇದ್ದರು.

### :CITATION:

**IN THE COURT OF THE PRL. CIVIL JUDGE AND JMFC. AT HUMNABAD**
**CRI. MISC. NO. 2675/2025**

Petitioners:
1. Suresh S/o Late. Sharnappa Age; 54 years Occu: Agriculture
2. Mahesh S/o Late. Sharnappa Age; 38 years Occu: Agriculture
3. Anil Kumar S/o Late. Sharnappa Age; 43 years
4. Shobha W/o Late Ramesh Age; 44 years Occu: Agriculture

Respondnet:

The Registrar of Birfth and Death through the Chief Officer TMC Humnabad

Sub: Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praing this Honorable court to issue Death Certificate of Mother of Petitioner No. 1 to 3 and Mother in law of petitioner no. 4 by namely : LATE. KAMALABAI W/O LAE SHARANAPPA, who was died on 30.05.2008 at Kumbar Galli, Town Humnabad Dist:Bidar. The Petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons having goft any objection in this regard, may approach to this court on 15.12.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of the court, this the 07-11-2025.

//By order of the court//
Chief Ministerial Officer
Prl. Civil Judge & JFMC Court
Humnabad

## ಪತ್ರಕರ್ತನಿಗೆ ಒಲಿದ ಕನ್ನಡ ಸೇವಾ ರತ್ನ ಪ್ರಶಸ್ತಿ




ಬೀದರ್. ನ. 10 :– ಕೇತಕಿ ಶೈಕ್ಷಣಿಕ ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಸ್ಥೆಯ ವತಿಯಿಂದ ಇಂದು ಪೂಜ್ಯ ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾಧ್ಯಮ ಕ್ಷೇತ್ರದಲ್ಲಿನ ಸೇವೆಯನ್ನು ಪರಿಗಣಿಸಿ ಬೀದರ್ ಜಿಲ್ಲೆಯ ಯುವ ಪತ್ರಕರ್ತ ದೇವರಾಜ ವನಗೇರಿ ಅವರಿಗೆ ರಾಜ್ಯ ಮಟ್ಟದ ಕನ್ನಡ ಸೇವಾ ರತ್ನ ಪ್ರಶಸ್ತಿಯನ್ನ ನೀಡಿ ಸನ್ಮಾನಿಸಲಾಯಿತು.

ಕಳೆದ ಒಂದು ವರ್ಷದಿಂದ ಸುದ್ದಿ ವಾಹಿನಿಯೊಂದರಲ್ಲಿ ಬೀದರ್ ಜಿಲ್ಲಾ ಪ್ರತಿನಿಧಿಯಾಗಿ ಕಾರ್ಯನಿರ್ವಹಿಸುತ್ತಿರುವ ದೇವರಾಜ ಅವರು, ಶೋಷಿತ ಸಮುದಾಯ ಹಾಗೂ ತಳ ಸಮುದಾಯಗಳ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಿದ್ದರೆ. ಈ ಹಿನ್ನೆಲೆಯಲ್ಲಿ ದೇವರಾಜ ಅವರಿಗೆ ಕನ್ನಡ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಹಣ್ಮು ಪಾಜಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಇನ್ಸೈಟ್ ಐಎಎಸ್ ಅಕಾಡೆಮಿ ಮುಖ್ಯಸ್ಥ ಜಿ.ಬಿ. ವಿನಯಕುಮಾರ್ ಸೇರಿ ಇನ್ನಿತರ ಗಣ್ಯರು ಪ್ರಶಸ್ತಿ ಪ್ರಧಾನ ಮಾಡಿದರು.

## ವಿವಿಧ ಪಕ್ಷಗಳ ತೊರೆದು ಬಿಎಸ್ಪಿಗೆ ಸೇರ್ಪಡೆ : ಶಂಕರ ಪುಲೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ನ 10. ಇಲ್ಲಿನ ಬಹುಜನ ಸಮಾಜ ಪಕ್ಷದ ವತಿಯಿಂದ ಹೊರವಲಯದ ಕೆ. ಬಿ. ಐ. ಬಿ. ಯಲ್ಲಿ ದಾಸ ಶ್ರೇಷ್ಠ ಶ್ರೀ ಭಕ್ತ ಕನಕದಾಸ ಅವರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕ ಅಧ್ಯಕ್ಷರಾದ ಶಂಕರ್ ಪುಲೆ ಅವರ ನೇತೃತ್ವದಲ್ಲಿ ಪಕ್ಷದ ಸಂಘಟನೆ ಬಗ್ಗೆ ಕುರಿತು ಚರ್ಚೆ ಮಾಡಲಾಯಿತು. ಕಾಂಗ್ರೆಸ್ ಹಾಗೂ ಬಿಜೆಪಿ ಪಕ್ಷದ ತೊರೆದು ಬಹುಜನ ಜನ ಪಕ್ಷಕ್ಕೆ ಸೇರ್ಪಡೆಯಾದರು. ತಿಪುರಾಂತಿನ ರಾಜಕುಮಾರ್ ತುತಾರೆ ಹಾಗೂ ಹಳ್ಳಿ) ಡಿಗಂಬರ ಶಿಂಧೆ ಹಾಗೂ ವಿಶ್ವನಾಥ್ ಸೂರ್ಯವಂಶಿ ಇವರಿಗೆ ಪಕ್ಷದಲ್ಲಿ ಬರಮಾಡಿ ಕೊಂಡು ಮಾತನಾಡಿ . ಪದಾಧಿಕಾರಿಗಳು ಸಿದ್ಧಾಂತದ ಬಗ್ಗೆ ಮತ್ತು ಪಕ್ಷ ಸಂಘಟನೆ ಮಾಡಬೇಕೆಂದರು. ಇನ್ನೂ ಪಕ್ಷ ಗಟ್ಟಿಯಾಗಿ ಸಂಘಟನೆ ಮಾಡುವ ನಿಟ್ಟಿನಲ್ಲಿ ನಾವು ಎಲ್ಲರೂ ಕೂಡಿ ಪಕ್ಷ ಬಲಿಷ್ಟ ಮಾಡಬೇಕು ಎಂದರು. ತಾಲೂಕ ಸಂಯೋಜಕರಾದ ಮಕ್ಬುಲ್ ಸಾಬ್. ಸಯೋಜ–ಕರು ದತ್ತು ಸುಂತಾಣೆ ತಾಲೂಕ ಉಪಾಧ್ಯಕ್ಷರಾದ ರಮೇಶ್ ರಾಥೋಡ್. ಇನ್ನೊಬ್ಬ ತಾಲೂಕ ಉಪಾಧ್ಯಕ್ಷರಾದ ಸಚಿನ್ ಕಾಂಬ್ಳೆ. ತಾಲೂಕ ಪ್ರಧಾನ ಕಾರ್ಯದರ್ಶಿಗಳಾದ ರವಿ ಉದಾತೆ. ತಾಲೂಕ ಕಾರ್ಯದರ್ಶಿಗಳಾದ ಮಹಾದೇವ ಗಾಯಕ್ವಾಡ್. ಚಂದ್ರಕಾಂತ ಲಂಗಡೆ. ನಗರ ಘಟಕ್ ಸಂಯೋಜ–ಕರಾದ ಮಸ್ತಾನ್ ಸಾಬ್ ಲದ್ದಾಫ್. ಹಾರಕೂಡ ಗ್ರಾಮ ಘಟಕ ಅಧ್ಯಕ್ಷರು ದಿಲೀಪ್ ಶಿರೋಳೇ ಪ್ರಶಾಂತ್ ಗುಡ್ಡೆ ಸಾಗರ. ಯಮಹಾನ ನೀಲಕಂಟ. ಗ್ರಾಮ ಘಟಕ ಅಧ್ಯಕ್ಷರು ಅವಿನಾಶ ಗಾಯಕ್ವಾಡ್. ಅಂದ್ರೋಳ (ಆರ್) ಗ್ರಾಮ ಘಟಕ ಅಧ್ಯಕ್ಷರು ಮಾರುತಿ ಮೇಕಾಳೆ ಹಾಗೂ ಪಕ್ಷದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

## ನೀಲಮ್ಮನ ಬಳಗದ ಅಧ್ಯಕ್ಷೆಯಾಗಿ ವಿಜಯಲಕ್ಷ್ಮಿ ಭೀಮಣ್ಣ ರಾಜೋಳೆ ಆಯ್ಕೆ.



ಮಲ್ಲಮ್ಮನುಡಿ ವಾರ್ತೆ ಬಸವಕಲ್ಯಾಣ :– ನ 10. ಹುಲಸೂರು ತಾಲೂಕಿನ ಗೋರ್ಟಾ (ಬಿ) ಗ್ರಾಮದ ನೀಲಮ್ಮನ ಬಳಗದ ಅಧ್ಯಕ್ಷೆಯಾಗಿ ವಿಜಯಲಕ್ಷ್ಮಿ ಭೀಮಣ್ಣ ರಾಜೋಳೆಯವರನ್ನು ನೇಮಕ ಮಾಡಿ ಲಿಂಗಾಯತ ಮಹಾಮಠದ ಪೂಜ್ಯಶ್ರೀ ಪ್ರಭುದೇವ ಮಹಾಸ್ವಾಮಿಜಿ ಮಾತನಾಡಿ

ಸಾಧನೆಮಾಡಬೇಕಾದರೆಮನೆತೊರೆದು ಹೋಗಬೇಕಾಗಿಲ್ಲಗುಡ್ಡಗಾಡುಗಳಲ್ಲಿ ನಿಂತು ತಪಸ್ಸು ಮಾಡಬೇಕಾಗಿಲ್ಲ ಸಂಸಾರದಲ್ಲಿ ಇದ್ದುಕೊಂಡೇ ಸದ್ಗತಿಯ ಪಥವನ್ನು ತೋರಿಸಿಕೊಟ್ಟವರು. ನೀಲಾಂಬಿಕಾತಾಯಿಯ ಆದರ್ಶ ಸಮಾಜದಕ್ಕೆ ತಿಳಿಸಬೇಕು ಎಂಬ ಸದುದ್ದೇಶದಿಂದ ನೀಲಮ್ಮನ ಬಳಗ ಹುಟ್ಟು ಹಾಕಿದವರು

ಲಿಂ. ಪೂಜ್ಯ ಶ್ರೀ ಅಕ್ಕ ಅನ್ನಪೂರ್ಣತಾಯಿಯರು.

ಅಕ್ಕನವರ ಸಂಕಲ್ಪದಂತೆ ಇಂದು ನಾಡಿನಾದ್ಯಂತ ನೀಲಮ್ಮನ ಬಳಗ ಪ್ರಾರಂಭಿಸಲಾಗಿದೆ ಎಂದು ತಿಳಿಸಿದರು.

ಅಭಿನಂದನೆ ಸ್ವೀಕರಿಸಿದ ವಿಜಯಲಕ್ಷ್ಮಿ ರಾಜೋಳೆ ಮಾತನಾಡಿ

ಪೂಜ್ಯಶ್ರೀ ಪ್ರಭುದೇವ ಮಹಾಸ್ವಾಮಿಜಿ ಕೊಟ್ಟಿರುವ ಜವಾಬ್ದಾರಿ ಶಿರಸಾವಹಿಸಿ ಪಾಲಿಸುತ್ತೇನೆ. ಸ್ಥಾನ ದೊರಕಿದ್ದು ದೊಡ್ಡದಲ್ಲ ಆ ಸ್ಥಾನಕ್ಕೆ ಯೋಗ್ಯ ರೀತಿಯಿಂದ ಕಾರ್ಯ ಮಾಡುತ್ತಿರುವರು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು.

## ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರಧಾನ



ಹುಮನಾಬಾದ:ಶ್ರೀ ಕೇತಕಿ ಶೈಕ್ಷಣಿಕ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ರಿ ಬೀದರ್ ಹಣ್ಮು ಪಾಜಿ ಗೆಳೆಯರ ಬಳಗ ವತಿಯಿಂದ ಹಮ್ಮಿಕೊಂಡಿರುವ 70ನೇ ಕರ್ನಾಟಕ ರಾಜ್ಯೋತ್ಸವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮತ್ತು ಜಿ ಬಿ ವಿನಯ್ ಕುಮಾರ್ ಇನ್ ಐಎಎಸ್ ಸಂಸ್ಥಾಪಕ ನಿರ್ದೇಶಕರು ಮತ್ತು ಸ್ವಾಭಿಮಾನಿ ಬಳಗದ ಸಂಸ್ಥಾಪಕ ಬಳಗದ ರಾಜ್ಯಾಧ್ಯಕ್ಷರ ನೇತೃತ್ವದಲ್ಲಿ ರಾಜ್ಯ ಮಟ್ಟದ ಕನ್ನಡ ಸೇವಾ ರತ್ನ ಪ್ರಶಸ್ತಿ ಪುರಸ್ಕೃತರಾದ ಶೈಕ್ಷಣಿಕ ಕ್ಷೇತ್ರದಲ್ಲಿ ಮೋಹನ್ ಸಿಂಗ್ ರಾಜಪೂತ್ ಹುಡುಗಿ, ಶ್ರೀಮತಿ ಬಾಯಿರೆಡ್ಡಿ. ಬಿ. ಲಿಂಗಾರೆಡ್ಡಿ, ಸಮಾಜ ಕ್ಷೇತ್ರ ಅರವಿಂದ್ ಜೋಗಿರೆ, ಹಾಗೂ ಪ್ರಶಾಂತ್ ರೆಡ್ಡಿ ಜವಳಗಿ ಇವರುಗಳನ್ನು ಪ್ರಶಸ್ತಿ ನೀಡಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಹುಮನಾಬಾದ್‌ನ ಆಶ್ರಯ ದೀಪ ಚಾರಿಟೇಬಲ್ ಟ್ರಸ್ಟ್ (ರಿ) ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ, ಸದಸ್ಯರಾದ ಯುವರಾಜ್ ಎಸ್ ಐಹೋಳ್ಳಿ, ಸಾಮಾಜಿಕ ಕಾರ್ಯಕರ್ತ, ಸಾಮಾಜಿಕ ಕಾರ್ಯಕರ್ತರಾದ ಮಲ್ಲೇಶ್ ಮಿತ್ರ, ಶಶಿ ಜಮಾದಾರ್, ನಾಗೇಶ್ ರೆಡ್ಡಿ ಜಗದೀಶ್ ರೆಡ್ಡಿರವರು ಹರ್ಷವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದರು.

# ಸರ್ಕಾರಿ ಕಚೇರಿಯಲ್ಲಿ ಅಭಿಲೇಖಾಲಯ ಹೃದಯವಿದ್ದಂತೇ: ಡಿಡಿಪಿಐ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸರ್ಕಾರಿ ಕಚೇರಿಯ ಎಲ್ಲ ವಿಭಾಗಗಳಿಗೂ 'ಅಭಿಲೇಖಾಲಯ' ಹೃದಯ ಇದ್ದಂತೆ. ಕಡತಗಳ ಕೋಣೆಯನ್ನು ಜೀವಂತವಾಗಿ ಇರಿಸಿಕೊಂಡರೆ ನೌಕರರನ ಕೆಲಸವನ್ನು ರಕ್ಷಿಸುತ್ತದೆ. ಮಾಹಿತಿದಾರರಿಗೆ ಕಡತ ಕಾಣೆಯಾಗಿದೆ, ಸಿಗುತ್ತಿಲ್ಲ ಎಂದು ನೆಪ ಹೇಳುವಂತಿಲ್ಲ. ಕಡತ ಕಾಣೆಯಾಗಿದ್ದು ಬೇರೆಯವರಿಗೆ ಗೊತ್ತಾದರೆ ಕೇಸ್ ವರ್ಕ್‌ನಿಂದ ಕಚೇರಿ ಮುಖ್ಯಸ್ಥರವರೆಗೂ ದಂಡ ವಿಧಿಸುತ್ತಾರೆ ಡಿಡಿಪಿಐ ಸಿ.ಎಸ್. ಮುದೋಳ್ ಹೇಳಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಶನಿವಾರ ರಾಜ್ಯ ಶಾಲಾ ಶಿಕ್ಷಣ ಇಲಾಖೆಯ ಬೋಧಕೇತರ ನೌಕರರ ಸಂಘದ ಜಿಲ್ಲಾ ಘಟಕ ಆಯೋಜಿಸಿದ್ದ ನೂತನ ಪದಾಧಿಕಾರಿಗಳ ಪದಗ್ರಹಣ, ನೌಕರರ ಪ್ರತಿಭಾನ್ವಿತ ಮಕ್ಕಳಿಗೆ ಹಾಗೂ ನಿವೃತ್ತರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಚೇರಿಯ ಕಡತಗಳನ್ನು ಸರಿಯಾಗಿ ನಿರ್ವಹಣೆ ಮಾಡದೆ ದಂಡ ಪಾವತಿ ಮಾಡುವುದು ಕರ್ತವ್ಯ ಲೋಪ ಹಾಗೂ ಶಿಕ್ಷೆಗೆ ಸಮಾನವಾಗಿದ್ದು, ಕಡತಗಳ ನಿರ್ವಹಣೆಯನ್ನು ಗಂಭೀರವಾಗಿ ತೆಗೆದುಕೊಳ್ಳಬೇಕೆಂದರು.

ಹೊಟ್ಟೆ ಕಿಚ್ಚಿನ ಪ್ರವೃತ್ತಿಯಿಂದ ಪ್ರತಿಯೊಬ್ಬರೂ ದೂರು ಇರಬೇಕು. ಕಚೇರಿಯ ವಿಚಾರಗಳು ಹೊರಗಡೆ ಹೋಗುವಂತೆ ಮಾಡಿ, ಆರ್‌ಟಿಐ ಕಾರ್ಯಕರ್ತರನ್ನು ಬೆಳೆಸಿ, ಅವರಿಗೆ ನೀವೇ ಅನ್ನದಾತರೂ ಆಗುತ್ತಿದ್ದೀರಿ' ಎಂದು ಹೇಳಿದರು.

'ನಾವೆಲ್ಲರೂ ಸರ್ಕಾರಿ ನೌಕರರಾಗಿದ್ದು, ಸಂವಿಧಾನದ ಆರ್ಟಿಕಲ್ 306 ಅಡಿ ಬರುತ್ತೇವೆ. ದೇಶದ ಯಾವುದೇ ಮೂಲೆಗೆ ಹೋದರೂ ಸಂವಿಧಾನದ ಕಟ್ಟುಪಾಡುಗಳಿಗೆ ಬಾಧ್ಯರಾಗಿರುತ್ತೇವೆ. ಹೀಗಾಗಿ, ನಾವು ನಮ್ಮ ಕೆಲಸವನ್ನು ಕಾಳಜಿ ಮತ್ತು ಜವಾಬ್ದಾರಿಯಿಂದ ನಿರ್ವಹಿಸಬೇಕು. ಬೆಂಗಳೂರು ಉತ್ತರ ವಲಯದ ಡಿಡಿ ಕಚೇರಿಯ ಲೆಕ್ಕದಲ್ಲಿ 78 ಲಕ್ಷ ವ್ಯತ್ಯಾಸವಾಗಿತ್ತು. ಲೋಕಾಯುಕ್ತರವರೆಗೆ ಹೋಗಿದ್ದು, ಕೇಸ್ ವರ್ಕ್‌ರನಿಂದ ಹಿಡಿದು ಮೇಲಾಧಿಕಾರಿವರೆಗೆ ಅಷ್ಟೂ ಹಣ ವಸೂಲಿ ಮಾಡುವ ಆದೇಶವಾಗಿದೆ' ಎಂದು ತಿಳಿಸಿದರು.

'ಕೆಲವು ನೌಕರರಿಗೆ ಕಡತಗಳನ್ನು ಹೇಗೆ ಬರೆಯಬೇಕು, ಫೈಲ್ ಅನ್ನು ಯಾವ ರೀತಿ ಕಟ್ಟಬೇಕು ಎಂಬುದು ಸಹ ಗೊತ್ತಿಲ್ಲ. ಕಡತಗಳನ್ನು ಬರೆಯುವಾಗ ಕಾನೂನು, ನಿಯಮಗಳನ್ನು ಉಲ್ಲೇಖಿಸುವುದನ್ನು ಕಲಿಯಬೇಕು. ಅದು ನಮ್ಮ ಕೆಲಸದ ಒತ್ತಡವನ್ನು ತಗ್ಗಿಸುತ್ತದೆ. ಯಾರೋ ಹೇಳಿದ್ದಕ್ಕೆ ಬರೆದು ಕೆಲಸ ಮಾಡಿದರೆ ನೀವೇ ಹೊಣೆಗಾರರು ಆಗುತ್ತೀರಿ' ಎಂದು ಎಚ್ಚರಿಸಿದರು.

ಸಂಘದ ರಾಜ್ಯ ಅಧ್ಯಕ್ಷ ನವೀನ್ ಎಸ್.ಆರ್. ಮಾತನಾಡಿ, 'ಬೋಧಕೇತರ ವೃಂದದ ಬಗ್ಗೆ ಯಾರೂ ಗಮನ ಹರಿಸುತ್ತಿಲ್ಲ. 1967ರಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳು ಪರಿಷ್ಕರಣೆ ಆಗಬೇಕು. ಪರಿಷ್ಕರಣೆ ಆಗದೆ ಇದ್ದರೆ 'ಡಿ' ಗ್ರೂಪ್ ನೌಕರ 'ಡಿ' ನೌಕರನಾಗಿ, ಎಸ್‌ಡಿಎ ನೌಕರ ಎಸ್‌ಡಿಎ ನೌಕರನಾಗಿ ನಿವೃತ್ತ ಆಗುತ್ತಿದ್ದಾನೆ. ಬಡ್ತಿ ಸಹ ಸಿಗುತ್ತಿಲ್ಲ' ಎಂದರು.

ಕಾರ್ಯಕ್ರಮದಲ್ಲಿ ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತ್ಯಧಿಕ ಅಂಕಗಳಿಸಿದ ವಿದ್ಯಾರ್ಥಿಗಳು, ನಿವೃತ್ತ ನೌಕರರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ರಾಜ್ಯ ಉಪಾಧ್ಯಕ್ಷ ಆದೆಪ್ಪ ಬಾಗ್ಲಿ, ಬಿಇಒಗಳಾದ ವೀರಪ್ಪ ಕನ್ನಳಿ, ಯಮನೂರಪ್ಪ ಸಿದ್ದಪ್ಪ ಹರಗಿ, ಯಲ್ಲಪ್ಪ ಕಾಡ್ಲೂರ, ಅಧಿಕಾರಿಗಳಾದ ಮಲ್ಲಿಕಾರ್ಜುನ ಪೋಸ್ತಿ, ಚನ್ನಬಸರೆಡ್ಡಿ, ಲಕ್ಷ್ಮಿಕಾಂತರೆಡ್ಡಿ ಸೇರಿ ಹಲವರು ಉಪಸ್ಥಿತರಿದ್ದರು.

# ಬಾಲ ಭವನದಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ ಕಾರ್ಯಕ್ರಮ ಅಂಗವಾಗಿ ವಿವಿಧ ಸ್ಪರ್ಧೆಗಳ ಆಯೋಜನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನ10: ರಾಜ್ಯ ಬಾಲ ಭವನ ಸೊಸೈಟಿ, ಬೆಂಗಳೂರು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲ ಭವನ ಸೊಸೈಟಿ, ಯಾದಗಿರಿ ಇವರ ಸಹಯೋಗದಲ್ಲಿ ಜಿಲ್ಲೆಯಲ್ಲಿರುವ 09-16 ವರ್ಷದ ಮಕ್ಕಳಿಗೆ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ ಕಾರ್ಯಕ್ರಮ ಪ್ರಯುಕ್ತ ಮಕ್ಕಳಿಗೆ ವಿವಿಧ ರೀತಿಯ ಸ್ಪರ್ಧೆಗಳಾದ. ಸೃಜನಾತ್ಮಕ ಕಲೆ (ಚಿತ್ರಕಲೆ, ಜೇಡಿ ಮಣ್ಣಿನ ಕಲೆ, ಕರಕುಶಲೆ), ಸೃಜನಾತ್ಮಕ ಬರವಣಿಗೆ (ಕಥೆ, ಕವನ, ಪ್ರಬಂಧ), ಸೃಜನಾತ್ಮಕ ಪ್ರದರ್ಶನ ಕಲೆ (ಶಾಸ್ತ್ರೀಯ, ಜಾನಪದ ನೃತ್ಯ, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ), ವಿಜ್ಞಾನದಲ್ಲಿ ನೂತನ ಅವಿಷ್ಕಾರ ಸ್ಪರ್ಧೆಗಳನ್ನು ದಿನಾಂಕ 07-11-2025 ರಂದು ಜಿಲ್ಲಾ ಬಾಲಭವನ ಸಭಾಂಗಣ ಯಾದಗಿರಿಯಲ್ಲಿ ಹಮ್ಮಿಕೊಳ್ಳಲಾಯಿತು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಶ್ರೀ ತಿಪ್ಪಣ್ಣ ಸಿರಸಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳ ದಿನಾಚರಣೆ ಕಾರ್ಯಕ್ರಮ ಅಂಗವಾಗಿ ಪ್ರತಿವರ್ಷದಂತೆ ಜಿಲ್ಲೆಯಲ್ಲಿ ಜಿಲ್ಲಾ ಬಾಲ ಭವನವತಿಯಿಂದ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳುತ್ತಿದ್ದು, ಮಕ್ಕಳಿಗೆ ಈ ದಿನಾಚರಣೆಯ ಸುಭಾಶಯಗಳನ್ನು ತಿಳಿಸಿದರು.

ಇಂದು, ನಾವು ನಿಜವಾಗಿಯೂ ವಿಶೇಷವಾದ ದಿನವನ್ನು ಆಚರಿಸಲು ಇಲ್ಲಿ ಸೇರಿದ್ದೇವೆ. ಮಕ್ಕಳ ದಿನ ಇದು ನಾವು ಬಾಲ್ಯದ ಸಾರ, ಮುಗ್ಧತೆಯ ಶುದ್ಧತೆ ಮತ್ತು ಪ್ರತಿ ಮಗುವಿನೊಳಗೆ ಹೊಂದಿರುವ ಮಿತಿಯಿಲ್ಲದ ಸಾಮರ್ಥ್ಯವನ್ನು ಗುರುತಿಸಿ ಗೌರವಿಸುವ ದಿನವಾಗಿದೆ. ಪ್ರತಿ ಮಕ್ಕಳಲ್ಲಿ ಕೌಶಲ್ಯ ಹೆಚ್ಚಿಸಲು ಮನೆಯಲ್ಲಿ ಪೋಷಕರು ಸಹಕಾರ ನೀಡಬೇಕೆಂದರು.

ಜಿಲ್ಲಾ ಮಟ್ಟದಿಂದ ಆಯ್ಕೆಯಾದ ಮಕ್ಕಳನ್ನು ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ ಎಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ವೀರಪ್ಪ ಕನ್ನಳ್ಳಿ ಅವರು ಮಾತನಾಡಿ, ಜಿಲ್ಲಾ ಬಾಲಭವನ ಮಕ್ಕಳ ಪ್ರತಿಭೆಯನ್ನು ಗುರುತಿಸಲು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತಿದ್ದು, ಅದರಲ್ಲಿ ಈ ಒಂದು ಮಕ್ಕಳ ದಿನಾಚರಣೆ ಕಾರ್ಯಕ್ರಮ ಪ್ರಯುಕ್ತ ವಿವಿಧ ಸ್ಪರ್ಧೆಗಳಿಗಾಗಿ ಗ್ರಾಮ ಮತ್ತು ತಾಲ್ಲೂಕುಗಳ ವಿವಿಧ ಶಾಲೆಗಳಿಂದ ಬಂದಿರುವುದು ತುಂಬಾ ಸಂತೋಷ ತಂದಿದೆ. ನಿಮ್ಮ ಆಸಕ್ತಿಯನ್ನು ಹೀಗೆ ಮುಂದುವರೆಸಿ, ಜಿಲ್ಲಾ ಮಟ್ಟದಿಂದ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಮಕ್ಕಳಿಗೆ ಪ್ರೋತ್ಸಾಹ ನೀಡಿದರು.

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಶ್ರೀ ದಿನೇಶಕುಮಾರ್ ಹಾಗೂ ಸದಸ್ಯರಾದ ಮಹ್ಮದ ಕಲಿಮೋದಿನ, ಶ್ರೀ ದೇವಿಂದ್ರಪ್ಪ ಹೀಟೆ ಶಿಕ್ಷಣ ಸಂಯೋಜಕು, ಶ್ರೀ ಚಂದ್ರಕಾಂತ್ ಛಲವಾಧಿ ಪರಿವೀಕ್ಷಣಾಧಿಕಾರಿಗಳು, ಶ್ರೀ ಮೇಘನಾಥ ಬೆಳ್ಳಿ ಶಿಕ್ಷಕರಾದ, ಶ್ರೀ ಸಾಬಣ್ಣ ದೇಸಾಯಿ, ಶ್ರೀ ಚನ್ನರೆಡ್ಡಿ ಪಾಟೀಲ್ ಹಾಗೂ ಜಿಲ್ಲಾ ಬಾಲ ಭವನ ಜಿಲ್ಲಾ ಕಾರ್ಯಕ್ರಮ ಸಂಯೋಜಕ. ಶ್ರೀ ಅನಿಲಕುಮಾರ. ಶ್ರೀ ದೇವಿಂದ್ರಪ್ಪ ನಾಯಕ್ ಮಕ್ಕಳ ಜಾಗೃತಿ ಸಂಸ್ಥೆ ಹಾಗೂ ಕಾರ್ಯಕ್ರಮದಲ್ಲಿ ವಿವಿಧ ಶಾಲೆಯ ಶಿಕ್ಷಕರು, ಮತ್ತು ಸಾರ್ವಜನಿಕರು ಇನ್ನಿತರರು ಭಾಗಿಯಾಗಿದ್ದರು. 500ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು, ಮಕ್ಕಳಿಗೆ ಪ್ರಶಸ್ತಿ ಪತ್ರ ಬಹುಮಾನ ವಿತರಿಸಲಾಯಿತು.

# ದತ್ತು ಮಾಸಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 10, (ಕ.ವಾ) : 2025ರ ನವೆಂಬರ್ ಮಾಹೆ ದತ್ತು ಮಾಸಾಚರಣೆ ಪ್ರತಿ ವರ್ಷದಂತೆ ಈ ವರ್ಷವೂ ಸಹ ವಿಶೇಷ ಚೇತನ ಮಕ್ಕಳ ದತ್ತು ಪ್ರಕ್ರಿಯೇ? ಎಂಬ ಘೋಷ ವಾಕ್ಯದೊಂದಿಗೆ ಈ ವರ್ಷ ದತ್ತು ಮಾಸಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ನಿರ್ಮಲಾ ಎಚ್.ಸುರಪುರ ಅವರು ತಿಳಿಸಿದ್ದಾರೆ.

ಪ್ರತಿ ಮಗು ಕೌಟುಂಬಿಕ ವ್ಯವಸ್ಥೆಯಲ್ಲಿ ಬೆಳೆಯುವುದು ಪ್ರತಿಯೊಂದು ಮಗುವಿನ ಹಕ್ಕು, ಮಗುವಿಗೆ ಅವಶ್ಯವಿರುವ ಪ್ರೀತಿ ಮತ್ತು ವಾತ್ಸಲ್ಯ ಕುಟುಂಬದ ವಾತವರಣವನ್ನು ಕಲ್ಪಿಸುತ್ತದೆ. ಈ ನಿಟ್ಟಿನಲ್ಲಿ ಅನಾಥ, ಪರಿತ್ಯಕ್ತ ಹಾಗೂ ಒಪ್ಪಿಸಲ್ಪಟ್ಟ ಮಕ್ಕಳ ಪುನರ್ವಸತಿಗೆ ನೆರವಾಗುವುದು ಮಕ್ಕಳ ರಕ್ಷಣಾ ನಿರ್ದೇಶನಾಲಯದ ಯೋಜನೆಯ ಉದೇಶವಾಗಿದೆ. ವಿಶೇಷ ಚೇತನ ಮಕ್ಕಳ ದತ್ತು ಪ್ರಕ್ರಿಯೇ? ಎನ್ನುವ ಘೋಷವಾಕ್ಯದೊಂದಿಗೆ ಈ ವರ್ಷವು ನವೆಂಬರ್ ತಿಂಗಳನ್ನು ಅಂತರಾಷ್ಟ್ರೀಯ ದತ್ತು ಮಾಸಾಚರಣೆಯನ್ನಾಗಿ ಆಚರಿಸಲಾಗುತ್ತಿದೆ.

ಪೋಷಕತ್ವಯೋಜನೆ, ಕಾನೂನು ಬದ್ದ ದತ್ತು ಹಾಗೂ ಕಾನೂನು ಬಾಹಿರ ಅಪರಾಧ, ಮಕ್ಕಳ ಮಾರಾಟ ನಿಷೇಧ, ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲ ನ್ಯಾಯ ಕಾಯ್ದೆ-2015 ಸೆಕ್ಷನ್ 60, 81 ರನ್ವಯ 5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ 1 ಲಕ್ಷ ರೂ.ಗಳ ವರೆಗೆ ದಂಡ ವಿಧಿಸಬಹುದು. ಈ ಅಪರಾಧದಲ್ಲಿ ಆಸ್ಪತ್ರೆಯವರು ಶಾಮಿಲಾಗಿದ್ದರೆ ಶಿಕ್ಷೆಯ ಅವಧಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆ. ಸಾರ್ವಜನಿಕರ ಗಮನಕ್ಕೆ ಅನಾಥ, ಪರಿತ್ಯಕ್ತ, ಒಪ್ಪಿಸಲ್ಪಟ್ಟ ಹಾಗೂ ಕಾನೂನು ಬಾಹಿರವಾಗಿ ಮಕ್ಕಳನ್ನು ಸಾಕುತ್ತಿದ್ದಲ್ಲಿ ಮಾಹಿತಿ ಸರಕಾರಿ ವಿಶೇಷ ದತ್ತು ಸಂಸ್ಥೆ ಅಥವಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಛೇರಿ (ಆಅಕಗ), ಮಕ್ಕಳ ಸಹಾಯವಾಣಿ 1098/112ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನಕದಾಸರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಕನಕದಾಸರನ್ನು ನಾವು ಪೂಜ್ಯ ಸಂತ ಮತ್ತು ತತ್ವಜ್ಞಾನಿಯಾಗಿ ನೋಡುತ್ತೇವೆ. ಕನಕದಾಸರ ಜೀವನ ಬೋಧನೆಗಳು, ಕೀರ್ತನೆಗಳು ಇಂದಿಗೂ ಲಕ್ಷಾಂತರ ಜನರಿಗೆ ಮಾರ್ಗದರ್ಶನ ಹಾಗೂ ಸ್ಫೂರ್ತಿಯಾಗಿದೆ. ದಾಸಶ್ರೇಷ್ಠರೆಂದೇ ಕರೆಯಲಾಗುವ ಶ್ರೀಕೃಷ್ಣಪರಮಾತ್ಮನ ಪರಮ ಭಕ್ತರಾದ ಕನಕದಾಸರ ಜನ್ಮ ದಿನವನ್ನು ನಾವು ಕನಕದಾಸ ಜಯಂತಿ ಎಂದು ಆಚರಿಸುತ್ತೇವೆ. ಎಂದು ಶಾಲೆಯ ಮುಖ್ಯ ಗುರುಗಳಾದ ಪೂರ್ಣಚಂದ್ರ ಕಟ್ಟಿಮನಿವರು ವಿದ್ಯಾರ್ಥಿಗಳಿಗೆ ಹೇಳಿದರು.

ನಗರದ ಆದಿಲ್ ಪುರದಲ್ಲಿ ಇರುವ ಆದರ್ಶ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕನಕದಾಸರ ಭಾವಚಿತ್ರಕ್ಕೆ ಫಲಪುಷ್ಪಸಮರ್ಪಿಸಿ ಮಾಲಾರ್ಪಣೆ ಮಾಡುವವರೊಂದಿಗೆ ಜಯಂತಿ ನೆರವೇರಿಸಿ ಮಾತನಾಡಿದ. ಅವರು ಕನಕದಾಸರು ಓರ್ವ ಮಹಾನ್ ಹರಿದಾಸ ಸಂತ, ತತ್ವಜ್ಞಾನಿ ಹಾಗೂ ಕೀರ್ತನಾಗಾರರಾಗಿದ್ದರು. ಅವರು ಕರ್ನಾಟಕದಲ್ಲಿ ಭಕ್ತಿ ಚಳುವಳಿಯ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಕನಕದಾಸರ ಕೀರ್ತನೆಗಳು ಎಂದು ಕರೆಯಲ್ಪಡುವ ಅವರ ಕೀರ್ತನೆಗಳು

, ಭಕ್ತಿ ಸಂಯೋಜನೆಗಳು ಸಮಾಜವನ್ನು ಪ್ರೇರೇಪಿಸುತ್ತಿವೆ ಮತ್ತು ಉನ್ನತಿಗೊಳಿಸುತ್ತಿವೆ. ಆದರೆ ಕನಕದಾಸರ ಜೀವನವನ್ನು ಬದ್ಧತೆ, ಸಾಮಾಜ ಸುಧಾರಣೆ ಮತ್ತು ಸಾಹಿತ್ಯ ಪ್ರತಿಭೆಯ ಸಾಕಾರವಾಗಿ ನೋಡಲಾಗುತ್ತದೆ.

ಕನಕದಾಸರ ಜಯಂತಿಯನ್ನು ಅವರ ಜೀವನ ಮತ್ತು ಅವರ ಕೊಡುಗೆಯನ್ನು ಗೌರವಿಸಲು ಆಚರಿಸಲಾಗುತ್ತದೆ. ಸಮಾಜಕ್ಕೆ ಕೊಡುಗೆಯಾಗಿ ನೀಡಿದ್ದಾರೆ. ಅವುಗಳಲ್ಲಿ ಹೆಚ್ಚಿನವು ಶ್ರೀಕೃಷ್ಣನಿಗೆ ಸಮರ್ಪಿತವಾದುದ್ದಾಗಿದೆ. ಭಕ್ತಿ ಸಂಯೋಜನೆಗಳಲ್ಲದೆ, ಕನಕದಾಸರು ವಿಭಿನ್ನತಾತ್ವಿಕಕೃತಿಗಳನ್ನು ಬರೆದಿದ್ದಾರೆ . ಅಳಿವಿನ ಅಂಚಿನಲ್ಲಿರುವ ಸಮುದಾಯಗಳ ಹಕ್ಕುಗಳನ್ನು ಪ್ರತಿಪಾದಿಸಿದವು, ಇದು ಕರ್ನಾಟಕದಲ್ಲಿ ಭಕ್ತಿ ಚಳುವಳಿಯ ಮೇಲೆ ಪ್ರಭಾವ ಬೀರಿತು, ಕನಕದಾಸರ ಕೃಷ್ಣ ಭಕ್ತಿ

ಕನಕದಾಸರೆಂದಾಕ್ಷಣ ಮೊದಲು ನಮಗೆ ನೆನಪಿಗೆ ಬರೋದು ಅವರಿಗೆ ಶ್ರೀಕೃಷ್ಣನ ಬಗ್ಗೆ ಇದ್ದ ಭಕ್ತಿ ಮತ್ತು ಪ್ರೀತಿ. ಅವರು ಕೃಷ್ಣನನ್ನು ತಮ್ಮ ಗುರು ಮತ್ತು ದೈವಿಕ ಪ್ರೀತಿಯ ಸಾರಾಂಶವಾಗಿ ನೋಡಿದರು. ಅವರು ತಮ್ಮ ಜೀವನವನ್ನು ಸಂಪೂರ್ಣವಾಗಿ ಸಂಗೀತ ಮತ್ತು ಆಧ್ಯಾತ್ಮಿಕತೆಗೆ ಮೀಸಲಿಟ್ಟ ಶ್ರೀಕೃಷ್ಣನ ಭಕ್ತರ ಗುಂಪಾದ ದಾಸಕೂಟದ ಪ್ರಮುಖ ಸದಸ್ಯರಾದರು. ಸಾಕ್ಷಾತ್ ಶ್ರೀಕೃಷ್ಣಪರಮಾತ್ಮನೇ ಕನಕದಾಸರ ಭಕ್ತಿಗೆ ಮೆಚ್ಚಿ ಒಂದು ಕಿಂಡಿಯ ಮೂಲಕ

ದರ್ಶನವನ್ನು ನೀಡಿದ್ದನು. ಎಂದು ಕನಕದಾಸರ ಜೀವನ ಚರಿತ್ರೆ ಮಕ್ಕಳಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕೀಯರಾದ ಹರಿಫ್ ಬೇಗಂ, ಅನಿಸ್ ಫಾತಿಮಾ, ಸಹನಾ ಸುಲ್ತಾನ್, ಉಮಾ ಸಿ ಕಟ್ಟಿಮನಿ, ಶೀಪಾ ಜುನೆಯದಿ.

# ಜಾಗತಿಕ ಲಿಂಗಾಯತ ಮಹಾಸಭಾದಿಂದ ಪ್ರದರ್ಶನ ಆಯೋಜನೆ ಕಲ್ಯಾಣ ಕ್ರಾಂತಿ ನೆನಪಿಸಿದ ನಾಟಕ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕವು ಇಲ್ಲಿಯ ಐ.ಎಂ.ಎ. ಹಾಲ್‌ನಲ್ಲಿ ಭಾನುವಾರ ಸಂಜೆ ಆಯೋಜಿಸಿದ್ದ ಶಿವಶರಣ ಹರಳಯ್ಯ ನಾಟಕ ಪ್ರದರ್ಶನ 'ಕಲ್ಯಾಣ ಕ್ರಾಂತಿ'ಯನ್ನು ನೆನಪಿಸಿತು.

12ನೇ ಶತಮಾನದಲ್ಲಿ ನಡೆದಿದ್ದ ಕಲ್ಯಾಣ ಕ್ರಾಂತಿಯಲ್ಲಿ ಶಿವಶರಣ ಹರಳಯ್ಯನವರು ವಹಿಸಿದ ಪಾತ್ರ, ಬಸವಣ್ಣನವರು ಮಾನವ ಘನತೆ ಎತ್ತಿ ಹಿಡಿದ ಪ್ರಸಂಗ ಇತ್ಯಾದಿಗಳನ್ನು ಕಲಾವಿದರು ಕಣ್ಣಿಗೆ ಕಟ್ಟುವ ಹಾಗೆ ಪ್ರಸ್ತುತಪಡಿಸಿ ಸಭಿಕರನ್ನು ಮಂತ್ರಮುಗ್ಧಗೊಳಿಸಿದರು.

90 ನಿಮಿಷಗಳ ನಾಟಕ ಬಸವಾದಿ ಶರಣರ ಕಾಲಕ್ಕೆ ಕರೆದೊಯ್ದಿತು. ನಾಟಕದ ಪ್ರಸಂಗಗಳು ನೆರೆದವರ ಕಣ್ಣಾಲಿಗಳನ್ನು ತೇವಗೊಳಿಸಿದವು.

ಮನೋಜ್ಞವಾಗಿ ನಾಟಕ ಪ್ರದರ್ಶಿಸಿದ ಸಿರಿಗೇರಿಯ ಧಾತ್ರಿ ರಂಗ ಸಂಸ್ಥೆಯ ಕಲಾವಿದರಿಗೆ ಪ್ರೇಕ್ಷಕರು ಕಾಣಿಕೆ ಕೊಟ್ಟು, ಚಪ್ಪಾಳೆ ತಟ್ಟಿ, ಪ್ರೋತ್ಸಾಹಿಸಿದರು.

ಸಮಾನತೆಗಾಗಿ ಕಲ್ಯಾಣ ಕ್ರಾಂತಿ: ಜಗತ್ತಿನಲ್ಲಿ ಆಸ್ತಿ, ಅಧಿಕಾರಕ್ಕಾಗಿ ಬಹಳಷ್ಟು ಕ್ರಾಂತಿಗಳು ನಡೆದಿವೆ. ಆದರೆ, ಸಮಾನತೆಗಾಗಿ ನಡೆದದ್ದು ಕಲ್ಯಾಣ ಕ್ರಾಂತಿ ಮಾತ್ರ ಎಂದು ನಾಟಕ ಪ್ರದರ್ಶನವನ್ನು ಉದ್ಘಾಟಿಸಿದ ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ ನುಡಿದರು.

ಕಲ್ಯಾಣ ಕ್ರಾಂತಿ ಸಮಾನತೆಯನ್ನು ಸಾರಿತು. ಆ ಕ್ರಾಂತಿಯಲ್ಲಿ ಹರಳಯ್ಯನವರು ಮಹತ್ವದ ಪಾತ್ರ ವಹಿಸಿದ್ದರು ಎಂದು ತಿಳಿಸಿದರು.

ಆಧುನಿಕ ಯುಗದಲ್ಲಿ ಎಲ್ಲ ಸೌಕರ್ಯಗಳಿವೆ. ಆದರೂ, ನೆಮ್ಮದಿಯನ್ನು ಹುಡುಕಬೇಕಾಗಿದೆ. ನಾಟಕಗಳ ವೀಕ್ಷಣೆಯಿಂದ ಮಾನಸಿಕ ನೆಮ್ಮದಿ ಪಡೆಯಲು ಸಾಧ್ಯವಿದೆ ಎಂದು ಹೇಳಿದರು.

ಇಂದಿನ ಆರ್ಟಿಫಿಷಲ್ ಇಂಟೆಲಿಜೆನ್ಸ್ ಯುಗದಲ್ಲಿ ನಾಟಕಗಳನ್ನು ಉಳಿಸಿಕೊಂಡು ಹೋಗುವುದು ದೊಡ್ಡ ಸವಾಲಾಗಿದೆ ಎಂದು ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಅಭಿಪ್ರಾಯಪಟ್ಟರು.

ಯಾವುದೇ ಘಟನೆ, ಪ್ರಸಂಗಗಳನ್ನು ಮನವರಿಕೆ ಮಾಡುವಲ್ಲಿ ನಾಟಕ ಪರಿಣಾಮಕಾರಿ ಮಾಧ್ಯಮವಾಗಿದೆ. ಹೀಗಾಗಿ ಮಹಾಸಭಾ ನಾಟಕ ಪ್ರದರ್ಶನ ಏರ್ಪಡಿಸಿದೆ. ಮುಂದೆಯೂ ನಾಟಕ ಸೇರಿದಂತೆ ದೇಸಿ ಕಲೆಗಳಿಗೆ ಉತ್ತೇಜನ ನೀಡಲಿದೆ ಎಂದು ತಿಳಿಸಿದರು.

ಈಚಿನ ದಿನಗಳಲ್ಲಿ ಜಿಲ್ಲೆಯಲ್ಲಿ ಕಲೆ ಹಾಗೂ ಕಲಾವಿದರಿಗೆ ಪ್ರೋತ್ಸಾಹ ಸಿಗುತ್ತಿದೆ. ಅದರ ಪರಿಣಾಮವಾಗಿ, ವಿವಿಧ ಪ್ರಶಸ್ತಿಗಳು

ಜಿಲ್ಲೆಗೆ ಒಲಿದು ಬರುತ್ತಿವೆ. ಬರುವ ದಿನಗಳಲ್ಲಿ ಕಲಾವಿದರಿಗೆ ವಿವಿಧ ಸೌಕರ್ಯಗಳನ್ನು ದೊರಕಿಸಿಕೊಡಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಹೇಳಿದರು.


ಮಹಾಸಭಾದಿಂದ ಹರಳಯ್ಯನವರ ನಾಟಕ ಏರ್ಪಡಿಸಿರುವುದು ಸಂತಸ ಉಂಟು ಮಾಡಿದೆ. ಸಮಾಜವು ಶರಣರ ತತ್ವ ಪ್ರಸಾರಕ್ಕೆ ಕೊಡುಗೆ ನೀಡಲಿದೆ ಎಂದು ಜಿಲ್ಲಾ ಹರಳಯ್ಯ ಸಮಾಜದ ಅಧ್ಯಕ್ಷ ಸುಭಾಷ್ ಹಮಿಲಾಪುರ ತಿಳಿಸಿದರು.

ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿಯ ಅಧ್ಯಕ್ಷ ಡಾ. ನಾಗೇಶ ಪಾಟೀಲ ಮಾತನಾಡಿದರು. ಗಾನಯೋಗಿ ಪಂಚಾಕ್ಷರಿ ಗವಾಯಿ ಸೇವಾ ಸಂಘದ ಅಧ್ಯಕ್ಷ ಚಂದ್ರಶೇಖರ ಹೆಬ್ಬಾಳೆ, ಉದ್ಯಮಿ ಜೈರಾಜ ಖಂಡ್ರೆ, ಡಾ. ವಿಜಯಶ್ರೀ ಬಶೆಟ್ಟಿ, ಜಿಲ್ಲಾ ಹರಳಯ್ಯ ಸಮಾಜದ ಪ್ರಧಾನ ' ಕಾರ್ಯದರ್ಶಿ ರಾಜಕುಮಾರ ಟೆಳ್ಳೆಕರ್ ಮತ್ತಿತರರು ಇದ್ದರು.

ಮಹಾಸಭಾ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಹೊನ್ನಿಕೇರಿ ಸ್ವಾಗತಿಸಿದರು. ಯೋಗೇಂದ್ರ ಯದಲಾಪುರೆ ನಿರೂಪಿಸಿದರು.

# ಕನಕದಾಸರು ಸಾಮಾಜಿಕ ಕಳಕಳಿಯ ಮಹಾನ್ ದಾರ್ಶನಿಕರು : ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ

ಯಾದಗಿರಿ: : ಭಕ್ತ ಕನಕದಾಸರು ಪರಿಶುದ್ಧ ಭಕ್ತಿ ಮತ್ತು ಸಾಮಾಜಿಕ ಕಳಕಳಿಯಿಂದ ಸ್ಮರಣೀಯರಾಗಿದ್ದಾರೆ ಎಂದು ಅವರು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು. ಜಿಲ್ಲಾಡಳಿತ, ಜಿಪಂ, ನಗರಸಭೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಸರ್ಕಾರಿ ಪದವಿ ಮಹಾವಿದ್ಯಾಲಯ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಸಂತ ಕವಿ ಭಕ್ತ ಕನಕದಾಸರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಭಕ್ತ ಕನಕದಾಸರ ಭಾವಚಿತ್ರ ಪೂಜೆ ಹಾಗೂ ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಿ ಅವರು ಮಾತನಾಡಿದರು. ಭಕ್ತ ಕನಕದಾಸರು ಸಾಮಾಜಿಕ ಚಿಂತನೆಗಳ ಹಾದಿಯಲ್ಲಿ ಕ್ರಮಿಸಿದ ದೂರ, ಮಾಡಿದ ಮಹತ್ವದ ಸಾಧನೆಗಳು ಅಣುರಣೀಯವಾಗಿವೆ ಎಂದು ಬಣ್ಣಿಸಿದರು. ಹರಿದಾಸ ಸಂಕೀರ್ತನೆಗಳನ್ನು ಕೈಗೊಳ್ಳುತ್ತಾ, ಊರು ಕೇರಿಗಳಲ್ಲಿ ಸಂಚರಿಸಿದ ಕನಕದಾಸರು, ಇದೇ ವೇಳೆ ಜೀವನದ ಸಾರ, ಅನುಭವ ದ್ರವ್ಯಗಳ ಮುಖೇನ ಸಮಾಜದ ಸ್ವಾಸ್ಥ್ಯಕ್ಕೆ ಅಗತ್ಯವಾದ ನೀತಿ ಬೋಧನೆಗಳನ್ನು, ತಮ್ಮ ಕೀರ್ತನೆಗಳ ಮೂಲಕ ಜನರಿಗೆ ತಲುಪಿಸಿದರು ಎಂದು ಶಾಸಕರು ಹೇಳಿದರು.



ಜಾತಿ ವ್ಯವಸ್ಥೆಯನ್ನು ವಿರೋಧಿಸುತ್ತಿದ್ದ ಭಕ್ತ ಕನಕದಾಸರು, ಕುಲ, ಕುಲ ಕುಲವೆಂದು ಹೊಡೆದಾಡದಿರಿ, ನಿಮ್ಮ ಕುಲದ ನೆಲೆಯನೇದಾರೂ ಬಲ್ಲಿರಾ ಎಂದು ಪ್ರಶ್ನಿಸುವ ಮೂಲಕ ಶತ, ಶತಮಾನಗಳ ಹಿಂದೆಯೇ ಜಾತಿ ರಹಿತ ಸಂತನಾಗಿದ್ದವರು ಕನಕದಾಸರೆಂದು ಶಾಸಕರು ವಿವರಿಸಿದರು. ನಗರದಲ್ಲಿ ಕನಕದಾಸರ ಭವನ ನಿರ್ಮಾಣಕ್ಕೆ ಸಂಬಂಧಿಸಿದಂತೆ ಅವಶ್ಯಕ ನಿವೇಶನ ನಗರಸಭೆಯಿಂದ ಪಡೆದುಕೊಂಡಲ್ಲಿ ಅವಶ್ಯಕ ಅನುದಾನ ಒದಗಿಸಲಾಗುವುದು. ಕನಕವೃತ್ತದ ಅಭಿವೃದ್ಧಿಗೂ ಗಮನ ನೀಡಲಾಗುವುದೆಂದು ಸಮಾಜದ ಮುಖಂಡರಿಗೆ ಭರವಸೆ ನೀಡಿದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಜಿಲ್ಲಾಧಿಕಾರಿ ಹರ್ಷಲ್ ಬೋಯರ್, ಶ್ರಮ ಸಂಸ್ಕೃತಿಯ ವಿವೇಕ, ಚಿಂತನೆಯ ಪ್ರತಿ-ಕದಂತೆಯೇ ಇದ್ದು, ಸಮ ಸಮಾಜವನ್ನು ಕಟ್ಟಿದ ಮಹಾನ್ ದಾರ್ಶನಿಕರಾಗಿದ್ದ ಭಕ್ತ ಕನಕದಾಸರು ವಚನ, ಹಾಡುಗಳ ಮೂಲಕ ಮೂಢನಂಬಿಕೆಗಳನ್ನು ಹೊಗಲಾಡಿಸಿದರೆಂದು ಹೇಳಿದರು.

ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ಮಾತನಾಡಿ, ಸಮಾಜದ ಮಕ್ಕಳು ವಿದ್ಯಾವಂತರಾಗಬೇಕು. ವಿದ್ಯೆಯಿಂದಲೇ ಸಮಾಜದಲ್ಲಿ ಮನ್ನಣೆಯಿದೆ. ಕನಕದಾಸರು ಆಗಿನ ಕಾಲದಲ್ಲಿಯೇ ಜ್ಞಾನಿಗಳಾಗಿದ್ದರು. ಅವರ ಬದುಕಿನ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದರು. ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಸಾಬಣ್ಣ ಜುಬೇರಿ ಅವರು ಕನಕದಾಸರ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಸಂತ ಕವಿ ಕನಕದಾಸರ ಜಯಂತಿ ಸಮಿತಿ ಅಧ್ಯಕ್ಷ ಮಲ್ಲಣ್ಣ ಐಕೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅತಿಥಿಗಳಾಗಿ ಭಾಗವಹಿಸಿದ್ದರು.

ಸಮಾಜದ ಹಿರಿಯ ಮುಖಂಡರಾದ ಚಂದ್ರಶೇಖರ ಕಾಡಂನೊರ, ಡಾ.ಭೀಮಣ್ಣ ಮೇಟಿ, ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಅಪಾರ ಜನರು, ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆಯೇ ಇತರರಿದ್ದರು. ಭೀಮರಾಯ ಕೊಟ್ಟರಕಿ ನಿರೂಪಿಸಿದರು.

ಬಸವರಾಜ ಭಂಟನೂರ ಸಂಗಡಿಗರಿಂದ ಪ್ರಾರ್ಥನೆ, ನಾಡಗೀತೆ ಹಾಡಿದರು. ಭಕ್ತ ಕನಕದಾಸರ ಜಯಂತಿ ಅಂಗವಾಗಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಸಹ ಹಮ್ಮಿಕೊಳ್ಳಲಾಗಿತ್ತು.

# ಕನ್ನಡ ಭಾಷೆಗೆ ಪ್ರಾತಿನಿಧ್ಯ ಅಗತ್ಯ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಗಡಿ ಭಾಗದಲ್ಲಿ ಕನ್ನಡ ಭಾಷೆ ಉಳಿಸಿ ಬೆಳೆಸಲು ನಿರಂತರವಾಗಿ ಶ್ರಮಿಸಬೇಕಿದೆ ಎಂದು ಸಂಸದ ಸಾಗರ ಖಂಡ್ರೆ ಹೇಳಿದರು. ಪಟ್ಟಣದ ಕುಂಬಾರ ಗುಂಡಯ್ಯ ಕಲ್ಯಾಣ ಮಂಟಪದಲ್ಲಿ ಭಾನುವಾರ ಸಾಧನಾ ಸಿರಿ ಪುಸ್ತಕ ಬಿಡುಗಡೆಗೊಳಿಸಿ ಅವರು ಮಾತನಾಡಿದರು.



ಗಡಿಭಾಗ ಅನ್ಯ ರಾಜ್ಯಗಳಿಗೆ ಹೊಂದಿಕೊಂಡಿರುವುದರಿಂದ ಅನ್ಯ ಭಾಷೆಗಳ ಪ್ರಭಾವ ಹೆಚ್ಚಿದೆ. ನಾಡು, ನುಡಿ, ನೆಲ, ಜಲ ರಕ್ಷಣೆಯಲ್ಲಿ ವಿವಿಧ ಕನ್ನಡಪರ ಸಂಘಟನೆಗಳ ಪ್ರಮುಖರು, ಪದಾಧಿಕಾರಿಗಳು ಶ್ರಮ ವಹಿಸುತ್ತಿದ್ದಾರೆ.

ಅದರಲ್ಲಿ ಸಂಗಮೇಶ ಗುಮ್ಮೆ ಕೂಡ ಒಬ್ಬರಾಗಿದ್ದು, ಕಳೆದ ಒಂದೆರಡು ದಶಕಗಳಿಂದ ಕನ್ನಡ ಕಟ್ಟುವ ಕಾರ್ಯದಲ್ಲಿ ತೊಡಗಿಸಿ ಕೊಂಡಿದ್ದಾರೆ. ಅವರ ಜೀವನ ಸಾಧನೆ ಕುರಿತು ಸಾಧನಾ ಸಿರಿ ಪುಸ್ತಕ ರೂಪದಲ್ಲಿ ಹೊರ ತಂದಿರುವುದು ಸಂತಸ ತರಿಸಿದೆ ಎಂದು ತಿಳಿಸಿದರು. ಸಾಧನಾ ಸಿರಿ ಗ್ರಂಥ ಸಂಪಾದಕ ಶಂಭುಲಿಂಗ ಕಾಮಣ್ಣ ಅವರು ಗ್ರಂಥ ಪರಿಚಯ ಮಾಡಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ ಚನ್ನಶೆಟ್ಟಿ, ತಾಲೂಕು ಅಧ್ಯಕ್ಷ ನಾಗಭೂಷಣ ಮಾಮಡಿ, ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಹಿರಿಯ ಸಾಹಿತಿ ಮಾಣಿಕಪ್ಪ ಬಿರಾದಾರ್, ಶಿವಶಂಕರ ಟೋಕರೆ ಮಾತನಾಡಿದರು.

ಸನ್ಮಾನ :

ಇದೇವೇಳೆ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ, ಪ್ರಥಮ ದರ್ಜೆ ಗುತ್ತಿಗೆದಾರ ರವೀಂದ್ರ ಚಿಡಗುಪ್ಪೆ ಸೇರಿದಂತೆ ಹಲವರು ಇದ್ದರು. ದೀಪಕ ಠಮಕೆ ನಿರೂಪಿಸಿ, ವಂದಿಸಿದರು.

# ಕಾಣೆಯಾಗಿದ್ದಾರೆ



ರಾಯಚೂರು,ನ.10–

ಆಂಜನೇಯ ತಂದೆ ಆದೆಪ್ಪ, ವಯಸ್ಸು 26 ವರ್ಷ, ತಿಮ್ಮಾಪೂ ರುಪೇಟೆ ರಾಯಚೂರು ಇವರು ನವಂಬರ್ 2024 ತಿಂಗಳಲ್ಲಿ ಕಾಣೆ ಯಾಗಿದ್ದಾರೆ ಎಂದು ಅವರು ಪತ್ನಿ ಅವರು ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಇವರು ಗುಲ್ಬರ್ಗಾದಲ್ಲಿ ಎಲೆಕ್ಟ್ರಿ ಕಲ್ ಕೆಲಸ ಮಾಡುತ್ತಿದ್ದು ಇವರು ಪ್ರತಿ ವಾರಕ್ಕೊಮ್ಮೆ ಬಂದು ಹೋಗು ತ್ತಿದ್ದರು. 01.11.2024 ರಂದು ಮಧ್ಯಾಹ್ನ 02.00 ಗಂಟೆ ಸುಮಾರಿಗೆ ನಾನು ಮರಳಿ ಕೆಲಸಕ್ಕೆ ಗುಲ್ಬರ್ಗಾಕ್ಕೆ ಹೋಗುತ್ತೇನೆ ಅಂತಾ ಹೇಳಿ ಹೋಗಿದ್ದು ಇಲ್ಲಿಯವರೆಗೆ ಯಾವು ದೇ ಸುಳಿವು ಸಿಕ್ಕಲ್ಲ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

ಇವರ ಎತ್ತರ 5.6,ಚಹರೆ : ದುಂಡು ಮುಖ, ಸಾದಾರಣ ಮೈ ಕಟ್ಟು, ಸಾದ ಕೆಂಪು ಬಣ್ಣ, ತಲೆಯಲ್ಲಿ ಕಪ್ಪು ಬಣ್ಣದ ಕೂದಲು ಇರುತ್ತವೆ. ಕನ್ನಡ, ತೆಲುಗು, ಮಾತನಾಡುತ್ತಾರೆ.

7 ನೇ ತರಗತಿ ವಿದ್ಯಾಬ್ಯಾಸ ಮುಗಿಸಿದ್ದಾರೆ. ಮೇಲ್ಕಂಡ ಚಹರೆವುಳ್ಳವರು ಕಂಡಲ್ಲಿ ಮತ್ತು ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ, ಸಂ:08532– 240222, ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂ: 08532– 235 633. 08532–235100, 948080 3 800. 6 2.2.2 (5.2) 94808 03846 ರಾಯಚೂರು 9480803 831 ಇಲ್ಲಿಗೆ ತಿಳಿಸಲು ಕೋರಲಾ ಗಿದೆ.

# ಸರಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಿಗೆ

ಅಭಿನಂದನಾ ಸಮಾರಂಭ, ಕಾರ್ಯಾಗಾರ: ಕೃಷ್ಣ ಶಾವಂತಗೇರಿ

ರಾಯಚೂರು ನವೆಂಬರ್ 10 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಹಾಗೂ ರಾಯಚೂರು ಜಿಲ್ಲಾ ಘಟಕ ವತಿಯಿಂದ, ಕ್ರಿಯಾಶೀಲ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ ಅವರಿಗೆ ಅಭಿನಂದನಾ ಸಮಾರಂಭ ಹಾಗೂ ಸಂಘದ ವಾರ್ಷಿಕ ಸಾಮಾನ್ಯ ಸಭೆಯು ನವೆಂಬರ್ 11ರಂದು ಬೆಳಗ್ಗೆ 10 ಗಂಟೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧ್ಯಕ್ಷ ಕೃಷ್ಣಾ ಶಾವಂತಗೇರಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಸಚಿವರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಹಾನಗರ ಪಾಲಿಕೆಯ ಅಧ್ಯಕ್ಷರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು, ವಿ.ವಿ.ಗಳ ಕುಲಪತಿಗಳು ಸೇರಿದಂತೆ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಜ್ಯ ನೌಕರರ ಸಂಘದ ಪ್ರಮುಖ ಪದಾಧಿಕಾರಿಗಳು ಮತ್ತು ವಿವಿಧ ಘಟಕಗಳ ಅಧ್ಯಕ್ಷರು ವಿಶೇಷ ಆಹ್ವಾನಿತರಾಗಿದ್ದಾರೆ.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಹಿತದೃಷ್ಟಿಯಿಂದ ಆರೋಗ್ಯ ಸಂಜೀವಿನಿ ಯೋಜನೆ ಮತ್ತು ಎಚ್.ಆರ್.ಎಂ.ಎಸ್. 2.0 ಯೋಜನೆ ಕುರಿತು ವಿಶೇಷ ಕಾರ್ಯಗಾರ ಏರ್ಪಡಿಸಲಾಗಿದ್ದು, ನೌಕರರಿಗೆ ಹೊಸ ವ್ಯವಸ್ಥೆಗಳ ಬಗ್ಗೆಯು ತಾಂತ್ರಿಕ ಮಾರ್ಗದರ್ಶನ ನೀಡಲಾಗುತ್ತದೆ.

ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ನೌಕರರಿಗೆ ಓಓಡಿ ಸೌಲಭ್ಯ ಇರುತ್ತದೆ ಆದ್ದರಿಂದ ರಾಯಚೂರು ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಮಸ್ತ ಸರಕಾರಿ ನೌಕರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 11ರಂದು ಜಿಲ್ಲಾಡಳಿತದಿಂದ ಒನಕೆ ಓಬವ್ವ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 10 (ಕರ್ನಾಟಕ ವಾರ್ತೆ): ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನವೆಂಬರ್ 11ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ,

ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ.

ದೇವದುರ್ಗದ ಬಸವ ಪದವಿ ಪೂರ್ವ ಹಾಗೂ ಪದವಿ ಮಹಾವಿದ್ಯಾಲಯದ ಇತಿಹಾಸ ಉಪನ್ಯಾಸಕರಾದ ಕುಮಾರಿ ಕೆ.ಶಿಲ್ಪಕಲಾ ಬೋಮ್ಮನಾಳ ಅವರು ವೀರರಾಣಿ ಒನಕೆ ಓಬವ್ವ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುನ್ನೂರು ಕಾಪು ಸಮಾಜ: ಕಾರ್ತಿಕ ಮಾಸ ಪ್ರಯುಕ್ತ ಶಿವ, ಪಾರ್ವತಿ ವೈಭವದಿಂದ ಕಲ್ಯಾಣ ಮಹೋತ್ಸವ



ರಾಯಚೂರು, ನ.10– ಶ್ರೀ ಮಾತಾ ಲಕ್ಷ್ಮಿ ದೇವಿ ಮತ್ತು ಕಾಳಿಕಾ ದೇವಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಮಾಜಿ ಶಾಸಕರು ಸಮಾಜದ ಮುಖಂಡರು ಎ.ಪಾಪಾರೆಡ್ಡಿ ಮತ್ತು ಕುಟುಂಬಸ್ಥರು ಅವರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ಗಣೇಶ ಮತ್ತು ಶಿವಲಿಂಗಮೂರ್ತಿ ಪ್ರತಿಷ್ಠಾಪನೆ ಮಾಡಲಾಯಿತು. ಕಾರ್ತಿಕ ಸೋಮವಾರ ಬೆಳಿಗ್ಗೆ ಶ್ರೀ ಮಾತಾ ಲಕ್ಷ್ಮಿ ದೇವಿ ಮತ್ತು ಕಾಳಿಕಾ ದೇವಿ ದೇವಸ್ಥಾನದಲ್ಲಿ ವಿವಿಧ ಪೂಜಾ ಕಾರ್ಯಕ್ರಮ ನೆರವೇರಿಸಿ ಭಕ್ತಿಪೂರ್ವಕವಾಗಿ ಬಾರಿ ವಿಜೃಂಭಣೆಯಿಂದ ಗಣೇಶ ಮತ್ತು ಶಿವಲಿಂಗ ಮೂರ್ತಿ ಪ್ರತಿಷ್ಠಾಪನೆ ಮಾಡಲಾಯಿತು.ಸ್ವಸ್ತಿಶ್ರೀ ಚಾಂದ್ರಮಾನ ಶ್ರೀ ವಿಶ್ವಾವಸು ನಾಮ ಸಂವತ್ಸರ ಕಾರ್ತೀಕ ಬಹುಳ ತೃತೀಯ ದಿಂದ ಪಂಚಮಿ ಪರ್ಯಂತ ದಿ.8 ರಿಂದ 10 ರವರಿಗೆ ಶ್ರೀ ಮಹಾಲಕ್ಷ್ಮಿ ಮತ್ತು ಶ್ರೀ ಕಾಳಿಕಾಂಬ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮ ಜರುಗಿತು. ಗಣಪತಿ ಮತ್ತು ಶಿವಲಿಂಗ ಪ್ರತಿಷ್ಠಾಪನಾ ಮಹೋತ್ಸವ ತ್ರಯಾತ್ನಿಕ ದೀಕ್ಷೆಯಿಂದ ಆಗಮ ಶಾಸ್ತ್ರ ಪ್ರಕಾರ ಅತ್ಯಂತ ವಿಜೃಂಭಣೆಯಿಂದ ಅಪಾರ ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಪ್ರತಿಷ್ಠಾಪನಾ ಮಹೋತ್ಸವ ನಡೆಯಿತು. ಕಾರ್ತಿಕ ನವಗ್ರಹ ಪೂಜೆ, ದಿಕ್ಪಾಲಕ ಹೋಮ, ಆದಿವಾಸ ಹೋಮ, ತತ್ವಹೋಮ, ಕಲಾಭಿವೃದ್ಧಿ ಹೋಮ ರುದ್ರಹೋಮ , ದೃಷ್ಟಿ ಹೋಮ, ಗಣೇಶ ಮತ್ತು ಶಿವಲಿಂಗವನ್ನು ನೂರಾರು ಭಕ್ತರ ಸಮ್ಮುಖದಲ್ಲಿ ಪ್ರತಿಷ್ಠಾನೆ ಮಾಡಲಾಯಿತು. ಗಣೇಶ ಮತ್ತು ಶಿವಲಿಂಗ ಪ್ರತಿಷ್ಠಾಪನೆ ಅಂಗವಾಗಿ ಪಾಪಾರೆಡ್ಡಿ ಪುತ್ರ ಸುದರ್ಶನರೆಡ್ಡಿ ಹಾಗೂ ಸೊಸೆ ವಸುಂಧರಾರೆಡ್ಡಿ

ಕಳಸಗಳನ್ನು ಹೊತ್ತು ತಂದು ಗಣೇಶ ಮತ್ತು

ಶಿವಲಿಂಗಕ್ಕೆ ಪೂಜೆ ಸಲ್ಲಿಸಿದರು. ಕಾರ್ತಿಕ ಮಾಸ ಎಂದರೆ ಶಿವನಿಗೆ ಅತ್ಯಂತ ಪವಿತ್ರ ದಿನದ ಹಿನ್ನಲೆ ಅತ್ಯಂತ ವಿಜೃಂಭಣೆಯಿಂದ ಶಿವ ಮತ್ತು ಪಾರ್ವತಿ ಕಲ್ಯಾಣ ಮಹೋತ್ಸವ ನಡೆಯಿತು. ಸೋಮವಾರಪೇಟೆ ರಾಚೋಟಿ ಶಿವಾಚಾರ್ಯ ಮಹಾಸ್ವಾಮಿಗಳು, ಬಿಚ್ಚಲಿ ವೀರಭದ್ರ ಶಿವಾಚಾರ್ಯ ಮಹಾಸ್ವಾಮಿಗಳು ಪ್ರತಿಷ್ಠಾಪನೆ ಕಾರ್ಯಕ್ರಮದ ದಿವ್ಯಾ ಸಾನಿಧ್ಯ ವಹಿಸಿದ್ದರು.ನೂರಾರು ಭಕ್ತರು ಕಲ್ಯಾಣ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದೈವಾನುಗ್ರಹಕ್ಕೆ ಪಾತ್ರರಾದರು. ಇಂದು ಮಧ್ಯಾಹ್ನ ರಥೋತ್ಸವ ಕಾರ್ಯಕ್ರಮ ನಡೆಯಲಿದೆ. ಈ ಸಂದರ್ಭದಲ್ಲಿ ಮಾಜಿ ಶಾಸಕರು ಎ. ಪಾಪಾರೆಡ್ಡಿ, ಪಾಪಾರೆಡ್ಡಿ ಧರ್ಮ ಪತ್ನಿ ಪಾರ್ವತಮ್ಮ, ಕುಟುಂಬಸ್ಥರು ಮುನ್ನೂರು ಕಾಪು ಸಮಾಜ ಮುಖಂಡರು ಅನೇಕರು ಭಕ್ತರು ಪಾಲ್ಗೊಂಡಿದ್ದರು.

# ಫೆಡರಲ್ ಸಂಸ್ಥೆಯಲ್ಲಿ 538ನೇ ಕನಕದಾಸರ ಜಯಂತಿ ಆಚರಣೆ



ರಾಯಚೂರು.ನ.08– ಯರಮರಸನಲ್ಲಿರುವ ಫೆಡರಲ್ ಶಿಕ್ಷಣ ಸಮೂಹಗಳ ವತಿಯಿಂದ ದಾಸ ಶ್ರೇಷ್ಠಕನಕದಾಸರ 538ನೇ ಜಯಂತಿಯನ್ನು ಇಂದು ಆಚರಿಸಲಾಯಿತು. ಕನಕದಾಸರ ಭಾವಚಿತ್ರಕ್ಕೆ ಪೂಜೆಯನ್ನು ಶ್ರೀಮತಿ ಕವೀತಾ, ಪ್ರಾರ್ಥನೆ ಗೀತೆಯನ್ನು

ಶ್ರೀಮತಿ ಶ್ರೀವೇಣಿ ಮತ್ತು ಶ್ರೀಮತಿ ಮತ್ತು ಕನಕದಾಸರ ಭಾವಚಿತ್ರಕ್ಕೆ ಮಾಲಾರ್ಪಣೆಯನ್ನು ಸಂಸ್ಥೆಯ ಅಧ್ಯಕ್ಷರಾದ ಮೊಹ್ಮದ್ ಅಬ್ದುಲ್ ಹೈ ರಾಜೇಶ್ವರಿಯವರು ಸ.ಶಿ ಹಾಡಿದರು ಫೀರೋಜ್ ರವರ ಮಾಡಿದರು ನಂತರ ಕನಕದಾಸರ ಬಗ್ಗೆ ಮಾತನಾಡುತ್ತನಳ–ದಮಯಂತಿ ಎಂಬ ಮಾಹಾ

ಕಾವ್ಯರಚನೆಯ ಬಗ್ಗೆ ಪ್ರಶಂಶಿಸಿದರು. ಈ ಕಾರ್ಯಾಕ್ರಮದಲ್ಲಿ ಕು. ಶ್ರೀಲೇಖಾ ಕಾರ್ಯನಿರ್ವಾಹಕ ನಿರ್ದೇಶಕಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಮುಖ್ಯಗುರುಗಳು ಮತ್ತು ಸಂಸ್ಥೆಯ ಎಲ್ಲಾ ಭೋದಕ/ಭೋದಕೇತರ ಸಿಬ್ಬಂದಿಯವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಸಂತಶ್ರೇಷ್ಠ ಭಕ್ತ ಕನಕದಾಸರ 535ನೇ ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ದಿನಾಂಕ:08ನೇ ನ. 2025ರಂದು ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ.ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಭಕ್ತಕನಕದಾಸ ಜಯಂತಿಯನ್ನು ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಹಾವಿದ್ಯಾಲಯದ ಪ್ರಭಾರಿ ಪ್ರಾಂಶುಪಾಲರಾದ ಡಾ. ಮಲ್ಲಿಕಾರ್ಜುನ ಕೋಟೆ ಅವರು ಮಾತನಾಡುತ್ತಾ ಕನಕದಾಸರು ಒಬ್ಬ ಶ್ರೇಷ್ಠ ಕವಿ ಹಾಗೂ ದಾರ್ಶನಿಕ ಮತ್ತು ಸಂಗೀತಗಾರರಾಗಿದ್ದು ಪ್ರಮುಖ ಹರಿದಾಸ ಸಾಹಿತ್ಯ ಚಳುವಳಿಯಲ್ಲಿ ಪಾತ್ರ ವಹಿಸಿದ ಸಾಮಾಜಿಕ ಅಸಮಾನತೆ ಮತ್ತು ಜಾತಿ ವ್ಯವಸ್ಥೆಯನ್ನು ತಮ್ಮ ಕೀರ್ತನೆಗಳ ಮೂಲಕ ಖಂಡಿಸಿ ಸಮಾಜ ಸುಧಾರಣೆಗೆ ಪ್ರಯತ್ನಪಟ್ಟರು ಎಂದು ವಿದ್ಯಾರ್ಥಿಗಳಿಗೆ ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸವನ್ನು ಮಂಡಿಸಿದ ಎನ್.ಸಿ.ಸಿ. ಅಧಿಕಾರಿಗಳಾದ ಶ್ರೀ ಮಾರುತಿ ಭೀಮಣ್ಣಾ ಅವರು ಮಾತನಾಡುತ್ತಾ ಕನಕದಾಸ ಕ್ರಿ.ಶ. 1494ರಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲೂಕಿನ ಬಾಡ ಗ್ರಾಮದಲ್ಲಿ ಜನಿಸಿದರು ಇವರ ತಂದೆ ಬೀರಪ್ಪಾ ತಾಯಿ ಬಚ್ಚಮ್ಮಾ ಇವರ ಉದರದಲ್ಲಿ ತಿರುಪತಿ ವೆಂಕಟೇಶ್ವರರ ಆಶೀರ್ವಾದದಿಂದ ಜನಿಸಿದ ಪುತ್ರನಿಗೆ ತಿಮ್ಮಪ್ಪನಾಯಕ ಎಂದು ಹೆಸರಿಟ್ಟರು. ಇವರ ಕೀರ್ತನೆಗಳು ಸಮಾಜದಲ್ಲಿ ಮೇಲು ಕೀಳು ಎಂಬ ಭಾವನೆ ಹೊಡೆದೋಡಿಸಿ ಅವರ ರಚಿಸಿದ ಕೃತಿಗಳೆಂದರೆ, ನಳ ಚರಿತ್ರೆ, ಹರಿದಾಸ ಸಾಹಿತ್ಯ ಹಾಗೂ ರಾಮಧಾನ್ಯ ಚರಿತ್ರೆ ಈ ಕೃತಿಗಳ ಮುಖಾಂತರ ಸಮಾಜದ ಶುದ್ಧೀಕರಣ ಮಾಡಿದರು ಹಾಗೂ ಮಹಿಳಾ ಶಿಕ್ಷಣಕ್ಕೆ ಆಧ್ಯತೆ ನೀಡಿದರು, ತಮ್ಮನ್ನು ತಾವು ಹರಿಭಜನೆ ಮುಖಾಂತರ ಸಾಹಿತ್ಯ ರಚನೆಗೆ ತೊಡಗಿಸಿಕೊಂಡು ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದಿದರು ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಈ ಕಾರ್ಯಕ್ರಮದ ಸಂಚಾಲನೆಯನ್ನು ಶ್ರೀ ಬಸವರಾಜ ಬಿರಾದಾರ ನಡೆಸಿಕೊಟ್ಟರೆ ವಂದನೆಯನ್ನು ಡಾ. ಸೂರ್ಯವಂಶಿ ಪೂಜಾ ನಡೆಸಿದರು ಈ ಕಾರ್ಯಕ್ರಮದ ವೇದಿಕೆಯ ಮೇಲೆ ಎನ್.ಎಸ್.ಎಸ್. 'ಅ' ಘಟಕ ಅಧಿಕಾರಿಗಳಾದ ಡಾ. ಲಕ್ಷ್ಮೀ ವಿಶ್ವನಾಥ ಹಾಗೂ ಶ್ರೀಮತಿ ದೈವಶಾಲಾ, ಶ್ರೀ ಶೇಷರಾವ ಹಾಜರಿದ್ದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಎನ್.ಸಿ.ಸಿ., ಎನ್.ಎಸ್.ಎಸ್. ವಿದ್ಯಾರ್ಥಿಗಳು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.




**ರಾಯಚೂರು,ನ.10-ಮೈಸೂರು ಹುಲಿ ಹಜರತ್ ಟಿಪ್ಪುಸುಲ್ತಾನ್ ರವರ 276ನೆಯ ಜಯಂತೋತ್ಸವ ಅಂಗವಾಗಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವುದರ ಮೂಲಕ ಜಯಂತಿಯನ್ನು ಆಚರಣೆ ಮಾಡಲಾಯಿತು ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘಟನೆ ಒಕ್ಕೂಟ ರಾಜ್ಯಾಧ್ಯಕ್ಷರಾದ ಎಲ್ ಸುರೇಶ್ ಎಸ್ ನರಸಿಂಹಲು ಫಕ್ರುದ್ದೀನ್ ಅಲಿ ಅಹ್ಮದ್ ಶೇಕ್ ಜಲಾಲ್ ಎಂಡಿ ಮಾಸಂ ಅನ್ವರ್ ಬಾಷಾ ಜಂಬಣ್ಣ ಮಂಜು ನಾಗೇಂದ್ರ ರಾಜು ಉಪಸ್ಥಿತರಿದ್ದರು.**

# ಸತತವಾಗಿ ಎರಡನೇ ಬಾರಿಗೆ ಗುರುನಾಥ ಜಿಲ್ಲಾಧ್ಯಕ್ಷರಾಗಿ ಆಯ್ಕೆ

ರಾಯಚೂರು :

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ನೋ)



2025–28ನೇ ಅವಧಿಗೆ ಸಂಬಂಧಿಸಿದ ಚುನಾವಣೆಯು ನವೆಂಬರ್ 9ರಂದು ಶಾಂತಿಯುತವಾಗಿ ನೆರವೇರಿತು. ರಾಯಚೂರು ಜಿಲ್ಲೆಯ ವಿವಿಧ ಹುದ್ದೆಗಳಿಗೆ ಚುನಾವಣೆ ಮುಖಾಂತರ ಹೊಸ ಅಧಿಕಾರಿಗಳನ್ನು ಆಯ್ಕೆ ಮಾಡಲಾಗಿದ್ದು, ಗುರುನಾಥ ಅವರ ನೇತೃತ್ವದಲ್ಲಿ ಹೊಸ ತಂಡ ಅಧಿಕಾರ ವಹಿಸಿಕೊಂಡಿದೆ. ಈ ಚುನಾವಣೆಯಲ್ಲಿ ಗುರುನಾಥ ಅವರು ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿದ್ದು, ಸಿದ್ದಯ್ಯಸ್ವಾಮಿ ಅವರು ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ಮಲ್ಲಿಕಾರ್ಜುನಯ್ಯ ಅವರು ಖಜಾಂಚಿಯಾಗಿ ಆಯ್ಕೆಯಾದರು. ಉಪಾಧ್ಯಕ್ಷರಾಗಿ ಸೂಗೂರೇಶ ಎಸ್. ಗುಡಿ, ಮಹಾನಂದ ಮತ್ತು ಅಶೋಕ ಬೆನ್ನೂರ್ ಆಯ್ಕೆಯಾಗಿದ್ದಾರೆ. ಬಸವರಾಜ ಭೋಗಾವತಿ, ಶರಣಯ್ಯ ಒಡೆಯರ್ ಮತ್ತು ರಾಘವೇಂದ್ರ ಗುಮಾಸ್ತೆ ಅವರು ಕಾರ್ಯದರ್ಶಿಗಳಾಗಿ ಆಯ್ಕೆಯಾದರು. ಇದೇ ವೇಳೆ ಜಿಲ್ಲಾ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಲಕ್ಷ್ಮಣ ಕಪಗಲ್, ವಿಶ್ವನಾಥ ಹೂಗಾರ, ಚಂದ್ರಶೇಖರ ಯರದಿಹಾಳ, ಬಲಭೀಮರಾವ್ ಕುಲಕರ್ಣಿ, ನೀಲಕಂಠ ಸ್ವಾಮಿ, ಅಮರೇಶ ಭೋವಿ, ತಾಯಪ್ಪ ಬಿ. ಹೊಸೂರು, ಎಂ.ಡಿ. ಮುಸ್ತಫಾ, ಸಿದ್ದನಗೌಡ, ಮುತ್ತಣ್ಣ ಯಳವರ್, ಉದಯ ಅರೋಲಿಕರ್, ಪ್ರಕಾಶ ಮಸ್ಕಿ, ಲಕ್ಷ್ಮೀ ಪ್ರಸನ್ನ ಹೆಚ್., ಹನುಮಂತ ನಾಯಕ ಮತ್ತು ಎಂ. ಗುಂಡಪ್ಪ ಆಯ್ಕೆಯಾಗಿದ್ದಾರೆ. ಚುನಾವಣಾ ಪ್ರಕ್ರಿಯೆ ಶಿಸ್ತಿನಿಂದ ಹಾಗೂ ಏಕತೆಯಿಂದ ಪೂರ್ಣಗೊಂಡಿದ್ದು, ಪತ್ರಕರ್ತರ ಹಿತಾಸಕ್ತಿ, ಹಕ್ಕು ರಕ್ಷಣೆ ಹಾಗೂ ಸಂಘಟನೆಯ ಬಲವರ್ಧನೆಗೆ ಹೊಸ ತಂಡ ಬದ್ಧವಾಗಿ ಕೆಲಸ ಮಾಡುವ ವಿಶ್ವಾಸ ವ್ಯಕ್ತಪಡಿಸಿದೆ.

# ಖಾಸಗಿ ಆಸ್ಪತ್ರೆಗಳಲ್ಲೇ ಸಮಯ ಕಳೆಯುವ ಬ್ರಿಮ್ಸ್ ವೈದ್ಯರು!



ಬೀದರ್. ನ. 10 :– ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆ (ಬ್ರಿಮ್ಸ್) ಹಳಿ ತಪ್ಪಲು ಕಾರಣ ಯಾರು? ಇಂತಹದ್ದೊಂದು ಪ್ರಶ್ನೆ ಮೂಲಕ ವೈದ್ಯಕೀಯ ಸಂಸ್ಥೆ ಪುನಃ ಸಾರ್ವಜನಿಕರ ನಡುವೆ ಚರ್ಚೆಗೆ ಗ್ರಾಸವಾಗಿದೆ.

ಬ್ರಿಮ್ಸ್ ಹಾಳಾಗಲು ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ದುರಾಡಳಿತ ಕಾರಣವೆಂದು ವಿರೋಧ ಪಕ್ಷ ಬಿಜೆಪಿ ಆರೋಪಿಸಿದರೆ, ಈ ಸಂಸ್ಥೆಯ ದುರವಸ್ಥೆಗೆ ಬಿಜೆಪಿಯೇ ಕಾರಣ ಎಂದು ಕಾಂಗ್ರೆಸ್ ತಿರುಗೇಟು ನೀಡಿದೆ.

ಪರಸ್ಪರ ಆರೋಪ–ಪ್ರತ್ಯಾರೋಪ ಮುಂದುವರಿದಿದೆ. ಆದರೆ, ವಾಸ್ತವದಲ್ಲಿ ಈ ಸಂಸ್ಥೆಯ ದುರವಸ್ಥೆಗೆ ಕಾರಣ ಯಾರು ಎಂದು ನೋಡಿದರೆ ಎರಡೂ ಪಕ್ಷಗಳು ಸಮಾನ ಹೊಣೆ ಹೊರಬೇಕಾಗುತ್ತದೆ.

ಕಾಂಗ್ರೆಸ್ ಹಾಗೂ ಬಿಜೆಪಿ ಸರ್ಕಾರದ ಅವಧಿಯಲ್ಲಿ ಬ್ರಿಮ್ಸ್‌ಗೆ ಅಗತ್ಯ ಅನುದಾನ ಹರಿದು ಬಂದಿದೆ. ಆದರೆ, ಅಲ್ಲಿನ ಮೂಲ ಸಮಸ್ಯೆಯತ್ತ ಎರಡೂ ಪಕ್ಷಗಳು ಗಮನ ಹರಿಸಿಲ್ಲ. ಒಂದು ವೇಳೆ ಗಮನಹರಿಸಿದ್ದರೂ ಅಸಡ್ಡೆ ತೋರಿಸಿದ ಆರೋಪಗಳಿವೆ.

ಪ್ರಭಾವಿಗಳ ಸಂಬಂಧಿಕರು: ಸರ್ಕಾರಗಳು ಬದಲಾಗುತ್ತ ಹೋಗಿವೆ. ಆದರೆ, ಬ್ರಿಮ್ಸ್ ಮಾತ್ರ ಬದಲಾಗಿಲ್ಲ. ದಿನೇ ದಿನೇ ಕೆಟ್ಟ ಕಾರಣಗಳಿಗಾಗಿ ಬ್ರಿಮ್ಸ್ ಸುದ್ದಿಯಲ್ಲಿರುತ್ತಿದೆ. ಹೀಗಿದ್ದರೂ ಕಠಿಣ ಕ್ರಮವೇಕೆ ಸಾಧ್ಯವಾಗುತ್ತಿಲ್ಲ?

ಈ ಪ್ರಶ್ನೆಯ ಆಳಕ್ಕೆ ಇಣುಕಿ ನೋಡಿದರೆ ಅಲ್ಲಿ ಕೆಲಸ ನಿರ್ವಹಿಸುತ್ತಿರುವವರಲ್ಲಿ ಹೆಚ್ಚಿನವರು ಪ್ರಭಾವಿಗಳು, ರಾಜಕಾರಣಿಗಳ ಸಂಬಂಧಿಕರಾಗಿರುವುದು ಒಂದು ಪ್ರಮುಖ ಕಾರಣ. ರಾಜಕೀಯ ಪಕ್ಷಗಳೊಂದಿಗೆ ಪರೋಕ್ಷವಾಗಿ ಗುರುತಿಸಿಕೊಂಡಿದ್ದಾರೆ. ಹೀಗಾಗಿಯೇ ಕಠಿಣ ಕ್ರಮ ಕೈಗೊಳ್ಳಲು ಅಧಿಕಾರರೂಢರಿಗೆ ಸಾಧ್ಯವಾಗುತ್ತಿಲ್ಲ ಎಂಬ ಗಂಭೀರ ಆರೋಪಗಳಿವೆ.

ಹೆಚ್ಚಿನ ವೈದ್ಯರು, ಪ್ರಮುಖ ಹುದ್ದೆಗಳಲ್ಲಿರುವವರ ಕೆಲಸ ಕೇವಲ 'ಪಂಚ್' ಮಾಡಲು ಸೀಮಿತವಾಗಿದೆ ಎಂಬ ಗಂಭೀರ ಆರೋಪಗಳಿವೆ. ಸಕಾಲಕ್ಕೆ ಪಂಚ್ ಮಾಡುವ ವೈದ್ಯರು, ಖಾಸಗಿ ಆಸ್ಪತ್ರೆಗಳಲ್ಲಿ ಹೆಚ್ಚಿನ ಸಮಯ ಕಳೆಯುತ್ತಾರೆ. 'ಕರೆ' ಬಂದಾಗಲಷ್ಟೇ ಅಲ್ಲಿಗೆ ದೌಡಾಯಿಸುತ್ತಾರೆ. ಒಂದು ರೀತಿಯಲ್ಲಿ 'ಅತಿಥಿ ವೈದ್ಯ'ರಂತೆ ಕೆಲಸ ಮಾಡುತ್ತಿದ್ದಾರೆ. ಪೂರ್ಣ ಪ್ರಮಾಣದಲ್ಲಿ ಸಂಬಳಕ್ಕೆ ತಕ್ಕಂತೆ ಬದ್ಧತೆಯಿಂದ ಕೆಲಸ ನಿರ್ವಹಿಸುವವರ ಸಂಖ್ಯೆ ವಿರಳಾತಿ ವಿರಳ.

ಈ ರೀತಿ ಕೆಲಸ ಮಾಡುತ್ತಿದ್ದವರಿಗೆ ಬಿಸಿ ಮುಟ್ಟಿಸಿದ್ದು ಈ ಹಿಂದೆ ಜಿಲ್ಲಾಧಿಕಾರಿ ಆಗಿದ್ದ ಅನಿರುದ್ಧ್ ಶ್ರವಣ್ ಅವರು. 2017–18ನೇ ಸಾಲಿನಲ್ಲಿ ಅನಿರುದ್ಧ್ ಅವರು ಕೆಲ ಕಠಿಣ ಕ್ರಮಗಳ ಮೂಲಕ ಬ್ರಿಮ್ಸ್ ವೈದ್ಯರು, ಅಲ್ಲಿನ ಸಿಬ್ಬಂದಿಗೆ ಚುರುಕು ಮುಟ್ಟಿಸಿದ್ದರು. ಇದರ ಪರಿಣಾಮ ವೈದ್ಯಕೀಯ ಸಂಸ್ಥೆ ಸುಧಾರಣೆಯ ಹಳಿ ಮೇಲೆ ಹೊರಟಿತ್ತು. ಆದರೆ, ಪ್ರಭಾವಿಗಳ ಸಂಬಂಧಿಕರ ಲಾಬಿ ಎಷ್ಟರಮಟ್ಟಿಗೆ ಕೆಲಸ ಮಾಡಿತ್ತೆಂದರೆ ಸುಧಾರಣೆ ಮೂಲಕ ಜನರಿಗೆ ಅತ್ಯುತ್ತಮ ಸೇವೆ ಒದಗಿಸಲು ಮುಂದಾಗಿದ್ದ ಅನಿರುದ್ಧ್ ಅವರನ್ನೇ ಜಿಲ್ಲೆಯಿಂದ ಎತ್ತಂಗಡಿ ಮಾಡಲಾಗಿತ್ತು. ಆನಂತರ ಬಂದ ಜಿಲ್ಲಾಧಿಕಾರಿಗಳು ಆ ಕಡೆಗೆ ಗಮನವೇ ಹರಿಸಲಿಲ್ಲ.

### ಶೆಟಕಾರ್ ಅವಧಿಯಲ್ಲಿ ಒಂದಿಲ್ಲೊಂದು ಎಡವಟ್ಟು

ಡಾ. ಶಿವಕುಮಾರ ಶೆಟಕಾರ್ ಅವರು ಬ್ರಿಮ್ಸ್ ನಿರ್ದೇಶಕರಾಗಿ ಬಂದ ದಿನದಿಂದಲೂ ಒಂದಿಲ್ಲೊಂದು ಕಾರಣಗಳಿಂದ ವೈದ್ಯಕೀಯ ಸಂಸ್ಥೆ ಸುದ್ದಿಯಲ್ಲಿದೆ. ಬ್ರಿಮ್ಸ್ ನೇಮಕಾತಿ ಟೆಂಡರ್ ಔಷಧಗಳ ಖರೀದಿ ನರ್ಸ್‌ಗಳ ಮೇಲಿನ ಕಿರುಕುಳ ಅಸಮರ್ಪಕ ಚಿಕಿತ್ಸೆ ಆಡಳಿತದಲ್ಲಿ ಬಿಗಿ ಇಲ್ಲದಿರುವುದು ದಕ್ಷತೆಯ ಕೊರತೆ ಹೀಗೆ ಅನೇಕ ಕಾರಣಗಳಿಂದ ಸಂಸ್ಥೆ ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ. ಇದನ್ನೆಲ್ಲ ಮನಗಂಡೇ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರು ಇದನ್ನು ಗಂಭೀರವಾಗಿ ಪರಿಗಣಿಸಿ ಶೆಟಕಾರ್ ಅವರನ್ನು ಎತ್ತಂಗಡಿ ಮಾಡಿದ್ದರು. ಆದರೆ ಶೆಟಕಾರ್ ಕೆಎಟಿ ಮೂಲಕ ತಡೆಯಾಜ್ಞೆ ತಂದು ಸೇವೆಯಲ್ಲಿ ಮುಂದುವರೆದಿದ್ದಾರೆ. ಆದರೆ ವೈದ್ಯಕೀಯ ಸೇವೆಗಳು ಸುಧಾರಣೆ ಕಂಡಿಲ್ಲ. ನಡೆದಿದೆ ಎನ್ನಲಾದ ಅಕ್ರಮಗಳ ಮೂಲಕ ಬ್ರಿಮ್ಸ್ ಸದ್ದು ಮಾಡಿದೆ. ಹೀಗಾಗಿಯೇ ಈಶ್ವರ ಖಂಡ್ರೆ ಅವರು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಅವರಿಗೆ ಪತ್ರ ಬರೆದು ನಿವೃತ್ತ ನ್ಯಾಯಾಧೀಶರಿಂದ ಅಕ್ರಮದ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ. ಬ್ರಿಮ್ಸ್‌ನಲ್ಲಿ ದೊಡ್ಡ ಮಟ್ಟದ ಸುಧಾರಣೆಯ ಮಾತುಗಳನ್ನು ಆಡಿದ್ದಾರೆ.

### ಚುರುಕು ಮುಟ್ಟಿಸಿದ ಖಂಡ್ರೆ

ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಬಂದ ನಂತರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಬ್ರಿಮ್ಸ್ ಅಧಿಕಾರಿಗಳ ಸಭೆ ನಡೆಸಿ ಚುರುಕು ಮುಟ್ಟಿಸಿದರು. ತಳವೂರಿದ್ದ ಕೆಲವರನ್ನು ಬೇರೆಡೆ ಎತ್ತಂಗಡಿ ಸಹ ಮಾಡಿಸಿದ್ದರು. ಹಳೆಯ ಆಸ್ಪತ್ರೆಯ ನವೀಕರಣ ವಿಶೇಷ ಕಾಳಜಿ ವಹಿಸಿ ಕ್ಯಾಥ್‌ಲ್ಯಾಬ್ ಆರಂಭಿಸಿದರು. ಆದರೆ ತಜ್ಞ ವೈದ್ಯರ ನೇಮಕಾತಿ ಆಗದ ಕಾರಣ ಇದುವರೆಗೆ ಅದನ್ನು ಆರಂಭಿಸಲು ಸಾಧ್ಯವಾಗಿಲ್ಲ. ಹೀಗಾಗಿಯೇ ಕ್ಯಾಥ್‌ಲ್ಯಾಬ್ ಅನ್ನು ಕಲಬುರಗಿ ಜಯದೇವ ಹೃದ್ರೋಗ ಸಂಸ್ಥೆಯ ಸುಪರ್ದಿಗೆ ವಹಿಸಿ ಅಲ್ಲಿನ ತಜ್ಞ ವೈದ್ಯರನ್ನು ನಿಯೋಜಿಸಬೇಕೆಂದು ಖಂಡ್ರೆ ಹೇಳಿದ್ದಾರೆ. ಆದರೆ ಇನ್ನಷ್ಟೇ ಈ ಕುರಿತು ನಿರ್ಧಾರವಾಗಬೇಕಿದೆ. ಈ ನಡುವೆ ಬ್ರಿಮ್ಸ್‌ಗೆ ಕ್ಯಾನ್ಸರ್ ಸೆಂಟರ್ ಕೂಡ ಮಂಜೂರಾಗಿದೆ. ಹೀಗೆ ಸರ್ಕಾರದ ಮಟ್ಟದಲ್ಲಿ ಜನರಿಗೆ ಬೇಕಾದ ಸವಲತ್ತುಗಳನ್ನು ಕಲ್ಪಿಸುತ್ತ ಬಂದಿದ್ದಾರೆ. ಆದರೆ ಬ್ರಿಮ್ಸ್ ನಿರ್ದೇಶಕರಿಂದ ಸಿಗದ ಸಹಕಾರದಿಂದ ಪರಿಣಾಮಕಾರಿಯಾಗಿ ಸೇವೆಗಳು ಒದಗಿಸಲು ಸಾಧ್ಯವಾಗಿಲ್ಲ. ತಜ್ಞ ವೈದ್ಯರು ಬೀದರ್‌ಗೆ ಬರಲು ಹಿಂದೇಟು ಹಾಕುತ್ತಿರುವುದು ಇನ್ನೊಂದು ಮುಖ್ಯ ಕಾರಣ.

### ಬ್ರಿಮ್ಸ್ ಸುತ್ತಲೂ ಖಾಸಗಿ ಆಸ್ಪತ್ರೆಗಳು

ಸರ್ಕಾರಿ ಆಸ್ಪತ್ರೆಯ ಸನಿಹದಲ್ಲಿ ಖಾಸಗಿ ಆಸ್ಪತ್ರೆಗಳು ಕ್ಲಿನಿಕ್‌ಗಳು ಕೆಲಸ ನಿರ್ವಹಿಸಬಾರದೆನ್ನುವ ನಿಯಮ ಇದೆ. ಆದರೆ ಬ್ರಿಮ್ಸ್ ಸುತ್ತಲೂ ನಾಯಿ ಕೊಡೆಗಳಂತೆ ಖಾಸಗಿ ಆಸ್ಪತ್ರೆಗಳು ನಿರ್ಮಾಣಗೊಂಡಿವೆ. ಬ್ರಿಮ್ಸ್‌ನಲ್ಲಿ ಕೆಲಸ ನಿರ್ವಹಿಸುತ್ತಲೇ ಕೆಲ ವೈದ್ಯರು ಅವರ ಖಾಸಗಿ ಕ್ಲಿನಿಕ್‌ಗಳಿಗೆ ಹೋಗಿ ಬರುತ್ತಾರೆ. ಹಣದಾಸೆಗೆ ರೋಗಿಗಳಿಗೆ ಬ್ರಿಮ್ಸ್‌ನಲ್ಲಿ ಉತ್ತಮ ಚಿಕಿತ್ಸೆ ಕೊಡುತ್ತಿಲ್ಲ. ರೋಗಿಗಳನ್ನು ಖಾಸಗಿ ಆಸ್ಪತ್ರೆಗಳಿಗೆ ಕಳಿಸಿ ಅವರಿಂದ ಹಣ ಕೀಳುತ್ತಿದ್ದಾರೆ ಎಂಬ ಗಂಭೀರ ಸ್ವರೂಪದ ಆರೋಪಗಳಿವೆ. ಈ ವಿಷಯ ಈಗ ಗುಟ್ಟಾಗೇನೂ ಉಳಿದಿಲ್ಲ.

### ಟೆಂಡರ್‌ನಲ್ಲೂ 'ಪ್ರಭಾವಿ'ಗಳು

ಬ್ರಿಮ್ಸ್‌ನಲ್ಲಿ ಔಷಧಿ ಅಗತ್ಯ ವಸ್ತುಗಳ ಪೂರೈಕೆ ವಿವಿಧ ಕಾಮಗಾರಿಗಳ ಟೆಂಡರ್‌ಗಳು ಕೂಡ ಪ್ರಭಾವಿ ವ್ಯಕ್ತಿಗಳು ರಾಜಕಾರಣಿಗಳ ಸಂಬಂಧಿಕರ ಪಾಲಾಗುತ್ತಿವೆ. ಈ ಕಾರಣದಿಂದ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರುತ್ತಿಲ್ಲ. ಯಾರೂ ಕೂಡ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರಶ್ನಿಸುವ ಗೋಜಿಗೆ ಹೋಗುತ್ತಿಲ್ಲ ಎನ್ನುವುದು ಅಷ್ಟೇ ಸತ್ಯ. ಇನ್ನು ನಿಯಮಿತವಾಗಿ ಕೆಲ ನಿರ್ದಿಷ್ಟ ವ್ಯಕ್ತಿಗಳಿಗೆ ಔಷಧಿ ಸರಬರಾಜಿನ ಗುತ್ತಿಗೆ ವಹಿಸಲಾಗುತ್ತಿದೆ ಎಂಬ ಆರೋಪವೂ ಇದೆ. ಬಿಲ್ ಮಾಡುವವರು ಅವರೊಂದಿಗೆ ಶಾಮೀಲಾಗಿದ್ದಾರೆ ಎಂಬ ಮಾತುಗಳು ಕೇಳಿ ಬಂದಿವೆ.

# ಬಿಐಟಿಎಂ: ಒಂದು ದಿನದ ಕಾರ್ಯಾಗಾರ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.10: ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಆರ್‌ಎ-ಎಂಪಿ ಯೋಜನೆಯಡಿ ನಗರದ ಅಲ್ಲೀಪುರದ ಬಳ್ಳಾರಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಮ್ಯಾನೇಜ್ ಮೆಂಟ್ (ಬಿಐಟಿಎಂ) ಕಾಲೇಜು ಸಭಾಂಗಣದಲ್ಲಿ ಇಂಕ್ಯುಬೇಶನ್ ಯೋಜನೆ ಕುರಿತು ಸೋಮವಾರ ಒಂದು ದಿನದ ಜಾಗೃತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

ಬಳ್ಳಾರಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಮ್ಯಾನೇಜ್ ಮೆಂಟ್ ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ

ಡಾ.ರಾಘವೇಂದ್ರ ಜೋಷಿ ಅವರು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಬಿಐಟಿಎಂ ಕಾಲೇಜು ವತಿಯಿಂದ ಒಟ್ಟು 12 ಇಂಕ್ಯೂಬೇಶನ್ ಚಟುವಟಿಕೆಗಳ ಕುರಿತು ಕಾರ್ಯಕ್ರಮ ಹಮ್ಮಿಕೊಂಡಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಗರಿಷ್ಠ ರೂ.03 ಲಕ್ಷದಂತೆ ಪ್ರೋತ್ಸಾಹಧನ ಪಡೆದಿದೆ ಎಂದು ಹೇಳಿದರು.

ಯುವ ಪೀಳಿಗೆಯು ಹೊಸ ವಿಷಯಗಳ ಮೇಲೆ ಅನ್ವೇಷಣೆ ಮಾಡುವ ಆಸಕ್ತಿ ಬೆಳೆಸಿಕೊಳ್ಳಬೇಕು. ಇಂತಹ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳಿಗೆ ಇಂಕ್ಯುಬೇಶನ್ ಸೌಲಭ್ಯಗಳು, ಯಶಸ್ಸಿನ ಕಥೆಗಳ ಬಗ್ಗೆ ಅರಿವು ಮೂಡಿಸಲಾಯಿತು

ಹಾಗೂ ಉದ್ಯಮಿಗಳು ತಮ್ಮ ಅನುಭವ ಮತ್ತು ಅನಿಸಿಕೆ ಹಂಚಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಸೋಮಶೇಖರ್.ಬಿ., ಎಐಎಂಎಲ್ ಹೆಚ್‌ಓಡಿ ಡಾ.ಬಿ.ಎಂ.ವಿದ್ಯಾವತಿ,

ಇನೊವೇಷನ್ ಸೆಂಟರ್ ಹೆಚ್ ಬ್ರೀಕ್ಸ್ ಡಾ.ಮಲ್ಲಿಕಾರ್ಜುನ.ಎ., ಪ್ರಾಧ್ಯಾಪಕಿ ಡಾ.ರೇಣುಕ ಸಾಗರ್, ಸಹಾಯಕ ಪ್ರಾಧ್ಯಾಪಕ ಜಯ ಪ್ರಕಾಶ್, ರಾಯಲ್‌ಗ್ ಇಂಡಸ್ಟ್ರೀಸ್‌ನ ಸಂಸ್ಥಾಪಕ ಹಾಗೂ ನಿರ್ದೇಶಕ ರಾಯಮಂಡ್ ಇರುದಯರಾಜ್ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಇತರರು ಭಾಗವಹಿಸಿದ್ದರು.

# ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಜಾಗೃತಿ ಕಾರ್ಯಕ್ರಮದಲ್ಲಿ
# ಅಕ್ರಮ ದತ್ತು ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಅಪರಾಧ: ನ್ಯಾ.ರಾ.ಎನ್.ಹೊಸಮನೆ




ಬಳ್ಳಾರಿ,ನ.10: ಅಕ್ರಮದತ್ತುಕಾರ್ಯದಲ್ಲಿ ಭಾಗವಹಿಸುವುದು ಅಪರಾಧವಾಗಿದ್ದು, ಭಾಗವಹಿಸಿರುವುದು ದೃಢವಾದಲ್ಲಿ ಕನಿಷ್ಠ 5 ವರ್ಷಗಳ ಜೈಲು ಶಿಕ್ಷೆ ಹಾಗೂ 1 ಲಕ್ಷ ದಂಡ ವಿಧಿಸಲು ಕಾನೂನಿನಡಿ ಅವಕಾಶವಿದೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಎಂದು ತಿಳಿಸಿದರು.

ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಅಭಿಯಾನದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ವಿಶೇಷ ದತ್ತು ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ 'ವಿಶೇಷಚೇತನ ಮಕ್ಕಳ ದತ್ತು ಪ್ರಕ್ರಿಯೆ' ಎಂಬ ಘೋಷವಾಕ್ಯದಡಿ ನಗರದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅಜಾದ್ ವಸತಿ ಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನ ಜೀವ ಅತೀ ಅಮೂಲ್ಯವಾಗಿದ್ದು, ಯಾವುದೇ ಕಾರಣದಿಂದಾಗಿ ಪೋಷಕರು ನವಜಾತ ಶಿಶುಗಳನ್ನು ಬಿಟ್ಟುಹೋಗಿರುವುದು ಕಂಡುಬಂದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಇಲಾಖೆಯ ಗಮನಕ್ಕೆ ತರಬೇಕು. ಅಂತಹ ಮಕ್ಕಳನ್ನು ರಕ್ಷಣೆ ಮಾಡಿ ಆರೈಕೆ ಮಾಡಿ, ಒಳ್ಳೆಯ ಕುಟುಂಬ ಮತ್ತು ಪೋಷಕರಿಗೆ ಮಕ್ಕಳನ್ನು ದತ್ತು ನೀಡುವ ಮೂಲಕ ಅಂತಹ ಮಕ್ಕಳಿಗೆ ಒಳ್ಳೆಯ ಜೀವನ ನೀಡಲು ಸಾಧ್ಯ. ಇದಕ್ಕೆ ಎಲ್ಲರೂ ಸಹಕರಿಸಬೇಕು ಎಂದು ಕೋರಿದರು. ಕಾನೂನಿನ ನೆರವು ಅಗತ್ಯವುಳ್ಳ ಬಡ ಮತ್ತು ನಿರ್ಗತಿಕ ಕುಟುಂಬಗಳು ಉಚಿತವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಕಾನೂನು ಸೇವೆ ಪಡೆದುಕೊಳ್ಳಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರದೇವಿ ಅವರು ಮಾತನಾಡಿ, ಮಕ್ಕಳ ರಕ್ಷಣೆ ಮತ್ತು ಪೋಷಣೆ ನಮ್ಮೆಲ್ಲರ ಹೊಣೆಯಾಗಿದೆ. ಮಕ್ಕಳನ್ನು ಬಾಲ್ಯವಿವಾಹ, ಬಾಲಕಾರ್ಮಿಕ, ಭಿಕ್ಷಾಟನೆ, ಲೈಂಗಿಕ ಕಿರುಕುಳ ಮತ್ತು ಇನ್ನಿತರೆ ಸಂಕಷ್ಟಕ್ಕೆ ಒಳಗಾದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಒಂದುವೇಳೆ ಅಂತಹ ಸಮಸ್ಯೆಗಳು ಎದುರಿಸುತ್ತಿದ್ದರೆ, ಇಲ್ಲವೇ ಕಂಡುಬಂದಲ್ಲಿ ನಿರ್ಭಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1098, 112 ಗೆ ಕರೆ ಮಾಡಬೇಕು. ಮಾಹಿತಿ ನೀಡಿದವರನ್ನು ಗೌಪ್ಯವಾಗಿಡಲಾಗುವುದು ಎಂದು ತಿಳಿಸಿದರು.

ಎಲ್ಲಾ ಶಾಲೆಗಳಲ್ಲಿ ಮಕ್ಕಳಿಗೆ ಮಕ್ಕಳ ಸುರಕ್ಷತೆ ಕುರಿತು ಅರಿವು ಮೂಡಿಸುವುದು ಅಗತ್ಯ. ಪ್ರತಿ ಶಾಲೆಯಲ್ಲಿ ದೂರು ಪೆಟ್ಟಿಗೆಯನ್ನು ನಿರ್ವಹಿಸಿ ದೂರುಗಳನ್ನು ಪ್ರತಿ ತಿಂಗಳು ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

ಮಕ್ಕಳ ವಿಶೇಷ ಪೊಲೀಸ್ ಘಟಕದ ಸಿಬ್ಬಂದಿ ಲಲಿತಮ್ಮ ಅವರು ಮಾತನಾಡಿ, ಹೆಣ್ಣು ಮಕ್ಕಳು ಅಂತರ್ಜಾಲದಲ್ಲಿ ತಮ್ಮ ವೈಯಕ್ತಿಕ ಮಾಹಿತಿ ಮತ್ತು ಫೋಟೋಗಳನ್ನು ಹಂಚಿಕೊಳ್ಳಬಾರದು. ಸೈಬರ್ ಕ್ರೈಮ್ ಕುರಿತು ಅರಿವು ಪ್ರತಿಯೊಬ್ಬರೂ ಹೊಂದಬೇಕು ಎಂದು ಹೇಳಿದರು.

ನಂತರ ಮಕ್ಕಳ ವಿಶೇಷ ಪೊಲೀಸ್ ಘಟಕದ ಸೇವೆಗಳು, ಕಾರ್ಯವೈಖರಿ , ಪ್ರತಿ ಪೊಲೀಸ್ ಠಾಣೆಯಿಂದ ತೆರೆದ ಮನೆ ಕಾರ್ಯಕ್ರಮಗಳ ಕುರಿತು ತಿಳಿಸಿದರು. ವಸತಿ ಶಾಲೆಯ ಪ್ರಾಂಶುಪಾಲ ಕೆ.ಎಂ.ಮೂಕಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಮಕ್ಕಳ ಸಹಾಯವಾಣಿ ಸಂಖ್ಯೆ-1098, ಪೊಲೀಸ್ ಸೇವೆ-112, ಸೈಬರ್ ಕ್ರೈಮ್ -1930 ಮತ್ತು ಉಚಿತ ರಾಷ್ಟ್ರೀಯ ಕಾನೂನು ಸೇವೆಗಳ ಸಂಖ್ಯೆ -15100 ಗಳನ್ನು ನೆನಪಿಟ್ಟುಕೊಂಡು ಅಗತ್ಯ ಸಂದರ್ಭಗಳಲ್ಲಿ ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳ ರಕ್ಷಣಾಧಿಕಾರಿ (ಆಸಾಂಸ್ಥಿಕ ಸೇವೆ) ಚನ್ನಬಸಪ್ಪ ಪಾಟೀಲ್ ಅವರು ದತ್ತು ಕುರಿತ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ನಾಗಯ್ಯ ಹಿರೇಮಠ, ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್, ಮಕ್ಕಳ ಸಹಾಯವಾಣಿ ಸಂಯೋಜಕ ಕೆ. ಆನಂದ, ಮಿಷನ್ ಶಕ್ತಿ ಸಂಯೋಜಕಿ ಶಹಜಹಾನ್, ದತ್ತು ಸಂಸ್ಥೆಯ ಸಿಬ್ಬಂದಿ ಗಣೇಶ್ ಸೇರಿದಂತೆ ವಸತಿ ಶಾಲೆಯ ಶಿಕ್ಷಕರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಹಾಗೂ ವಸತಿ ನಿಯಲದ 300ಕ್ಕೂ ಹೆಚ್ಚು ಮಕ್ಕಳು ಉಪಸ್ಥಿತರಿದ್ದರು.

# ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಅರ್ಜಿ ಆಹ್ವಾನ

ಬಳ್ಳಾರಿ,ನ.10: ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿವಾರು ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ತಾತ್ಕಾಲಿಕ ಹುದ್ದೆಗಳಿಗೆ ಗೌರವಧನ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಸಂಡೂರು ತಾಲ್ಲೂಕಿನ ಗೊಲ್ಲಲಿಂಗಮ್ಮನ ಹಳ್ಳಿ ಗ್ರಾಪಂ- 01, ಕಂಪ್ಲಿ ತಾಲ್ಲೂಕಿನ ನಂ.10 ಮುದ್ದಾಪುರ ಗ್ರಾಪಂ- 01, ಸಿರುಗುಪ್ಪ ತಾಲ್ಲೂಕಿನ ಹಚ್ಚೊಳ್ಳಿ, ಕೆಂಚನಗುಡ್ಡ ಗ್ರಾಪಂ- 02 ಸೇರಿ ಒಟ್ಟು 04 ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳು ಖಾಲಿಯಿದ್ದು, ಆಯಾ ತಾಲ್ಲೂಕಿನ ತಾಪಂ ಕಾರ್ಯ ನಿರ್ವಹಣಾ ಅಧಿಕಾರಿಗಳ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ನಿಯಮಾನುಸಾರ ನೇಮಕ ಮಾಡಲಾಗುವುದು.

ಈ ಹುದ್ದೆಗಳಿಗೆ ಮಾಸಿಕ ಗೌರವಧನ ರೂ.10,000 ಇರುತ್ತದೆ. ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರುವ ವಿಕಲಚೇತನರು (ಕರ್ತವ್ಯ ನಿರ್ವಹಿಸಲು ಸಮರ್ಥರಿರುವವರು) ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಗಳನ್ನು ಆಯಾ ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್ 26 ಕೊನೆಯ ದಿನ.

**ಅರ್ಹತೆ:**

ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಸ್ಥಳಿಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು (ಸ್ಥಳಿಯರಾಗಿರಬೇಕು). ವಯೋಮಿತಿ 18-45 ವರ್ಷದ ಆರೋಗ್ಯವಂತರಾಗಿರಬೇಕು. ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು. ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

ವಿಕಲಚೇತನರಕ್ಷೇತ್ರದಲ್ಲಿ ಅನುಭವ ಹೊಂದಿರಬೇಕು. ಅಂಗವಿಕಲರಾಗಿರಬೇಕು, ಭಾಗಶ: ಅಂಧರು, ಭಾಗಶ:ಶ್ರವಣ ದೋಷವುಳ್ಳವರು, (ಮೈಲ್ಡ್ ಮತ್ತು ಮಾಡರೇಟ್) ಹಾಗೂ ದೈಹಿಕ ಅಂಗವಿಕಲರಿಗೆ ಅವಕಾಶ ಕಲ್ಪಿಸುವುದು.

ಮೂರು ರೀತಿಯ ಅಂಗವಿಕಲರಿಗೆ ಸಮಾನವಾಗಿ ಆಯ್ಕೆ ಮಾಡಬೇಕು ಒಂದು ವರ್ಗದ ಅಂಗ ವಿಕಲರಿಗೆ ಆಯ್ಕೆಗೆ ಲಭ್ಯವಿಲ್ಲದಿದ್ದಲ್ಲಿ ಇನ್ನೊಂದು ವರ್ಗದಲ್ಲಿರುವ ಅಂಗವಿಕಲ ಅಭ್ಯರ್ಥಿ ಆಯ್ಕೆ ಮಾಡಲು ಕ್ರಮ ಕೈಗೊಳ್ಳಬೇಕು. ಮಹಿಳೆಯರಿಗೆ ಮೊದಲ ಆದ್ಯತೆ ನೀಡಬೇಕು. ಅಂಗವಿಕಲರಿಗೆ ಶೇ.40 ಕ್ಕಿಂತ ಮೇಲ್ಪಟ್ಟಿರಬೇಕು. ಅಂಗವಿಕಲರ ಬಗ್ಗೆ ವೈದ್ಯಕೀಯ ಮಂಡಳಿ ಪ್ರಮಾಣ ಪತ್ರ (ಗುರುತಿನ ಚೀಟಿ ಯುಡಿಐಡಿ ಕಾರ್ಡ್) ಹೊಂದಿರಬೇಕು. ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಸಂಚರಿಸಿ ಮಾಹಿತಿ/ಸೌಲಭ್ಯ ಕಲ್ಪಿಸಲು ಸಧೃಡರಾಗಿರಬೇಕು. ಗೌರವಧನ ಅವಧಿ ಮುಂದುವರಿಸುವ ಬಗ್ಗೆ ಒಂದು ವರ್ಷದ ನಂತರ ಅವರ ಕಾರ್ಯ ವೈಖರಿಗೊಳಪಟ್ಟಿದ್ದು ಮುಂದುವರಿಸುವ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ಆಯ್ಕೆ ಮಾಡುವಾಗ ಸರ್ಕಾರ ನಿಗದಿಪಡಿಸಿರುವ ಕರ್ತವ್ಯಗಳನ್ನು ನಿರ್ವಹಿಸಲು

"ಸಮರ್ಥಕ" ಎಂಬ ಬಗ್ಗೆ ಪರಿಶೀಲಿಸಿ ಆಯ್ಕೆ ಮಾಡುವುದು. ಹುದ್ದೆಯು ಗೌರವಧನದ ಆಧಾರದ ಮೇಲೆ ಇರುವುದರಿಂದ ಇವರನ್ನು ಯಾವಾಗ ಬೇಕಾದರು ಕೆಲಸದಿಂದ ತೆಗೆದು ಹಾಕಬಹುದಾಗಿ/ಬಿಡುಗಡೆ ಮಾಡಬಹುದಾಗಿದೆ. ಗೌರವಧನದ ಆಧಾರದ ಮೇಲೆ ಕೆಲಸ ನಿರ್ವಹಿಸುವುದರಿಂದ ಖಾಯಂಗೊಳಿಸುವಂತೆ ಕೋರಲು ಅವಕಾಶವಿಲ್ಲ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಎಂಆರ್‌ಡಬ್ಲ್ಯೂ ಗಳಾದ ಸಂಡೂರು (ಕರಿಬಸಜ್ಜ) ಮೊ.9632052270, ಕಂಪ್ಲಿ/ಬಳ್ಳಾರಿ (ರಾಣಿ)ಮೊ.8880875620, ಸಿರುಗುಪ್ಪ (ಸಾಬೇಶ) ಮೊ.9743509698, ಜಿಲ್ಲಾ ಸಂಯೋಜಕ (ಕೆ.ಟೇಕರಾಜ್) ಮೊ.9481320119 ಮತ್ತು ನಗರದ ಕಂಟೋನ್ ಮೆಂಟ್ ಪ್ರದೇಶದ ಶಾಂತಿಧಾಮ ಆವರಣದ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಥವಾ ಕಚೇರಿ ದೂ.08392267886 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.13 ರಂದು ರಾಷ್ಟ್ರೀಯ ಲೋಕ್ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.10: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಡಿಸೆಂಬರ್ 13 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ.

*ಸೂಚನೆ:*

ಪ್ರತಿದಿನ ಎಲ್ಲಾ ನ್ಯಾಯಾಲಯಗಳಲ್ಲಿ ಮೆಗಾ-ಲೋಕ್ ಅದಾಲತ್ ಗೆ ಸಂಬಂಧಿಸಿದಂತೆ ಪೂರ್ವಭಾವಿ ಬೈಠಕ್‌ಗಳು ನಡೆಯುತ್ತಲಿರುತ್ತವೆ.

ಹೆಚ್ಚಿನ ಮಾಹಿತಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ದೂ.08392-278077 ಹಾಗೂ ಎನ್‌ಎಎಲ್‌ಎಸ್‌ಎ ಸಹಾಯವಾಣಿ ಸಂಖ್ಯೆ 15100 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

# ನ.14 ರಂದು ನೀರಾವರಿ ಸಲಹಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.10: ಪ್ರಸ್ತಕಸಾಲಿಗೆ ತುಂಗಭದ್ರಾ ಜಲಾಶಯದ ಹಿಂಗಾರು ಹಂಗಾಮಿಗೆ ಲಭ್ಯವಿರುವ ನೀರನ್ನು ತುಂಗಾಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳಿಗೆ ಒದಗಿಸುವ ಕುರಿತು ಚರ್ಚಿಸಲು ನ.14 ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ವಿಧಾನಸೌಧದ 3 ನೇ ಮಹಡಿಯ ಕೊಠಡಿ ಸಂಖ್ಯೆ 334 ರ ಸಮ್ಮೇಳನ ಸಭಾಂಗಣದಲ್ಲಿ 125 ನೇ ನೀರಾವರಿ ಸಲಹಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ.

ಉಪಮುಖ್ಯಮಂತ್ರಿ, ಜಲಸಂಪನ್ಮೂಲ ಇಲಾಖೆ ಹಾಗೂ ಬೆಂಗಳೂರು ನಗರಭಿವೃದ್ಧಿ ಸಚಿವರಾದ ಡಿ.ಕೆ.ಶಿವಕುಮಾರ್ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು, ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಮತ್ತು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರೂ ಆದ ಶಿವರಾಜ ಎಸ್. ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಸಭೆಗೆ ಸಂಬಂಧಿಸಿದ ಸಚಿವರು, ಲೋಕಸಭಾ ಸದಸ್ಯರು, ವಿಧಾನಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು, ರಾಜ್ಯಸಭಾ ಸದಸ್ಯರು ಹಾಗೂ ನೀರಾವರಿ ಸಲಹಾ ಸಮಿತಿಯ ಸದಸ್ಯರು, ರೈತ ಮುಖಂಡರು ಭಾಗವಹಿಸಿ ತಮ್ಮ ಸಲಹೆ ಸೂಚನೆ ನೀಡಬಹುದು ಎಂದು ತುಂಗಾಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ಆದ ತುಂಗಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

# ಬಾಲಕ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.10: ನಗರದ ಹೊಸಪೇಟೆ ರಸ್ತೆಯ ವಿನಾಯಕ ನಗರದ ರಂಗ ಮೆಡಿಕಲ್ ಸ್ಟೋರ್ ಹತ್ತಿರ ನಿವಾಸಿ ಅರುಣ್ ಕುಮಾರ್.ಬಿ ಎನ್ನುವ 14 ವರ್ಷದ ಬಾಲಕ ಚೆಳ್ಳಗುರ್ಕಿಯ ಗಾಂಧಿತತ್ವ ವಸತಿ ಶಾಲೆಯ 08 ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, ದಸರಾ ಹಬ್ಬದ ರಜೆಗೆ ಮನೆಗೆ ಬಂದು ಮರಳಿ ನ.03 ರಂದು ಶಾಲೆಗೆ ಹೋಗುವುದಾಗಿ ಹೇಳಿ ಕಾಣೆಯಾಗಿದ್ದು, ಈ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಾಲಕನ ಪತ್ತೆಗೆ ಸಹಕರಿಸಬೇಕು ಎಂದು ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಚಹರೆ ಗುರುತು:

ಅಂದಾಜು 4 ವರೆ ಅಡಿ ಎತ್ತರ, ಕೋಲು ಮುಖ, ಬಿಳಿ ಮೈಬಣ್ಣ,



ಕಪ್ಪು ಕೂದಲು ಹೊಂದಿರುತ್ತಾನೆ. ಹೊಟ್ಟೆಯ ಬಲಭಾಗದಲ್ಲಿ ಸುಟ್ಟ ಹಳೆಯ ಗಾಯದ ಗುರುತು ಇರುತ್ತದೆ.

ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಅರ್ಧ ತೋಳಿನ ಟಿ-ಶರ್ಟ್ ಹಿಂಬದಿ ಅರುಣ್ ಎಂದು ಇಂಗ್ಲೀಷ್ ಅಕ್ಷರದಲ್ಲಿ ಪ್ರಿಂಟ್ ಇದೆ ಹಾಗೂ ನೇವಿ ಬ್ಲೂ ಬಣ್ಣದ ನೈಟ್ಸ್ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾನೆ.

ಬಾಲಕನ ಬಗ್ಗೆ ಸುಳಿವು ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, ಮೊ.9480803049 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.13 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.10: ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2 ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕಾರ್ಯ ಕೈಗೊಳ್ಳುತ್ತಿರುವುರಿಂದ 11 ಕೆ.ವಿ. ಫೀಡರನಲ್ಲಿ ನ.13 ರಂದು ಬೆಳಿಗ್ಗೆ 10 ರಿಂದ ಸಂಜೆ 05 ಗಂಟೆಯವರೆಗೆ ಎಫ್-9 ವ್ಯಾಪ್ತಿಯ ನೆಹರು ಕಾಲೋನಿ, ಎಸ್.ಎನ್.ಪೇಟೆ 1ನೇ, 2ನೇ, 4ನೇ, 5ನೇ ಮತ್ತು 6ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಡಿಎಆರ್ ಗ್ರೌಂಡ್, ಕೂಲ್ ಕಾರ್ನರ್, ಡಬಲ್ ರಸ್ತೆ, ಕೋಲಾಚಲಂ ಕಾಂಪೌಂಡ್, ಗಡಿಗಿ ಚೆನ್ನಪ್ಪ ವೃತ್ತ, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್, ಹಳೆಯ ತಾಲ್ಲೂಕು ಕಚೇರಿ, ಹಳೆಯ ಜಿಲ್ಲಾಧಿಕಾರಿಗಳ ಕಚೇರಿ, ರೈಲ್ವೇ ಸ್ಟೇಷನ್ ರೋಡ್ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.11 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ನ.10: ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2 ರ ವ್ಯಾಪ್ತಿಯ ಜಿಲ್ಲಾ ಕೋರ್ಟ್ ಸಂಕೀರ್ಣದ ವಿದ್ಯುತ್ ಲೈನ್ ನ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ನ.11 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ 11 ಕೆ.ವಿ ಫೀಡರ್‌ನ ಎಫ್-6 ವ್ಯಾಪ್ತಿಯ ನಗರದ ತಾಳೂರು ರೋಡ್, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ, ಕನ್ನಡ ನಗರ, ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಅವಂಬಾವಿ, ಜಿಲ್ಲಾ ಕೋರ್ಟ್ ಸಂಕೀರ್ಣ ಪ್ರದೇಶಗಳ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯಕರ ಜೀವನ ಶೈಲಿಯಿಂದ ಕ್ಯಾನ್ಸರ್ ರೋಗ ತಡೆಗಟ್ಟಬಹುದು: ಡಿಹೆಚ್‌ಓ ಡಾ.ರಮೇಶ್

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ,ನ.10: ಆರೋಗ್ಯಕರ ಜೀವನ ಶೈಲಿಯಿಂದ ಕ್ಯಾನ್ಸರ್ ರೋಗವನ್ನು ತಡೆಗಟ್ಟಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

2014 ರಲ್ಲಿ ಪ್ರಾರಂಭಿಸಲಾದ ರಾಷ್ಟ್ರೀಯ ಕ್ಯಾನ್ಸರ್ ಜಾಗೃತಿ ದಿನವನ್ನು ಪ್ರತಿ ವರ್ಷ ನವೆಂಬರ್ 7 ರಂದು ಆಚರಿಸಲಾಗುತ್ತದೆ. ಕ್ಯಾನ್ಸರ್ ತಡೆಗಟ್ಟುವಿಕೆ, ಕ್ಯಾನ್ಸರ್‌ನ ವಿವಿಧ ರೂಪಗಳು, ಅಪಾಯಕಾರಿ ಅಂಶಗಳು ಮತ್ತು ತಡೆಗಟ್ಟುವಿಕೆ, ಕ್ಯಾನ್ಸರ್ ಲಕ್ಷಣಗಳನ್ನು ಮೊದಲೇ ಪತ್ತೆ ಹಚ್ಚುವುದು ಮತ್ತು ಚಿಕಿತ್ಸೆಯ ಮಹತ್ವದ ಬಗ್ಗೆ ಜನರಿಗೆ ಮಾಹಿತಿಯನ್ನು ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

**ಮುಂಜಾಗ್ರತೆ ವಹಿಸಬೇಕಾದ ಕ್ರಮ:**

ಧೂಮಪಾನ ಮತ್ತು ತಂಬಾಕು ಸೇವನೆಯು ಬಾಯಿ ಕ್ಯಾನ್ಸರ್ ಮತ್ತು ಶ್ವಾಸಕೋಶ ಕ್ಯಾನ್ಸರ್‌ಗಳಿಗೆ ಪ್ರಮುಖ ಕಾರಣವಾಗಿದ್ದು, ಅತಿಯಾದ ಮದ್ಯಪಾನ ಯಕೃತ್ತು, ಸ್ತನ ಮತ್ತು ಜೀರ್ಣಾಂಗಗಳ ಕ್ಯಾನ್ಸರ್ ಉಂಟಾಗಬಹುದು. ಹಾಗಾಗಿ ಅವುಗಳಿಂದ ದೂರವಿರಬೇಕು ಎಂದಿದ್ದಾರೆ.

ಆರೋಗ್ಯಕರ ಆಹಾರ, ಹಣ್ಣುಗಳು, ತರಕಾರಿಗಳು, ಧಾನ್ಯಗಳಿಂದ ಸಮೃದ್ಧವಾಗಿರುವ ಸಮತೋಲಿತ ಆಹಾರ ಸೇವಿಸಬೇಕು. ಸಂಸ್ಕರಿಸಿದ ಆಹಾರ ಕಡಿಮೆ ಮಾಡಬೇಕು. ನಿಯಮಿತ ದೈಹಿಕ ಚಟುವಟಿಕೆ ಮಾಡುವುದರಿಂದ ಕ್ಯಾನ್ಸರ್ ಅಪಾಯ ತಡೆಗಟ್ಟಬಹುದಾಗಿದೆ.

ಸೂರ್ಯನ ಬೆಳಕಿಗೆ ಒಡ್ಡಿಕೊಳ್ಳುವುದನ್ನು ತಪ್ಪಿಸಬೇಕು. ಚರ್ಮದ ಕ್ಯಾನ್ಸರ್‌ಗೆ ತಡೆಗಟ್ಟಲು ಹಾನಿಕಾರಕ ಯುವಿ ಕಿರಣಗಳಿಂದ ಚರ್ಮವನ್ನು ರಕ್ಷಿಸಿಕೊಳ್ಳಬೇಕು. ನಿಯಮಿತ ಮಮೊಗ್ರಾಮ್‌ಗಳು, ಪ್ಯಾಪ್ ಸ್ಮೀಯರ್‌ಗಳು ಮತ್ತು ಕೊಲೊನೋಸ್ಕೋಪಿಗಳಂತಹ ಸ್ಕ್ರೀನಿಂಗ್ ಗಳನ್ನು ಆಗಾಗ ಮಾಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

ಪ್ರಸ್ತುತ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ಸೋಮವಾರ ಹಾಗೂ ಗುರುವಾರ ದಿನಗಳಂದು ಹುಬ್ಬಳ್ಳಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಿಂದ ಕ್ಯಾನ್ಸರ್ ತಜ್ಞವೈದ್ಯರಿಂದ ಆರೋಗ್ಯ ತಪಾಸಣೆ ನಡೆಸಲಾಗುತ್ತದೆ ಮತ್ತು ಕಿಮೋಥೆರಫಿ ಚಿಕಿತ್ಸೆ ನೀಡಲಾಗುತ್ತದೆ. ಜಿಲ್ಲಾ ಆಸ್ಪತ್ರೆಯಲ್ಲಿ ಕೀಮೋಥೆರಫಿ ಚಿಕಿತ್ಸೆ ಪಡೆಯುವ ರೋಗಿಗಳಿಗೆ ವಾರ್ಡ್‌ನ ಸೌಲಭ್ಯವಿದೆ.

ಪ್ರಸ್ತುತ ವರ್ಷ ಏಪ್ರೀಲ್ ನಿಂದ ಅಕ್ಟೋಬರ್ ತಿಂಗಳವರೆಗೆ ತಪಾಸಣೆಯಾದ ಒಟ್ಟು ಕ್ಯಾನ್ಸರ್ ಪ್ರಕರಣಗಳು-96, ಕೀಮೋಥೆರಫಿ ಚಿಕಿತ್ಸೆಯಲ್ಲಿರುವ ಒಟ್ಟು ಪ್ರಕರಣ-45, ಬಾಯಿ ಕ್ಯಾನ್ಸರ್-14, ಗರ್ಭಕಂಠದ ಕ್ಯಾನ್ಸರ್-16, ಯಕೃತ್ ಕ್ಯಾನ್ಸರ್-2, ಅಂಡಾಶಯ ಕ್ಯಾನ್ಸರ್-4, ಶ್ವಾಸಕೋಶ ಕ್ಯಾನ್ಸರ್-1, ಸ್ತನ ಕ್ಯಾನ್ಸರ್-8 ಪ್ರಕರಣಗಳು ಕಂಡುಬಂದಿವೆ ಎಂದು ಡಿಹೆಚ್‌ಓ ಮಾಹಿತಿ ನೀಡಿದ್ದಾರೆ.

ತಾಲ್ಲೂಕು ಮಟ್ಟದಲ್ಲಿ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ಸಾರ್ವಜನಿಕರಿಗೆ ವಿವಿಧ ಹಂತಗಳಲ್ಲಿ ಕ್ಯಾನ್ಸರ್ ಕುರಿತು ಜಾಗೃತಿ ಬಗ್ಗೆ ಅರಿವು ಮೂಡಿಸಲಾಗುತ್ತಿದ್ದು, ಖಾಸಗಿ ಸಂಸ್ಥೆಗಳ ಸಹಯೋಗದೊಂದಿಗೆ ಕ್ಯಾನ್ಸರ್ ಜಾಗೃತಿ ಹಾಗೂ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ.

ಸಾರ್ವಜನಿಕರು ಇದರ ಕುರಿತು ಮಾಹಿತಿ ಪಡೆದು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.10: ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ ಕಾರ್ಯಕ್ರಮಗಳಡಿ ಪ್ರಸಕ್ತ ಶೈಕ್ಷಣಿಕ ಸಾಲಿಗೆ ಪರಿಶಿಷ್ಟ ಜಾತಿಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ಹಾಗೂ ಪ್ರೋತ್ಸಾಹಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟ್ ತಿತಿಶಿ.ತಿ.ಇಚಿಡಿ.ಟುಥಿ.ಟಿ ಅಥವಾಹಣಣಥಿ://ಠಿ.ಠಿಥಣಟಚಿಣಡುಥಿ.ಇಚಿಡಿ-ಟಚಿಣಚಿಇಚಿ.ರಠತ.ಟಿ/ಠಟಜರಠಚಿರಜ.ಛಿಠಥ ಲಿಂಕ್ ನಲ್ಲಿ ಅರ್ಜಿ ಸಲ್ಲಿಸಬಹುದು.

**ಸೂಚನೆಗಳು:**

ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿಗಳಲ್ಲಿ ವ್ಯಾಸಂಗ ಮಾಡಿ ಪ್ರಥಮ ಬಾರಿಗೆ, ಪ್ರಥಮ ಪ್ರಯತ್ನದಲ್ಲಿ ಪಾಸಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸಿ ವಿದ್ಯಾಥಿವೇತನ ಪಡೆದ ವಿದ್ಯಾರ್ಥಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಹಿಂದಿನ ಸಾಲಿನಲ್ಲಿ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು ಪ್ರಸಕ್ತ ಸಾಲಿಗೆ ಅರ್ಜಿ ಸಲ್ಲಿಸಬಹುದು.

ಕಳೆದ ಸಾಲಿನಲ್ಲಿ ವಿವಿಧ ಕಾರಣಗಳಿಂದ ವಿದ್ಯಾರ್ಥಿ ವೇತನ ಮಂಜೂರಾಗದ ಹಾಗೂ ರಿಜೆಕ್ಟ್ ಆಗಿರುವ ವಿದ್ಯಾರ್ಥಿಗಳು ಮಾತ್ರ ಪ್ರಸಕ್ತ ಸಾಲಿನಲ್ಲಿ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗಳಿಗೆ ಎನ್‌ಪಿಸಿಐ ಆಧಾರ್ ಸೀಡಿಂಗ್ ಮಾಡಿಸಿರಬೇಕು. ತೊಂದರೆಯಿದ್ದಲ್ಲಿ ಅಂಚೆ ಕಚೇರಿಯಲ್ಲಿ ಖಾತೆಯನ್ನು ತೆರೆಯಬೇಕು. ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಪ್ರತಿ ಶೈಕ್ಷಣಿಕ ಸಾಲಿಗೆ ಆನ್‌ಲೈನ್ ಅರ್ಜಿ ಸಲ್ಲಿಸಬಹುದು.

ಪ್ರಸಕ್ತ ಸಾಲಿನಿಂದ ಪ್ರತಿ ಶಾಲಾ ಮುಖ್ಯೋಪಾಧ್ಯಾಯರು, ಹಾಗೂ ಕಾಲೇಜು ಪ್ರಾಂಶುಪಾಲರು ಗಳಿಗೆ ಸಬಲೀಕರಣ ಅಧಿಕಾರಿ ಅಥವಾ ಸಂಸ್ಥೆಯ ನೋಡಲ್ ಅಧಿಕಾರಿಯನ್ನು ನಿಯೋಜಿಸಿದ್ದು, ತಾಲ್ಲೂಕು ಲಾಗಿನ್‌ನಲ್ಲಿ ಸೇರ್ಪಡೆ ಮಾಡಿಕೊಳ್ಳಲು ಕ್ರಮವಹಿಸಬೇಕು. ನಂತರ ಸೇರ್ಪಡೆಯಾದ ಅಧಿಕಾರಿಗಳ ಇ-ಕೆವೈಸಿ ವಿವರಗಳನ್ನು ಅಪ್ಡೇಟ್ ಮಾಡಿ ಅನುಮೋದಿಸುತ್ತಾರೆ.

ವಿದ್ಯಾರ್ಥಿಗಳು ಕಡ್ಡಾಯವಾಗಿ ಮೊದಲು ಬಯೋಮೆಟ್ರಿಕ್ ಇ-ಧೃಢಿಕರಣ/ಎನ್‌ಎಸ್‌ಪಿ ಒಟಿಆರ್ ನೊಂದಣಿಯನ್ನು ಮಾಡಿಸಿದ ನಂತರ ಎಸ್‌ಎಸ್‌ಪಿ ಯಲ್ಲಿ ವಿದ್ಯಾರ್ಥಿವೇತನ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಮೊದಲನೇ ರೈಲ್ವೆ ಗೇಟ್ ಹತ್ತಿರದ ಡಾ.ಬಿ.ಆರ್.ಅಂಬೇಡ್ಕರ್ ಭವನದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ(ಗ್ರೇಡ್-1) ಕಚೇರಿ ಅಥವಾ ದೂ.08392-244738, ಮೊ.9480843073 ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವಸ್ಥಾನಗಳು ಮನಸ್ಸನ್ನು ಪರಿವರ್ತಿಸುವ ತಾಣಗಳಾಗಬೇಕು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ದೇವಸ್ಥಾನಗಳು ಜನರ ಮನಸ್ಸುಗಳನ್ನು ಪರಿವರ್ತಿಸಿ ಮನಸ್ಸಿಗೆ ಶಾಂತಿ, ನೆಮ್ಮದಿ ನೀಡುವ ತಾಣವಾಗಬೇಕು ಎಂದು ಮುಧೋಳ ಹೇಮರಡ್ಡಿ ಮಲ್ಲಮ್ಮ ಶಿಕ್ಷಣ ಸಂಸ್ಥೆ ಅಧ್ಯಕ್ಷ ದಯಾನಂದ ಪಾಟೀಲ ಹೇಳಿದರು.

ತಾಲ್ಲೂಕಿನ ಮಾಚಕನೂರ ಗ್ರಾಮದಲ್ಲಿ ಈಚೆಗೆ ಹೇಮರೆಡ್ಡಿ ಮಲ್ಲಮ್ಮ, ಮಹಾಯೋಗಿ ವೇಮನರ ದೇವಸ್ಥಾನ ಸೇವಾ ಸಮಿತಿ ಹಮ್ಮಿಕೊಂಡಿದ್ದ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ದೇವಸ್ಥಾನಗಳಲ್ಲಿ ಸ್ವಚ್ಛ ಪರಿಸರ, ಪಾವಿತ್ರ್ಯತೆ ಕಾಪಾಡಿಕೊಳ್ಳಬೇಕು ಎಂದ ಪಾಟೀಲ, ಧಾರ್ಮಿಕ ಕಾರ್ಯಕ್ರಮಗಳ ಯಶಸ್ವಿಗೆ ರಾಜಕಾರಣ ಬದಿಗೆ ಸರಿಸಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸಬೇಕು ಎಂದು ಹೇಳಿದರು.

ಆಶೀರ್ವಚನ ನೀಡಿದ ಭೀಮರಾಯನಗುಡಿ ಸಿದ್ಧಾರೂಢ ಮಠದ ಮಾತಾ ಜ್ಞಾನೇಶ್ವರಿದೇವಿ, ಹೇಮರೆಡ್ಡಿ ಮಲ್ಲಮ್ಮನ ಆದರ್ಶ ಗುಣಗಳು ಮಹಿಳಾ ಕುಲಕ್ಕೆ ದಾರಿದೀಪವಾಗಿವೆ. ರೆಡ್ಡಿ ಸಮಾಜ ಸನಾತನ ಪರಂಪರೆ ಬೆಳೆಸಿಕೊಂಡು ಪರೋಪಕಾರಿ ಸಮಾಜವಾಗಿ ಮುನ್ನಡೆಯಬೇಕು ಎಂದರು.

ಸಾನಿಧ್ಯ ವಹಿಸಿದ್ದ ಎರೆಹೊಸಳ್ಳಿಯ ರೆಡ್ಡಿ ಗುರುಪೀಠದ ಪೂಜ್ಯ ವೇಮನಾನಂದ ಶ್ರೀಗಳು, ಮಲ್ಲಮ್ಮನ ದೇವಸ್ಥಾನ ನಿರ್ಮಾಣಕ್ಕೆ ಗ್ರಾಮದ ಸಮಸ್ತ ಸಮಾಜದವರ ಕಾಣಿಕೆಯೂ ಸೇರಿದರೆ ಅದು ಸಕಲರ ಸದ್ಭಾವನಾ ಕೇಂದ್ರವಾಗುತ್ತದೆ. ಆ ಕೆಲಸವನ್ನು ಹಿರಿಯರು, ಯುವಕರು ಮಾಡಬೇಕು ಎಂದು ಹೇಳಿದರು.

ಬಸವಪ್ರಭು ಸ್ವಾಮೀಜಿ ನೇತೃತ್ವ ವಹಿಸಿದ್ದರು. ಮಲ್ಲಯ್ಯ ಗಣಾಚಾರಿ,

ರಮೇಶಗೌಡ ಪಾಟೀಲ ವೇದಿಕೆಯಲ್ಲಿದ್ದರು. ದೇವಸ್ಥಾನ ನಿರ್ಮಾಣಕ್ಕೆ ಭೂಮಿ ದಾನ ಮಾಡಿದ ಆರ್.ಟಿ.ಪಾಟೀಲ ದಂಪತಿಗಳನ್ನು ಸನ್ಮಾನಿಸಲಾಯಿತು.

ಕಾವೇರಿ ಪರಡ್ಡಿ, ಜಯಶ್ರೀ ಕಮಕೇರಿ ಪ್ರಾರ್ಥನೆ ಹಾಡಿದರು. ಹಣಮಂತ ದಾಸರಡ್ಡಿ ಸ್ವಾಗತಿಸಿದರು. ರಮೇಶ ಅಣ್ಣಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಭೀಮನಗೌಡ ಪಾಟೀಲ, ನಿಂಗನಗೌಡ ಪಾಟೀಲ ನಿರೂಪಿಸಿದರು.

## ಅಧ್ಯಕ್ಷ ಉಪಾಧ್ಯಕ್ಷ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ಜಿಲ್ಲೆಯ ರಬಕವಿ–ಬನಹಟ್ಟಿ ಕಾರ್ಯನಿರತ ಪತ್ರಕರ್ತರ ಸಂಘದ 2025–2028 ನೇ ಅವಧಿಗೆ ಅಧ್ಯಕ್ಷರಾಗಿ ರಬಕವಿಯ ಪ್ರಕಾಶ ಕುಂಬಾರ, ಉಪಾಧ್ಯಕ್ಷರಾಗಿ ಬನಹಟ್ಟಿಯ ಮಾಧವಾನಂದಪ್ರಭು ಕೋಪರ್ಡೆ, ಕಾರ್ಯದರ್ಶಿಯಾಗಿ ಚಂದ್ರಶೇಖರ ತುಂಗಳ,

ಖಜಾಂಚಿಯಾಗಿ ಬಸಯ್ಯ ವಸ್ತ್ರದ ಆಯ್ಕೆಯಾಗಿದ್ದಾರೆ.

ಆಯ್ಕೆಯ ಸಂದರ್ಭದಲ್ಲಿ ಪತ್ರಕರ್ತರಾದ ಶಿವಾನಂದ ಮಹಾಬಲಶೆಟ್ಟಿ,

ನೀಲಕಂಠ ದಾತಾರ, ಮಲ್ಲಿಕಾರ್ಜುನ ತುಂಗಳ, ಯಶವಂತ ವಾಜಂತ್ರಿ, ಕಿರಣ ಆಳಗಿ, ವಿಶ್ವಜ ಕಾಡದೇವರ, ಮಹಾದೇವ ತೋಟಗೇರ, ಶಂಭು ಗುಣಕಿ, ಬಸವರಾಜ ಪಟ್ಟಣ ಮುಂತಾದವರಿದ್ದರು.

## ಬೆಣ್ಣೂರಿನಲ್ಲಿ ಪೂಜಾ ಮಹೋತ್ಸವ–ಕೃತಿಗಳ ಲೋಕಾರ್ಪಣೆ

# ಕಲೆ ಕಸುಬು ಕೌಶಲಗಳು ಸಂಸ್ಕೃತಿಯ ಭಾಗವಾಗಬೇಕು: ಬಡಿಗೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ಬದುಕಿಗೆ ಸಂಸ್ಕೃತಿ ವಿಸ್ತಾರದ ಅಗತ್ಯವಿದ್ದು, ನಮ್ಮ ನಡುವೆ ಇರುವ ಸಾಂಪ್ರದಾಯಿಕ ಕಲೆ, ಕಸುಬು, ಭಾಷೆ ಹಾಗೂ ಕೌಶಲ್ಯಗಳು ಜೀವಂತ ಸಂಸ್ಕೃತಿಯ ಭಾಗವಾಗಬೇಕಿದೆ ಎಂದು ಕರ್ನಾಟಕ ಸರ್ಕಾರದ ನಿವೃತ್ತ ಜಂಟಿ ಕಾರ್ಯದರ್ಶಿ ಕೆ.ಆರ್.ಬಡಿಗೇರ ಹೇಳಿದರು.

ಬೆಣ್ಣೂರಿನ ವಿಶ್ವಕರ್ಮ ಸಮಾಜ ಹಾಗೂ ಉತ್ತರ ಕರ್ನಾಟಕ ವಿಶ್ವಕರ್ಮ ಯುವ ಬರಹಗಾರರ ಮತ್ತು ಸಂಶೋಧಕರ ವೇದಿಕೆ ಕಮಲಾಪೂರ ಇವರ ಸಹಯೋಗದಲ್ಲಿ ಬೆಣ್ಣೂರು ಗ್ರಾಮದ ದ್ಯಾಮವ್ವನ ಗುಡಿ ಆವರಣದಲ್ಲಿ ರವಿವಾರ ನಡೆದ ಪ್ರಥಮ ವಿಶ್ವಕರ್ಮ ಪೂಜಾ ಮಹೋತ್ಸವ ಹಾಗೂ ವೀರೇಶ ಬಡಿಗೇರ ಅವರ 'ಬಡಿಗ ವೃತ್ತಿ :ವೈಜ್ಞಾನಿಕ ಚಿಂತನೆ' ಮತ್ತು 'ತಿಂತಣಿ ಮೌನೇಶ್ವರ ವಚನ ಪುಷ್ಪಾಂಜಲಿ' ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಧುನಿಕತೆಯ ಭರಾಟೆಯಲ್ಲಿ ನಾವು ತತ್ವ ಸಂಸ್ಕೃತಿಯಿಂದ ವಸ್ತು ಸಂಸ್ಕೃತಿಯತ್ತ ಆಕರ್ಷಿತರಾಗಿದ್ದೇವೆ, ಹೊರಗಿನ ಜೀವನ, ಸಿದ್ಧವಸ್ತುಗಳಿಗೆ ಬಾಯಿ ತೆರೆದುಕೊಂಡು ನಿಲ್ಲುವ ಭಿಕ್ಷುಕ ಪ್ರವೃತ್ತಿ ನಮ್ಮದಾಗುತ್ತಿದೆ ಎಂದ ಬಡಿಗೇರ, ಸಾಂಪ್ರದಾಯಕ ಕಲೆ, ಕಸುಬು, ಭಾಷೆ ಹಾಗೂ ಕೌಶಲ್ಯಗಳನ್ನು ಜೀವಂತ ಸಂಸ್ಕೃತಿಯ ಭಾಗವಾಗಿ ನೋಡಬೇಕಿದೆ ಎಂದರು.

ಕೃತಿಗಳನ್ನು ಲೋಕಾರ್ಪಣೆಗೊಳಿಸಿದ ಗಂಗಣ್ಣ ಬಡಿಗೇರ, ಬಡಿಗ ಸಮುದಾಯ ಮತ್ತು ಅದರ ಪಾರಂಪರಿಕ ತಿಳುವಳಿಕೆಯನ್ನು ಕೇವಲ ಜಾತಿ, ಸಮಾಜ, ಶಾಸ್ತ್ರೀಯ ಅನುಕಂಪದ ನೆಲೆಗಳಿಂದ ನೋಡದೆ ಸಮುದಾಯದ ಅರಿವಿನ ನೆಲೆಗಳಿಂದ ನೋಡಬೇಕಾದ ಅವಶ್ಯಕತೆಯಿದೆ ಎಂದು ಹೇಳಿದರು.

ಅತಿಥಿಗಳಾಗಿದ್ದ ಅನಿತಾ ಆಚಾರ್ ಮಾತನಾಡಿ, ಶೈಕ್ಷಣಿಕ ರಂಗದಲ್ಲಿ ಸಾಧನೆಗೈದ ಸಾಕಷ್ಟು ಪ್ರತಿಭೆಗಳು ಸಮುದಾಯದಲ್ಲಿದ್ದಾರೆ. ಶಿಕ್ಷಣದ ಮೂಲಕ ಮಹಿಳೆಯರು ಸಮಾಜದ ಮುನ್ನಲೆಗೆ ಬರಬೇಕು ಎಂದು ಹೇಳಿದರೆ, ಕಾರವಾರದ ವಿಶ್ವಕರ್ಮ ಪಿ.ಎಂ ಯೋಜನೆಯ ಸಂಚಾಲಕ ಪ್ರಶಾಂತ, ಯುವಕರು ಸರ್ಕಾರದ ಸೌಲಭ್ಯಗಳನ್ನು ಪಡೆದು ಉದ್ಯೋಗ ಕೈಗೊಂಡು ಆರ್ಥಿಕವಾಗಿ ಬಲಿಷ್ಠರಾಗುವ ಸಂಕಲ್ಪವನ್ನು ಮಾಡಬೇಕು ಎಂದರು.

ಪೂಜಾ ಮಹೋತ್ಸವ ಸಮಿತಿಯ ನಿರ್ದೇಶಕ ವೀರೇಶ ಬಡಿಗೇರ, ಸಮಾಜ ಸಂಘಟನೆಯ ಮೂಲಕ ಸಶಕ್ತವಾಗಬೇಕು. ಒಗ್ಗಟ್ಟಿನೊಂದಿಗೆ ವಿಶ್ವಕರ್ಮ ಸಮಾಜ ಕಟ್ಟುವ ಜವಾಬ್ದಾರಿ ನಮ್ಮದಾಗಬೇಕು ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆಯನ್ನು ಶಿರಸಂಗಿಯ ವಿಶ್ವಕರ್ಮ ಸಮಾಜ ವಿಕಾಸ ಸಂಸ್ಥೆಯ ಅಧ್ಯಕ್ಷ ಪ್ರೊ.ಪಿ.ಬಿ.ಬಡಿಗೇರ ವಹಿಸಿದ್ದರು. ದಿವ್ಯಸಾನಿಧ್ಯವನ್ನು ಕರ್ನಾಟಕ ರಾಜ್ಯ ವಿಶ್ವಬ್ರಾಹ್ಮಣ ಮಠಾಧಿಪತಿಗಳು ಹಾಗೂ ಪೀಠಾಧಿಪತಿಗಳ ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರ ಸ್ವಾಮಿಗಳು ಹಾಗೂ ಮುರನಾಳ ಮಳೆರಾಜೇಂದ್ರಸ್ವಾಮಿ ಮಠದ ಜಗನ್ನಾಥ ಸ್ವಾಮಿಗಳು ವಹಿಸಿದ್ದರು.

ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ನಾಗಲಿಂಗಪ್ಪ ಗಂಗೂರು ಸೇರಿದಂತೆ ಅನೇಕ ಸಾಧಕರನ್ನು ಸನ್ಮಾನಿಸಲಾಯಿತು. ಬಾಗಲಕೋಟೆ ತಹಶೀಲ್ದಾರ ವಾಸುದೇವ ಸ್ವಾಮಿ, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷರಾದ ಅರವಿಂದ ಪತ್ತಾರ, ಪ್ರಮುಖರಾದ ದೇವೇಂದ್ರ ಅಗಳತಕಟ್ಟಿ, ವೀರಭದ್ರಪ್ಪ ಹಿಪ್ಪರಗಿ, ವಂತರಾವ್ ಕಮ್ಮಾರ, ನಾಗೂ ಟಂಕಸಾಲಿ, ಚಂದ್ರಶೇಖರ ಬಡಿಗೇರ, ಮೌನೇಶ ಪತ್ತಾರ, ಸುಮಲತಾ ಶಿಲ್ಪಿ, ಮುತ್ತು ಬಡಿಗೇರ, ಜ್ಞಾನೇಶ್ವರ ಬಡಿಗೇರ, ಕಾಶಿನಾಥ ಪತ್ತಾರ, ಚಂದ್ರಶೇಖರ ಕಾಳನ್ನವರ, ಮನೋಹರ ಬಡಿಗೇರ, ಸಿದ್ದಪ್ಪ ಪತ್ತಾರ ಇದ್ದರು.

# ಸರ್ಕಾರಿ ಇಲಾಖೆಗಳೊಂದಿಗೆ ಬ್ಯಾಂಕ್‌ಗಳ ಸಮನ್ವಯವಿರಲಿ: ಸಂಸದ ಪಿ.ಸಿ.ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ಸರ್ಕಾರಿ ಇಲಾಖೆಗಳೊಂದಿಗೆ ಬ್ಯಾಂಕ್‌ಗಳು ಸಮನ್ವಯತೆ ಸಾಧಿಸಿ ಸಹಕಾರ ನೀಡಿದಾಗ ಮಾತ್ರ ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು.

ಜಿಲ್ಲಾ ಪಂಚಾಯತ್ ನೂತನ ಸಭಾಂಗಣದಲ್ಲಿ ಸೋಮವಾರ ಜರುಗಿದ ಲೀಡ್ ಬ್ಯಾಂಕ್ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರದ ಯೋಜನೆಗಳನ್ನು ಘೋಷಿಸುವುದಷ್ಟೇ ಅಲ್ಲ ಅವುಗಳನ್ನು ಅನುಷ್ಠಾನಗೊಳಿಸುವುದು ಕೂಡ ಮುಖ್ಯವಾಗಿರುತ್ತದೆ. ಫಲಾನುಭವಿಗಳನ್ನು ಅನಗತ್ಯವಾಗಿ ಅಲೆದಾಡಿಸುವ ಪದ್ಧತಿ ಬಿಟ್ಟು, ಪ್ರಾಥಮಿಕ ಹಂತದಲ್ಲೇ ದಾಖಲೆಗಳನ್ನು ಪರಿಶೀಲಿಸುವ ಮೂಲಕ ಬ್ಯಾಂಕ್ ಅಧಿಕಾರಿಗಳು ಸಾಲ ಸೌಲಭ್ಯ ಕಲ್ಪಿಸಲು ಮುಂದಾಗಬೇಕು ಎಂದು ಸೂಚಿಸಿದರು. ಸರ್ಕಾರದ ವಿವಿಧ ಯೋಜನೆಯಡಿ ನೀಡಲಾಗುವ ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳಿಗೆ ಇಲಾಖೆಯ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿ ಹಾಗೂ ಸಿಬ್ಬಂದಿ ಸೂಕ್ತ ಮಾರ್ಗದರ್ಶನ ನೀಡಬೇಕು. ಯೋಜನೆಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು, ಜನರಿಗೆ ತೊಂದರೆ ಕೊಡದೆ, ಅರ್ಜಿಗಳನ್ನು ಸ್ವೀಕರಿಸಿ, ಪರಿಶೀಲಿಸಬೇಕು. ಯಾವ ಯಾವ ದಾಖಲೆಗಳನ್ನು ಸಲ್ಲಿಸಬೇಕು ಎಂಬುದನ್ನು ಫಲಕಗಳಲ್ಲಿ ಪ್ರದರ್ಶಿಸಿ, ತಾಂತ್ರಿಕ ತೊಂದರೆಗಳಿದ್ದಲ್ಲಿ ತಿಳಿಸಿ ಅವಶ್ಯಕತೆ ಇರುವವರಿಗೆ ಆದ್ಯತೆಯ ಮೇರೆಗೆ ಸಾಲ ಸೌಲಭ್ಯ ಒದಗಿಸಬೇಕು ಎಂದು ಗದ್ದಿಗೌಡರ ಹೇಳಿದರು. ಇಲಾಖೆಯ ಅಧಿಕಾರಿಗಳು ಬ್ಯಾಂಕ್‌ಗಳಿಗೆ ತೆರಳಿ ಆಸಕ್ತಿ ವಹಿಸಿ ವಿವಿಧ ಯೋಜನೆಯಡಿ ಸಿಗುವ ಸಾಲ ಸೌಲಭ್ಯ ದೊರಕಿಸಿಕೊಡಬೇಕು. ಸಣ್ಣಪುಟ್ಟ ಕಾರಣಕ್ಕೆ ತಡೆಹಿಡಿಸುವ ಕೆಲಸ ಮಾಡಬೇಡಿ ಎಂದು ಅಂಬೇಡ್ಕರ್ ನಿಗಮ ಸೇರಿ ವಿವಿಧ ನಿಗಮಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಮಾತನಾಡಿ, ಬ್ಯಾಂಕ್‌ಗಳಲ್ಲಿ ಹೆಚ್ಚಿನ ಸಂಖ್ಯೆಯ ಫಲಾನುಭವಿಗಳ ಅರ್ಜಿಗಳು ತಿರಸ್ಕೃತಗೊಂಡಿದ್ದು, ಈ ಬಗ್ಗೆ ಆಯಾ ಬ್ಯಾಂಕ್ ವ್ಯವಸ್ಥಾಪಕರು ಗಮನಹರಿಸಬೇಕು. ಯಾವ ಬ್ಯಾಂಕಿನಲ್ಲಿ ಅರ್ಜಿಗಳು ಬಾಕಿ ಉಳಿದಿವೆಯೋ ಅವೆಲ್ಲವೂ ಮುಂದಿನ ಹದಿನೈದು ದಿನದೊಳಗಾಗಿ ವಿಲೇವಾರಿಯಾಗಬೇಕು. ಈ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಸಭೆಯಲ್ಲಿ ಬಾಗಲಕೋಟ ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ರಾಜಕುಮಾರ ಹೂಗಾರ, ಆರ್‌ಬಿಐ ಬ್ಯಾಂಕ್ ಅಧಿಕಾರಿ ವಿಜಯಶ್ರೀ, ನಬಾರ್ಡ ಡಿಡಿಎಮ್ ಮಂಜುನಾಥರೆಡ್ಡಿ ಎಸ್ ಸೇರಿದಂತೆ ಇತರರು ಇದ್ದರು.

## ಘಟಪ್ರಭಾ ಕಾಲುವೆಗೆ ನೀರು ಬಿಡಲು ಶಾಸಕ ಪಾಟೀಲ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ರೈತರ ಮುಂಗಾರು ಬೆಳೆಗಳಿಗೆ ನೀರು ಪೂರೈಸಲು ಘಟಪ್ರಭಾ ಎಡದಂಡೆ ಹಾಗೂ ಬಲದಂಡೆ ಕಾಲುವೆಗಳಿಗೆ ನೀರು ಹರಿಸುವಂತೆ ಬೀಳಗಿ ಶಾಸಕ, ಹಟ್ಟಿ ಚಿನ್ನದ ಗಣಿ ನಿಗಮದ ಅಧ್ಯಕ್ಷ ಜೆ.ಟಿ.ಪಾಟೀಲ ಒತ್ತಾಯಿಸಿದ್ದಾರೆ.

ಎರಡೂ ಕಾಲುವೆಗಳ ವ್ಯಾಪ್ತಿಯಲ್ಲಿ ರೈತರು ಗೋಧಿ, ಜವೆಗೋಧಿ (ಸದಕ), ಬಿಳಿಜೋಳ,

ಕಡಲೆ, ಕುಸುಬೆ ಸೇರಿದಂತೆ ಮತ್ತಿತರ ಬೆಳೆಗಳನ್ನು ಬಿತ್ತನೆ ಮಾಡಿದ್ದು ಅವುಗಳಿಗೆ ಈಗ ನೀರಿನ ಅವಶ್ಯಕತೆ ಬಹಳಷ್ಟಿದೆ. ಹೀಗಾಗಿ ಸಚಿವ ಸತೀಶ ಜಾರಕಿಹೊಳಿ ಅವರು 2–3 ದಿನಗಳಲ್ಲಿ ಘಟಪ್ರಭಾ ನೀರಾವರಿ ಸಲಹಾ ಸಮಿತಿಯ ಸಭೆ ಕರೆದು ಎರಡೂ ಕಾಲುವೆಗಳಿಗೆ ನೀರು ಬಿಡುವ ವ್ಯವಸ್ಥೆ ಮಾಡಿಸಬೇಕು ಎಂದು ಪಾಟೀಲ ಹೇಳಿದ್ದಾರೆ.

## ಸಾಹಿತಿ ಜಯಶ್ರೀ ಭಂಡಾರಿ ಸಮ್ಮೇಳನದ ಸರ್ವಾಧ್ಯಕ್ಷೆ

# ಬೇವೂರಿನಲ್ಲಿ ಜಿಲ್ಲಾ 16 ನೆಯ ಮಕ್ಕಳ ಸಾಹಿತ್ಯ ಸಮ್ಮೇಳನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10–ಬಾಗಲಕೋಟೆ ಜಿಲ್ಲಾ ಮಕ್ಕಳ ಸಾಹಿತ್ಯ ಸಮಾಗಮ ಹಾಗೂ ಬೇವೂರಿನ ಆದರ್ಶ ವಿದ್ಯಾವರ್ಧಕ ಸಂಘ ಇವರ ಸಹಯೋಗದಲ್ಲಿ ಬಾಗಲಕೋಟೆ ಜಿಲ್ಲಾ 16 ನೆಯ ಮಕ್ಕಳ ಸಾಹಿತ್ಯ ಸಮ್ಮೇಳನ ನ.11 ರಂದು ಬೇವೂರಿನಲ್ಲಿ ಜರುಗಲಿದೆ.

ಮಂಗಳವಾರ ಬೇವೂರಿನ ಆದರ್ಶ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಲಿಂ.ಮರಿಯಪ್ಪಜ್ಜನವರ ಪ್ರಧಾನ ವೇದಿಕೆಯಲ್ಲಿ ಮುಂಜಾನೆ 10 ಗಂಟೆಗೆ ಸಮ್ಮೇಳನದ ಉದ್ಘಾಟನಾ ಶ್ರೀ ಗ್ಯಾನಪ್ಪಜ್ಜನವರ ಸಾನಿಧ್ಯದಲ್ಲಿ ನಡೆಯಲಿದ್ದು, ನ್ಯಾಯವಾದಿ ಜಿ.ಜಿ.ಮಾಗನೂರ ಸಮ್ಮೇಳನ ಉದ್ಘಾಟಿಸುವರು. ಮಕ್ಕಳ ಸಾಹಿತ್ಯ ಸಮಾಗಮದ ಜಿಲ್ಲಾ ಅಧ್ಯಕ್ಷ ಗುರುಸ್ವಾಮಿ ಗಣಾಚಾರಿ ಅಧ್ಯಕ್ಷತೆ ವಹಿಸುವರು.

ಬಾದಾಮಿಯ ಸಾಹಿತಿ ಜಯಶ್ರೀ ಭಂಡಾರಿ ಸಮ್ಮೇಳನದ ಅಧ್ಯಕ್ಷರಾಗಿದ್ದು, ನಿಕಟಪೂರ್ವ ಅಧ್ಯಕ್ಷ ಮೃತ್ಯುಂಜಯ ರಾಮದುರ್ಗ, ಡಾ.ಎಚ್.ಎಫ್.ಯೋಗಪ್ಪನವರ, ಶ್ರೀಶೈಲ ಕರಿಶಂಕರಿ, ಜಿ.ಕೆ. ತಳವಾರ, ಪಿ.ಬಿ.ಹೊಸಳ್ಳಿ, ಗ್ರಾಮ ಪಂಚಾಯತಿ ಅಧ್ಯಕ್ಷೆ ಫರಿದಾ ಗುರಗುನ್ನಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ನಂತರ 11.30 ಗಂಟೆಗೆ ಮೊದಲ ಗೋಷ್ಠಿ ಮಕ್ಕಳ ಸಾಹಿತ್ಯ ದರ್ಶನ, ಮಧ್ಯಾಹ್ನ 1 ಗಂಟೆಗೆ ಎರಡನೇ ಗೋಷ್ಠಿ ಬಾಲಕವಿ ಸಮಯ–ಕಾವ್ಯಕಾರಂಜಿ,

ಮಧ್ಯಾಹ್ನ 2–30 ಕ್ಕೆ ಮೂರನೇ ಗೋಷ್ಠಿ ಕೃತಿ

ಬಿಡುಗಡೆ ಮತ್ತು 3–30 ಗಂಟೆಗೆ ನಾಲ್ಕನೇ ಗೋಷ್ಠಿ ಕವಿ ಸಮಯ ಜರುಗಲಿದ್ದು, 5 ಗಂಟೆಗೆ ಸಮಾರೋಪ ಸಮಾರಂಭ ಜರುಗಲಿದೆ ಎಂದು ಮಕ್ಕಳ ಸಾಹಿತ್ಯ ಸಮಾಗಮದ

ಜಿಲ್ಲಾ ಅಧ್ಯಕ್ಷ ಗುರುಸ್ವಾಮಿ ಗಣಾಚಾರಿ, ತಾಲ್ಲೂಕು ಅಧ್ಯಕ್ಷ ಎಸ್.ಆರ್.ಪಟ್ಟಣಶೆಟ್ಟಿ ತಿಳಿಸಿದ್ದಾರೆ.

## ಜಯಶ್ರೀ ಭಂಡಾರಿ ಸಮ್ಮೇಳನದ ಸರ್ವಾಧ್ಯಕ್ಷೆ



**ಲೇಖಕಿ, ಕವಯಿತ್ರಿ ಬಾದಾಮಿಯ ಜಯಶ್ರೀ ಭಂಡಾರಿ ಜಿಲ್ಲಾ 16 ನೆಯ ಮಕ್ಕಳ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದು, ಅವರೊಬ್ಬ ಒಳ್ಳೆಯ ಶಿಕ್ಷಕಿಯಾಗಿ ಹೆಚ್ಚು ಗುರುತಿಸಿಕೊಂಡಿದ್ದಾರೆ. ಎಂ.ಎ, ಬಿಇಡಿ ಪದವೀಧರರಾಗಿರುವ ಅವರು, ಸಧ್ಯ ಪ್ರೌಢಶಾಲೆಯ ಮುಖ್ಯಾಧ್ಯಾಪಕಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾಹಿತ್ಯ ವಲಯದಲ್ಲೂ ಕೃಷಿ ಮಾಡಿದವರು.**

**ಮೂಲತ: ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲ್ಲೂಕಿನ ಸುರೇಬಾನ ಗ್ರಾಮದವರಾದ ಜಯಶ್ರೀ ಭಂಡಾರಿ ಅವರ ತಂದೆ ಗಂಗಯ್ಯ ಗಣಾಚಾರಿ ಸಹ ಪ್ರೌಢಶಾಲಾ ಶಿಕ್ಷಕರಾಗಿದ್ದವರು.**

**ಸ್ವಾತಂತ್ರ್ಯ ಯೋಧ ನೀಲಕಂಠ ಗಣಾಚಾರಿ ಜಯಶ್ರೀ ಅವರ ಅಜ್ಜ. ಶಿಕ್ಷಕಿಯಾಗಿ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತ ಬಂದಿರುವ ಜಯಶ್ರೀ, ಶಿಕ್ಷಕ ವೃತ್ತಿಯ ಜೊತೆಗೆ ಸಾಹಿತ್ಯದ ಒಲುವು ಬೆಳೆಸಿಕೊಂಡವರು.**

**'ನನ್ನೊಲವಿನ ಹಾಡು' ಕವನ ಸಂಕಲನ, 'ಯಾವ ಜನ್ಮದ ಮೈತ್ರಿ' ಮತ್ತು 'ಅಂತರಾಳ' ಕೃತಿಗಳನ್ನು ರಚಿಸಿದ್ದಾರೆ. ಹಲವು ಸಾಹಿತ್ಯಿಕ ಸಂಘಟನೆಗಳಲ್ಲಿ ತೊಡಗಿಕೊಂಡಿರುವ ಅವರು, ಸಿದ್ದೇಶ್ವರ ಸಾಹಿತ್ಯ ವೇದಿಕೆಯ ಜಿಲ್ಲಾ ಅಧ್ಯಕ್ಷ,**

**ವಚನ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ, ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಕಟಗೊಂಡಿವೆ. ಆಕಾಶವಾಣಿಗಳಲ್ಲೂ ಅವರ ಚಿಂತನ ಕಾರ್ಯಕ್ರಮಗಳು ಆಗಾಗ ಮೂಡಿ ಬರುತ್ತಿವೆ. ಹೀಗೆ ಸಾಹಿತ್ಯ,**

**ಶೈಕ್ಷಣಿಕ ವಲಯಗಳಲ್ಲಿ ಸಾಕಷ್ಟು ಕೃಷಿ ಮಾಡಿರುವ ಜಯಶ್ರೀ ಭಂಡಾರಿ ಅವರು ಈಗ ಬೇವೂರಿನಲ್ಲಿ ನಡೆಯಲಿರುವ ಬಾಗಲಕೋಟೆ ಜಿಲ್ಲಾ 16 ನೆಯ ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.**



ಬಸವಕಲ್ಯಾಣ:– ಇತ್ತೀಚಿಗೆ ನಡೆದ ಕರ್ನಾಟಕ ರಾಜ್ಯೋತ್ಸವ ನಿಮಿತ್ಯವಾಗಿ ಜಿಲ್ಲಾ ಆಡಳಿತ ವತಿಯಿಂದ ಸಮಾಜ ಸೇವೆ ಹಾಗೂ ಕನ್ನಡ ಸೇವಾ ಹೋರಾಟಗಾರರಾದ ಧನರಾಜ ರಾಜೋಳೆ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಿದ ನಿಮಿತ್ತವಾಗಿ ಇಲ್ಲಿನ ತಿಪುರಾಂತಿನ ಸಂಸ್ಥಾನ ಗವಿಮಠದ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಸನ್ಮಾನಿಸಲಾಯಿತು ಗೌರವಿಸಿದರು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :– ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ, ಅಕ್ಕಮಹಾದೇವಿ ಮಹಿಳಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಶ್ರೇಷ್ಠ ಶ್ರೀ ಭಕ್ತ ಕನಕದಾಸ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಮಾಯಾ ಮುರಾಳೆ. ಎನ್. ಎಸ್. ಎಸ್. ಎ. ಘಟಕದ ಕಾರ್ಯಕ್ರಮದ ಅಧಿಕಾರಿಗಳಾದ ದಶರಥ ಟಿ. ಹಳ್ಳಿಖೆಡೆ. ಹಾಗೂ ಸಿಬ್ಬಂದಿ ವರ್ಗದವರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.(ಮಲ್ಲಮ್ಮ ನುಡಿ ಚಿತ್ರ)

# ವಸತಿ ನಿಲಯಗಳಲ್ಲಿ ಮಕ್ಕಳಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡಿ : ಸುರೇಶ ವಂಟಿಗೋಡಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ವಸತಿ ನಿಲಯಗಳಲ್ಲಿ ಇರುವ ಮಕ್ಕಳಿಗೆ ಸರ್ಕಾರಿಂದ ಸಿಗುವ ಎಲ್ಲಾ ರೀತಿಯ ಸೌಲಭ್ಯಗಳನ್ನು ನೀಡುವ ಮೂಲಕ ಅವರಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗ ಸದಸ್ಯರಾದ ಸುರೇಶ ವಂಟಿಗೋಡಿ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ನಗರದ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಕೊಪ್ಪಳ ನಗರದ ಸರಕಾರಿ ಅತಿಥಿಗೃಹದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಕೊಪ್ಪಳ ನಗರದ ಎರಡು ವಸತಿ ನಿಲಯಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಎಲ್ಲಾ ಮಕ್ಕಳು ಸರಿಯಾದ ಸೌಲಭ್ಯ ಸಿಗುತ್ತಿದೆ ಎಂದು ಒಳ್ಳೆಯ ಅಭಿಪ್ರಾಯ ಹೇಳಿದ್ದಾರೆ. ಆದಾಗ್ಯೂ ಎಲ್ಲಾ ವಸತಿ ನಿಲಯಗಳಲ್ಲಿ ಸ್ವಚ್ಛತೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಒಳ್ಳೆಯ ಪೌಷ್ಟಿಕಾಂಶ ಆಹಾರವನ್ನು ಮಕ್ಕಳಿಗೆ ನೀಡಬೇಕು. ಬೆಳಿಗಿನ ಸ್ನಾನಕ್ಕೆ ಬಿಸಿ ನೀರಿನ ವ್ಯವಸ್ಥೆ ಮಾಡಬೇಕು. ಪೋಸ್ಟ್ ಮ್ಯಾಟ್ರಿಕ್ ವಸತಿ ನಿಲಯಗಳಲ್ಲಿ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಡ್ರೆಸಿಚೈಜ್ ಕೊಠಡಿ ವ್ಯವಸ್ಥೆ ಮಾಡಬೇಕು. ತಹಶಿಲ್ದಾರರು ಆಗಾಗ ವಸತಿ ನಿಲಯಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳ ಪರಿಶೀಲನೆ ನಡೆಸಬೇಕು ಎಂದರು.

ಒಂದು ವಸತಿ ನಿಲಯಗಳಲ್ಲಿ ಹೆಚ್ಚಿನ ಮಕ್ಕಳಿದ್ದರೆ ಅವರಿಗೆ ಪ್ರತ್ಯೇಕ ಮತ್ತೊಂದು ವಸತಿ ನಿಲದ ವ್ಯವಸ್ಥೆ ಮಾಡಬೇಕು. ಆಗಾಗ ಅಧಿಕಾರಿಗಳು ಸರಪ್ರೈಸ್ ಭೇಟಿ ನೀಡಿ ವಸತಿ ನಿಲಯಗಳಲ್ಲಿ ಮಕ್ಕಳಿಗೆ ಸರಿಯಾಗಿ ಊಟ ನೀಡಲಾಗುತ್ತಿದೆಯೆ ಹಾಗೂ ಅವರಿಗೆ ಸರ್ಕಾರದ ಸೌಲಭ್ಯಗಳು ಉತ್ತಮ ರೀತಿಯಲ್ಲಿ ಸಿಗುತ್ತಿವೆಯೆ ಎಂದು ಪರಿಶೀಲನೆ ನಡೆಸಬೇಕು. ಮಕ್ಕಳಿಗೆ ಯಾವುದೇ ಕಾರಣಕ್ಕೆ ಕಡಿಮೆ ನ್ಯೂಟ್ರಿಷನ್ ಆಹಾರ ನೀಡುವ ಹಾಗಿಲ್ಲ. ಅವರಿಗೆ ತಮ್ಮ ಮೆನ್ಯೂನಿನ ಪ್ರಕಾರ ಆಹಾರ ನೀಡಬೇಕೆಂದರು.

ಪೊಲೀಸ್ ಠಾಣೆಗಳಿಗೆ ದೂರು ಕೊಡಲು ಬರುವ ಸಾರ್ವಜನಿಕರಿಗೆ ಜಿಲ್ಲೆಯ ಠಾಣೆಗಳಲ್ಲಿ ವೇಟಿಂಗ್ ಹಾಲ್‌ಗಳ ವ್ಯವಸ್ಥೆ ಮಾಡಬೇಕೆಂದು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ನಗರಸಭೆಯವರು ಸಾರ್ವಜನಿಕರ ಸ್ಥಳಗಳ ಸ್ವಚ್ಛತೆ ಜೊತೆಗೆ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶೌಚಾಲಯಗಳು ಜಿಲ್ಲೆಯಲ್ಲಿ ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡಬೇಕೆಂದು ಹೇಳಿದರು.

ಜಿಲ್ಲೆಯಲ್ಲಿರುವ ವಿವಿಧ ಇಲಾಖೆಯ ವಸತಿ ನಿಲಯಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಅವರಿಗೆ ಯಾವುದೇ ರೀತಿಯ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕು. ಈ ಹಿಂದೆ ಜಿಲ್ಲೆಯಲ್ಲಿ ಸೋಮೊಟೊ ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ಪರಿಶೀಲನೆಗೆ ಬಂದಿದ್ದೇನೆ. ಈಗ ಅಲ್ಲಿ ಯಾವುದೇ ಸಮಸ್ಯೆಗಳಿಲ್ಲ. ಮುಂದೇಯು ಸಮಸ್ಯೆಗಳಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳ ಮೇಲಿದೆ ಎಂದು ಹೇಳಿದರು.

ಈ ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ನಾಗಮಣಿ ಹೊಸಮನಿ. ಕೊಪ್ಪಳ ತಹಶಿಲ್ದಾರ ವಿಠಲ ಚೌಗಲಾ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಪೊಲೀಸ್. ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಯುವನಿಧಿ ಯೋಜನೆಯಡಿ ಸೌಲಭ್ಯಕ್ಕೆ ಆಹ್ವಾನ

# ಅಭ್ಯರ್ಥಿ ಸೇವಾಸಿಂಧುನಲ್ಲಿ ನೋಂದಣಿಸಿಕೊಂಡು ಸದುಪಯೋಗ ಪಡೆಯಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 10 : ಯುವನಿಧಿ ಯೋಜನೆಯಡಿ ಸ್ವಯಂ ಘೋಷಣೆಯ ಅವಧಿಯನ್ನು ತ್ರೈಮಾಸಿಕ ಬದಲಾಗಿ

ಮಾಸಿಕವಾಗಿ(ಈ ಮೊದಲಿನಂತೆ) ಸ್ವಯಂ ಘೋಷಣೆ ಪದ್ಧತಿ ಪುನಃ ಅಳವಡಿಸಲಾಗಿದೆ, ಯುವನಿಧಿ ಯೋಜನೆಯ

ಪ್ರಯೋಜನೆ ಪಡೆಯಲು ಅಭ್ಯರ್ಥಿಗಳು

ಮಾಸಿಕ ನಿರುದ್ಯೋಗಿಯೆಂದು ಮತ್ತು ವ್ಯಾಸಂಗ ಮುಂದುವರಿಸುತ್ತಿಲ್ಲ ಎಂದು ಸ್ವಯಂ ಘೋಷಣೆ ಮಾಡಬೇಕಿದೆ. ಇಲ್ಲವಾದರೆ ನೇರ ನಗದು ವರ್ಗಾವಣೆ

ಮಾಡಲಾಗುವುದಿಲ್ಲ, ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್, ಬ್ಯಾಂಕ್ ಖಾತೆಯನ್ನು ಹೊಂದಿರಬೇಕು ಎಂದು ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ಬಸವರಾಜ ಅವರು ತಿಳಿಸಿದ್ದಾರೆ.

ಸೇವಾಸಿಂಧು ಪೋರ್ಟ್‌ಲ್ ವೆಬ್‌ಸೈಟ್ sevasindhugs.karnataka.gov.in ನಲ್ಲಿ ಸ್ವಯಂ ಘೋಷಣೆ ಮಾಡಿಕೊಳ್ಳಬೇಕು.

ಸೇವಾಸಿಂಧು ಪೋರ್ಟ್‌ಲ್‌ನಲ್ಲಿ ಅರ್ಜಿ ಯಾವ ಹಂತದಲ್ಲಿದೆ ಎಂಬುವುದನ್ನು ಪರಿಶೀಲಿಸಿ ಅರ್ಜಿ ಅಪ್ರೂವ್ ಅಗದ ವೇಳೆ ಸೂಚಿಸಲ್ಪಟ್ಟ ಇಲಾಖೆಯ ಕಛೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿಗಳ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅವುಗಳ ನಕಲು ಪ್ರತಿಗಳನ್ನು ಸಲ್ಲಿಸಿ ಅಪ್ರೂವ್ ಮಾಡಿಕೊಳ್ಳಬೇಕು.

ಯುವನಿಧಿ ಯೋಜನೆಯಡಿ ಪದವಿ ಮತ್ತು ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೋಮಗಳನ್ನು 2022–23ನೇ,

2023–24ನೇ ಹಾಗೂ 2024–25ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023, 2024,

2025ರಲ್ಲಿ

ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟ್‌ಲ್‌ನಲ್ಲಿ ನೋಂದಣಿ ಮಾಡಿಕೊಂಡು ಸದುಪಯೋಗಪಡೆದುಕೊಳ್ಳಬೇಕು. ಫಲಿತಾಂಶದ ನಂತರ

ನಿರುದ್ಯೋಗಿಗಳಾಗಿ 180 ದಿನ ಪೂರೈಸಿದ ನಂತರ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಜಿಲ್ಲಾ ಉದ್ಯೋಗಾಧಿಕಾರಿಗಳ, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ

ದೂ.ಸಂ.08473253718, ಸಹಾಯವಾಣಿ ಸಂಖ್ಯೆ 18005997154ಗೆ

ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಧಾರ್ ಗುರುತಿನ ಚೀಟಿ ಚಾಲ್ತಿಯಲ್ಲಿರುವಂತೆ ನೋಡಿಕೊಳ್ಳಬೇಕು:ಜಿಲ್ಲಾಧಿಕಾರಿ



ಬೀದರ, ನವೆಂಬರ್.10 : ಜಿಲ್ಲೆಯ ಎಲ್ಲಾ ನಾಗರಿಕರು ಮೌಲ್ಯಯುತವಾಗಿರುವ ಆಧಾರ್ ಗುರುತಿನ ಚೀಟಿ ಹೊಂದುವುದು ಅವಶ್ಯಕವಾಗಿದೆ. ಹೊಸ ನೋಂದಣಿ, ಮರು ನೋಂದಣಿಗಾಗಿ ಬಯೋಮೆಟ್ರಿಕ್ ನೀಡುವ ಮೂಲಕ ಆಧಾರ್ ಗುರುತಿನ ಚೀಟಿ ಚಾಲ್ತಿಯಲ್ಲಿರುವಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಕರೆ ನೀಡಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಆಧಾರ್ ಮಾನಿಟರಿಂಗ್ ಕಮೀಟಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ 5 ವರ್ಷ ಮೇಲ್ಪಟ್ಟ 1.23,830 ಮಕ್ಕಳು, 15 ವರ್ಷ ಮೇಲ್ಪಟ್ಟ 79,033 ಸೇರಿದಂತೆ 2,02,863 ಜನರು ಆಧಾರ್ ನವೀಕರಣ ಬಾಕಿಯಿದೆ. ಶಾಲಾ ವಿದ್ಯಾರ್ಥಿಗಳಿದ್ದಲ್ಲಿ ಕ್ಲಸ್ಟರ್ ಮಟ್ಟದಲ್ಲಿ ಆಧಾರ್ ಕ್ಯಾಂಪ್ ನಿಯೋಜಿಸಿ ಬಯೋಮೆಟ್ರಿಕ್ ಮಾಡಿಸಬೇಕು ಹಾಗೂ ಮೊಬೈಲ ನಂ ಅಪಡೇಟ್ ಬಾಕಿಯಿರುವ 1,30,923 ಅ ನಿವಾಸಿಗಳು ಅಂಚೆ ಕಛೇರಿ ಹತ್ತಿರದ ಪೋಸ್ಟ್ ಮಾಸ್ಟರಿಗೆ ಭೇಟಿ ಮಾಡಿ ಮೊಬೈಲ್ ಅಪಡೇಟ್ ಮಾಡಿಕೋಳಬೇಕು ಅಂಚೆ ಕಛೇರಿ ಅಧೀಕ್ಷರಿಗೆ ಸೂಚಿಸಲಾಗಿದೆ ಎಂದರು.

ಬೀದರ ಜಿಲ್ಲೆಯಲ್ಲಿ 19,46,492 ಲಕ್ಷ ಜನರಿಂದ ನೋಂದಣಿ ದೇಶದ ನಾಗರಿಕರಿಗೆ ಸರ್ಕಾರ ವಿಶಿಷ್ಟ ಗುರುತಿನ ಚೀಟಿ ವಿತರಿಸುತ್ತಿದ್ದು ಅಗತ್ಯದಾಖಲೆ ನೀಡಿ ನೋಂದಾಯಿಸಿಕೊಂಡು ಕಡ್ಡಾಯವಾಗಿ ಆಧಾರ್ ಕಾರ್ಡ್ ಮಾಡಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಈವರೆಗೆ 19,46,492 ಲಕ್ಷ ಜನರು ಆಧಾರ್ ನೋಂದಣಿ ಮಾಡಿಸಿದ್ದಾರೆ. ಅವರಲ್ಲಿ 5 ವರ್ಷದೊಳಗಿನ 85,037 ಸಾವಿರ ಮಕ್ಕಳು, 5 ರಿಂದ 18 ವರ್ಷದ 4,39,333 ಲಕ್ಷ ಜನರು, 18 ವರ್ಷ ಮೇಲ್ಮಟ್ಟ 14,22,122 ಲಕ್ಷ ಸಾರ್ವಜನಿಕರು ಆಧಾರ್ ಕಾರ್ಡ್ ಪಡೆದಿದ್ದಾರೆ. ರಾಜ್ಯ ಆಧಾರ್ ನೋಂದಣಿ ಪ್ರಾಧಿಕಾರ ಜಿಲ್ಲೆಯ ನಾಡ ಕಛೇರಿಯ ಜನಸ್ನೇಹಿ ಕೇಂದ್ರಗಳ ಕಛೇರಿಯಲ್ಲಿ ಆಯ್ಕೆ ಬ್ಯಾಂಕ್, ಅಂಚೆ ಕಚೇರಿಗಳಲ್ಲಿ ನೋಂದಣಿ ಕೇಂದ್ರ ತೆರೆದಿದೆ. ಕಚೇರಿ ಸಮಯದಲ್ಲಿ ಆಧಾರ್ ಸೇವೆ ಪಡೆದುಕೊಳ್ಳಬೇಕು. ಇಲ್ಲದಿದ್ದಲ್ಲಿ ಆಧಾರ್ ನಿಷ್ಕ್ರಿಯಗೊಂಡು ವಿವಿಧ ಸೌಲಭ್ಯ ಅಥವಾ ಸೇವೆ ಪಡೆಯಲು ತೊಂದರೆಯಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

10 ವರ್ಷದ ಹಿಂದೆ ಆಧಾರ್ ನೋಂದಣಿ ಮಾಡಿಸಿದ ಎಲ್ಲರೂ ಗುರುತಿನ ಹಾಗೂ ವಿಳಾಸ ದಾಖಲೆ ನೀಡಿ ಅಧಾರ್ ಕೇಂದ್ರದಲ್ಲಿ ಮರು ಅಪ್ಲೋಡ್ ಮಾಡಿಸಬೇಕು. ಇದನ್ನು ಟಥಿಂಚಿಜುಚಿಚಿಡಿ.ಣುಜಚು.ರಠತ.ುಟ ಅನ್‌ಲೈನ್ ಮೂಲಕವೂ ನೇರವಾಗಿ ನವೀಕರಿಸಲು ಅವಕಾಶವಿದೆ ಎಂದು ತಿಳಿಸಿದರು.

ಕರ್ನಾಟಕ ಓನ್ ಕೇಂದ್ರಗಳಿಗೆ 10 ಕಿಟ್‌ಗಳನ್ನು ಒದಗಿಸಿ ಬಾಕಿ ಇರುವ ಶಾಲಾ ಮಕ್ಕಳ ನೊಂದಣಿ/ತಿದ್ದುಪಡಿ ಮಾಡಿಕೊಳ್ಳಲು ಸೂಚನೆ ನೀಡಿದರು. ಜಿಲ್ಲೆಯಲ್ಲಿ 500 ಹೆಚ್ಚು ಸಾರ್ವಜನಿಕ ಅಧಾರ ಸಮಸ್ಯೆಗಳಿದ್ದು ಸದರಿ ಸಮಸ್ಯೆಗಳನ್ನು ಪರಿಹರಿಕೊಳ್ಳಲು ಕಛೇರಿಗೆ ಅಲೆದಾಡುತ್ತಿದ್ದಾರೆ. ಈ ಸಮಸ್ಯೆಗಳನ್ನು ಪರಿಹರಿಸಲು ಯು.ಐ.ಡಿ.ಐ ಆಧಾರ ಸಂಯೋಜಕ ಅಧಿಕಾರಿಗಳಿಗೆ 15 ದಿವಸಗಳಲ್ಲಿ ಬಗೆಹರಿಸಲು ಹಾಗೂ ಪ್ರತಿ ತಿಂಗಳು ಜಿಲ್ಲೆ, ಆಗಮಿಸಿ ಸಾರ್ವಜನಿಕರ ಅಧಾರ ಸಮಸ್ಯೆಗಳನ್ನು ಬಗೆಹರಿಸಲು ಸೂಚಿಸಿರುತ್ತಾರೆ.

10 ವರ್ಷದ ಹಿಂದೆ ನೊಂದಣಿ ಮಾಡಿಸಿದ ಎಲ್ಲಾ ಸಾರ್ಜಜನಿಕರು ತಮ್ಮ ಗುರುತಿನ ಹಾಗೂ ವಿಳಾಸದ ದಾಖಲೆ ನೀಡಿ ಅಪಡೇಟ್ ಮಾಡುವಂತೆ ಸಾರ್ಜನಿಕರಿಗೆ ಸ್ವಚ್ಛತಾ ವಾಹನಗಳಲ್ಲಿ ಪ್ರಚಾರ ಮಾಡಬೇಕು. ಆಧಾರ ತಿದ್ದುಪಡಿಯಲ್ಲಿ ಹೆಸರು ತಿದ್ದುಪಡಿಗೆ ಕೇವಲ 02 ಬಾರಿ ಹಾಗೂ ಜನ್ಮ ದಿನಾಂಕ ತಿದ್ದುಪಡಿಗೆ ಕೇವಲ 02 ಬಾರಿ ಅವಕಾಶವಿರುವ ಬಗ್ಗೆ ಸಾರ್ವಜನಿಕರನ್ನು ಅರಿವು ಮೂಡಿಸಲು ಜಿಲ್ಲಾಧಿಕಾರಿಗಳು ತಿಳಿಸಿದರು. ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಬೀದರ ಯುಐಡಿಐ ಮ್ಯಾನೇಜರ್, ಸಹಾಯಕ ಮ್ಯಾನೇಜರ್ ಮೋಹ್ಮದ ಮುಸಾಬ್ ಮತ್ತು ರಿಕೇಶಕುಮಾರ, ಜಿಲ್ಲಾ ವಾರ್ತಾಧಿಕಾರಿ ಮಂಜುನಾಥ ಸುಳ್ಳೊಳ್ಳಿ, ಲೀಡ್ ಬ್ಯಾಂಕ ಜಿಲ್ಲಾ ಅಧಾರ ಸಮಾಲೋಚಕರಾದ ಆಮರ್.ಆರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಬೀದರ .ಅಂಚೆ ಕಛೇರಿಯ ವ್ಯವಸ್ಥಾಪಕರು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಾರ್ಷಲ್ ಆರ್ಟ್ಸ್ ಟ್ರೈನಿಂಗ್ ಸೆಂಟರ್ ಡೋಜೊ ಉದ್ಘಾಟನೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಹಳೆ ಜೇವರ್ಗಿ ರಸ್ತೆಯಲ್ಲಿರುವ ಗಾಬರೆ ಲೇಔಟ್‌ನಲ್ಲಿ ಕಲ್ರಿ–ಎನ್–ರಿಯು ಅಕಾಡೆಮಿ ಆಫ್ ಇಂಡಿಯನ್ ಕರಾಟೆ ಹಾಗೂ ಅಜಯಕುಮಾರ್ ಸ್ಪೋರ್ಟ್ಸ್ ಕರಾಟೆ ಅಸೋಸಿಯೇಷನ್ ವತಿಯಿಂದ ಮಾರ್ಷಲ್ ಆರ್ಟ್ಸ್ ಟ್ರೈನಿಂಗ್ ಸೆಂಟರ್ ಡೋಜೊ ಅನ್ನು ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಂತಗೌಡ ಬಿರಾದರ್, ಮಲ್ಲಿಕಾರ್ಜುನ್ ಮಡಿವಾಳ, ಗ್ರಾಂಡ್ ಮಾಸ್ಟರ್ ಶ್ರೀನಿವಾಸ್, ರಾಜ್ವರ್ಧನ್ ಜಿ ಚೌಹಾನ್, ವೀರೇಶ ಕುಲಕರ್ಣಿ, ಅಂಬರೀಶ್ ಮೇತ್ರಿ, ಅರವಿಂದ ನಾಯಕ್, ದಾದಾಸಾಹೇಬ್, ಶ್ರೀಕಾಂತ್ ಪಿಸಾಲ್, ಪ್ರತಾಪಸಿಂಗ್ ಪವಾರ್, ಅಂಬರೀಶ ಜೋಗಿ, ಶ್ರೀನಿವಾಸ್ ಜಾದವ್, ಪ್ರೇಮ ರಾಥೋಡ್, ಸಿದ್ದು, ಸಾವಿತ್ರಿ ಕೋರಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬೆಂಗಳೂರಿನಿಂದ ಆಗಮಿಸಿದ ರೆಡ್ ಬೆಲ್ಟ್ ಗ್ರಾಂಡ್ ಮಾಸ್ಟರ್ ಶ್ರೀನಿವಾಸ್ ರವರು ವಿದ್ಯಾರ್ಥಿಗಳ ಪರೀಕ್ಷೆಯನ್ನು ವೀಕ್ಷಿಸಿ ಕಲರ್ ಬೆಲ್ಟ್, ಬ್ಲಾಕ್ ಬೆಲ್ಟ್ ಮತ್ತು ಟ್ರೈನಿಂಗ್ ಕ್ಯಾಂಪ್ ಸರ್ಟಿಫಿಕೇಟ್ ಅನ್ನು ವಿತರಿಸಿದರು.

# ಅರಣ್ಯ ಸಂಪತ್ತಿನ ರಕ್ಷಣೆಗೆ ಆದ್ಯತೆ: ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ರಾಜ್ಯದಲ್ಲಿ ಅರಣ್ಯ ಸಂಪತ್ತಿನ ಸಂರಕ್ಷಣೆಗೆ ಆದ್ಯತೆ ನೀಡಲಾಗುವುದು ಎಂದು ಅರಣ್ಯ ಅಭಿವೃದ್ಧಿ ನಿಗಮದ ನೂತನ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ ಹೇಳಿದರು.

ಪಟ್ಟಣದಲ್ಲಿ ತಮ್ಮ ನಿವಾಸದಲ್ಲಿ ಭಾನುವಾರ ವಿವಿಧ ಸಂಘ ಸಂಸ್ಥೆಗಳ ಮುಖಂಡರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾರ್ಗದರ್ಶನದಲ್ಲಿ ತಾಲೂಕು ಕಾಂಗ್ರೆಸ್ ಅಧ್ಯಕ್ಷನಾಗಿ, ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷನಾಗಿ ಕೆಲಸ ಮಾಡುತ್ತಿದ್ದೇನೆ.

ಇದೀಗ ಅವರು ನನ್ನನ್ನು ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷನಾಗಿ ನೇಮಕ ಮಾಡಿದ್ದಾರೆ. ಅವರ ವಿಶ್ವಾಸ ಉಳಿಸಿಕೊಂಡು ಅರಣ್ಯ ಅಭಿವೃದ್ಧಿ ನಿಗಮದಲ್ಲಿ ಉತ್ತಮ ಕೆಲಸ ಮಾಡುವ ಪ್ರಯತ್ನ ಮಾಡುತ್ತೇನೆ ಎಂದರು.

ಪಕ್ಷದ ಕಾರ್ಯಕರ್ತರು, ಹಿತೈಷಿಗಳು ನನ್ನನ್ನು ಸನ್ಮಾನಿಸಿ, ಅಭಿನಂದಿಸುತ್ತಿರುವುದು ಮತ್ತಷ್ಟು ಕೆಲಸ ಮಾಡಲು ಸ್ಫೂರ್ತಿ ಸಿಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಗುತ್ತಿಗೆದಾರರಾದ ಸಂಗಮೇಶ ಹುಣಜೆ ಮದಕಟ್ಟಿ, ರವೀಂದ್ರ ಚಿಡಗುಪ್ಪೆ, ಬೋರವೇಲ್ಸ್ ಸಂಘದ ಅಧ್ಯಕ್ಷ ಸತೀಶ ಧರ್ಮಣ್ಣ, ತಾಲೂಕು ಸರಕಾರಿ ನೌಕರರ ಸಂಘದ ಉಪಾಧ್ಯಕ್ಷ ಪ್ರಭು ಡಿಗ್ಗೆ ಸೇರಿದಂತೆ ಹಲವರು ಇದ್ದರು.

# ಪತ್ರಕರ್ತರ ಸಂಘಕ್ಕೆ ಜಂಬುನಾಥ್ ಜಿಲ್ಲಾಧ್ಯಕ್ಷ

ಮಲ್ಲಮ್ಮ ನುಡಿ ವಾರ್ತೆ


ನವದೆಹಲಿ: ನವದೆಹಲಿಯ ಕಾರ್ಯನಿರತ ಪತ್ರಕರ್ತರ ಹಾಗೂ ಸಂಪಾದಕರ ಸಂಘದ ವತಿಯಿಂದ ಬಳ್ಳಾರಿ ಜಿಲ್ಲಾಧ್ಯಕ್ಷರನ್ನಾಗಿ ಹಿರಿಯ ಪತ್ರಕರ್ತ ಜಂಬುನಾಥ್ ಅವರನ್ನು ಆಯ್ಕೆ ಮಾಡಲಾಗಿದೆ.

ಈ ಕುರಿತು ಕರ್ನಾಟಕ ರಾಜ್ಯ ಘಟಕದ ಕಾರ್ಯಾಧ್ಯಕ್ಷ ಯಲ್ಲಪ್ಪ ಪೂಜಾರಿ ಮೌರ್ಯ ಅವರು ಅಧಿಕೃತವಾಗಿ ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ.

ನಿಮಗೆ ಹೃತ್ಪೂರ್ವಕ ಶುಭಾಶಯಗಳು ಹಾಗೂ ಅಭಿನಂದನೆಗಳು.

ಪತ್ರಕರ್ತರ ಹಕ್ಕುಗಳ ರಕ್ಷಣೆ–ಯು, ವೃತ್ತಿಪರ ಗೌರವದ ಉಳಿವು, ಮಾಧ್ಯಮ ನೈತಿಕತೆಯ ಪ್ರೋತ್ಸಾಹ ಮತ್ತು ಸಾಮಾಜಿಕ ಜವಾಬ್ದಾರಿಯ ಬಲವರ್ಧನೆ.

ಈ ಉದ್ದೇಶಗಳನ್ನು ಕಾರ್ಯರೂಪಕ್ಕೆ ತರಲು ಬಳ್ಳಾರಿ ಜಿಲ್ಲೆಯಲ್ಲಿ ಸಂಘಟನೆಯ ಅರಿವನ್ನು ವೃದ್ಧಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.



ಬಳ್ಳಾರಿ ಜಿಲ್ಲೆಯಲ್ಲಿ ನಿಮ್ಮ ನೇತೃತ್ವದಲ್ಲಿ ನಮ್ಮ ಸಂಘಟನೆ ಹೊಸ ಉತ್ಸಾಹದೊಂದಿಗೆ ಬೆಳೆಯಲಿದೆ ಎಂಬ ವಿಶ್ವಾಸವಿದೆ.

ಪತ್ರಕರ್ತರ ಒಗ್ಗಟ್ಟು, ನೈತಿಕ ಪತ್ರಿಕೋದ್ಯಮ ಮತ್ತು ಸಮಾಜಮುಖಿ ಸೇವೆಯು ನಮ್ಮ ಪ್ರಥಮ ಗುರಿಯಾಗಿರಲಿ ಎಂದು ಆಶಿಸಿದ್ದಾರೆ.

# ಕಾನೂನು ಅರಿವು, ನೆರವು ಕಾರ್ಯಕ್ರಮ




ಬೀದರ, ನವೆಂಬರ್.10: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಸಮಾಜ ಕಲ್ಯಾಣ ಇಲಾಖೆ ಬೀದರ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಕಾಲೇಜು ಕಮಠಾಣ ಇವರುಗಳ ಸಂಯುಕ್ತಾಶ್ರಯದಲ್ಲಿಂದು ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಕಾಲೇಜು, ಕಮಠಾಣ ಬೀದರನಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ಅವರು ಸಸೀಗೆ ನೀರು ಎರೆಯುವುದರ ಮೂಲಕ ಉದ್ಘಾಟನೆ ಮಾಡಿದರು.

ನಂತರ ಮಾತನಾಡಿ,

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸವಲತ್ತುಗಳ ಬಗ್ಗೆ, ಲೋಕ ಅದಾಲತ ಬಗ್ಗೆ ಹಾಗೂ ಪೋಕ್ಸೋ ಕಾಯ್ದೆ ಬಗ್ಗೆ ಮಾತನಾಡಿದರು .

ಕಮಠಾಣದ ಮೊರಾರ್ಜಿ ದೇಸಾಯಿ ವಸತಿ ಶಾಲೆ

ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಗೋವಿಂದ ದತ್ತಾತ್ರಿ ಅವರು ಅಧ್ಯಕ್ಷತೆ–ಯ ಭಾಷಣವನ್ನು ಮಾಡಿದರು.

ಉಪನ್ಯಾಸಕರಾಗಿ ಸಂಗಮೇಶ ಪಾಟೀಲ್ ಅವರು ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಕುರಿತು ಮಾತನಾಡಿದರು,

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂಧಿ ಆಕಾಶ ಸಜ್ಜನಶೇಟ್ಟಿ ಹಾಗೂ ಕಮಠಾಣ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗದವರು, ಮಕ್ಕಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಕಾಲೇಜಿನ ಕನ್ನಡ ಶಿಕ್ಷಕರಾದ ಪ್ರಶಾಂತ ಹೊನ್ನಾ ಅವರು ನಿರೂಪಣೆ ಮಾಡಿದರು.

# ಕೆಯುಡಬ್ಲ್ಯೂಜೆ ಚುನಾವಣೆ:
## ನೂತನ ಸಾಲಿನ ಪದಾಧಿಕಾರಿಗಳ ಅಧಿಕಾರ ಸ್ವೀಕಾರ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ(ಕೆಯುಡಬ್ಲ್ಯೂಜೆ) 2025–2028ನೇ ಸಾಲಿನ ಚುನಾವಣೆಯಲ್ಲಿ ಆಯ್ಕೆಯಾಗಿರುವ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ರಾಜ್ಯ ಪದಾಧಿಕಾರಿಗಳು ಸೋಮವಾರ ಸಂಘದ ಸಭಾಂಗಣದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಅಧಿಕಾರ ಸ್ವೀಕಾರ ಮಾಡಿತು.

ಚುನಾವಣಾ ಲಿತಾಂಶವನ್ನು ಅಧಿಕೃತವಾಗಿ ಘೋಷಣೆ ಮಾಡಿದ ಮುಖ್ಯ ಚುನಾವಣಾಧಿಕಾರಿ ಎನ್.ರವಿಕುಮಾರ್ (ಟೆಲೆಕ್ಸ್) ಅವರು, ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋದನೆ ಮಾಡಿದರು.

ಅಧ್ಯಕ್ಷರಾಗಿ ಶಿವಾನಂದ ತಗಡೂರು, ಉಪಾಧ್ಯಕ್ಷರಾಗಿ ಹೆಚ್.ಬಿ.ಮದನಗೌಡ, ಅಜ್ಜಮಾಡ ರಮೇಶ್ ಕುಟ್ಟಪ್ಪ, ಮತ್ತಿಕೆರೆ ಜಯರಾಮ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಾರ್ಯದರ್ಶಿಗಳಾಗಿ ನಿಂಗಪ್ಪ ಚಾವಡಿ, ಪುಂಡಲೀಕ ಭೀ ಬಾಳೋಜಿ, ಸೋಮಶೇಖರ ಕೆರೆಗೋಡು, ಖಜಾಂಚಿಯಾಗಿ ವಾಸುದೇವ ಹೊಳ್ಳ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಇದೇ ಸಂದರ್ಭದಲ್ಲಿ ನೂತನ ಪದಾಧಿಕಾರಿಗಳಿಗೆ ಚುನಾವಣಾ ಪ್ರಮಾಣ ಧೃಢೀಕರಣ ಪತ್ರ ಮತ್ತು ಹೂ ಬೊಕ್ಕೆ ಮತ್ತು ಪುಸ್ತಕ ನೀಡುವ ಮೂಲಕ ಅಭಿನಂದಿಸಲಾಯಿತು.

ಸಂಘದ ಜವಬ್ದಾರಿ ನಿಭಾಯಿಸಿರುವೆ:

ಇದೇ ಸಂದರ್ಭದಲ್ಲಿ ಮಾತನಾಡಿದ ಮುಖ್ಯ ಚುನಾವಣಾಧಿಕಾರಿ ಎನ್.ರವಿಕುಮಾರ್ ಅವರು, ಸಂಘವು ತನಗೆ ವಹಿಸಿದ್ದ ಜವಬ್ದಾರಿಯನ್ನು ಬೈಲಾ ಮತ್ತು ಸಂಘದ ನಿಯಮಾವಳಿಗಳ ಅಡಿಯಲ್ಲಿ ಅತ್ಯಂತ ಪಾರದರ್ಶಕವಾಗಿ ನಿಭಾಯಿಸಿದ ತೃಪ್ತಿ ನನಗಿದೆ. ಚುನಾವಣಾ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದ ಎಲ್ಲರಿಗೂ ಮತ್ತು ಚುನಾವಣೆಯಲ್ಲಿ ಆಯ್ಕೆಯಾದ ನೂತನ ಸಾಲಿನ ಎಲ್ಲಾ ಪದಾಧಿಕಾರಿಗಳನ್ನು ಅಭಿನಂದಿಸುತ್ತೇನೆ ಎಂದರು.

ನೂತನ ಪದಾಧಿಕಾರಿಗಳಿಗೆ ಅಭಿನಂದನೆ:

ಸಂಘದ ರಾಜ್ಯಾಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಮಾಡಿದ ಶಿವಾನಂದ ತಗಡೂರು ಮಾತನಾಡಿ, ಸಂಘದ ಚುನಾವಣೆ ನಡೆಸುವುದು ಹಲವು ಸವಾಲಿನ ಕೆಲಸ. ಅದಕ್ಕಾಗಿ ಕಳೆದ ಮೂರು ತಿಂಗಳಿಂದಲೂ ಸಿದ್ಧತೆಯನ್ನು ನಡೆಸಲಾಗಿತ್ತು. ರಾಜ್ಯ ಘಟಕ, 31 ಜಿಲ್ಲಾ ಘಟಕ ಮತ್ತು 2 ಹೊರನಾಡಿನ ಘಟಕಗಳಿಗೆ ಏಕಕಾಲದಲ್ಲಿ ಶಾಂತಿಯುತವಾಗಿ ಚುನಾವಣೆ ನಡೆದಿದೆ. ಅದಕ್ಕಾಗಿ ಚುನಾವಣಾಧಿಕಾರಿ ರವಿಕುಮಾರ್ ನೇತೃತ್ವದಲ್ಲಿ ಎಲ್ಲಾ ಚುನಾವಣಾ ಸಿಬ್ಬಂದಿಯನ್ನು ಅಭಿನಂದಿಸುವುದಾಗಿ ತಿಳಿಸಿದರು. ನೂತನ ಸಾಲಿನ ಪದಾಧಿಕಾರಿಗಳಾಗಿ ಆಯ್ಕೆಯಾಗಿರುವ ಎಲ್ಲಾ ಜಿಲ್ಲಾ ಘಟಕಗಳ ಪದಾಧಿಕಾರಿಗಳು ಮತ್ತು ಕಾರ್ಯಕಾರಿ ಸಮಿತಿ ಸದಸ್ಯರನ್ನು ಅಭಿನಂದಿಸಿದರು.

ಚುನಾವಣಾಧಿಕಾರಿಗೆ ಸನ್ಮಾನ:

ಯಶಸ್ವಿಯಾಗಿ ಕಾರ್ಯ ನಿರ್ವಹಣೆ ಮಾಡಿದ ಮುಖ್ಯ ಚುನಾವಣಾಧಿಕಾರಿ ಎನ್. ರವಿಕುಮಾರ್ ಅವರನ್ನು ಭೂ ಕಬಳಿಕೆ ನಿಷೇಧ ನ್ಯಾಯಾಲಯದ ನ್ಯಾಯಾಧೀಶ ಕೆ.ಎಚ್.ಅಶ್ವತ್ಥನಾರಾಯಣಗೌಡ ಅವರು ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿದರು. ಇದೇ ಸಂದರ್ಭದಲ್ಲಿ ಅವರು ನೂತನ ಸಾಲಿಗೆ ಆಯ್ಕೆಯಾಗಿರುವ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ನೇತೃತ್ವದ ಎಲ್ಲಾ ಪದಾಧಿಕಾರಿಗಳನ್ನು ಅಭಿನಂದಿಸಿದರು. ಇತ್ತೀಚಿನ ಕಾಲಘಟ್ಟದಲ್ಲಿ ಕೆಯುಡಬ್ಲೂಣಟಿಜಜಜಿಟಿಜಜಜೆ ಕ್ರೀಯಾಶೀಲವಾಗಿ ಕೆಲಸ ಮಾಡುವ ಮೂಲಕ ಮಹತ್ವದ ಹೆಜ್ಜೆ ಗುರುತು ಮೂಡಿಸುತ್ತಿರುವುದು ಅಭಿನಂದನೀಯ ಎಂದು ಅಶ್ವತ್ಥನಾರಾಯಣಗೌಡ ಅವರು ಶ್ಲಾಘಿಸಿದರು.

# ಮಹಿಳಾ ಪ್ರತಿಭೆಗಳಿಗೆ ಸಂಘಟನೆಗಳು ವೇದಿಕೆಯಾಗಲಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.10– ಮಹಿಳೆಯರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಅದನ್ನು ಬೆಳಗಿಸಲು ಸಮಾಜದ ಸಂಘಟನೆಗಳು ಮುಂದಾಗಬೇಕು ಎಂದು ನಗರಸಭೆ ಉಪಾಧ್ಯಕ್ಷೆ ಶೋಭಾ ರಾವ್ ಹೇಳಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಅಂಗಸಂಸ್ಥೆಯಾಗಿರುವ ಬಾಗಲಕೋಟೆ ಜಿಲ್ಲಾ ಬ್ರಾಹ್ಮಣ ಮಹಾಸಭೆ ಮಹಿಳಾ ಘಟಕದ ಉದ್ಘಾಟನಾ ಸಮಾರಂಭ ಹಾಗೂ ಕನಕದಾಸರ ಜಯಂತಿ ನಿಮಿತ್ತ ಮಹಿಳೆಯರಿಗಾಗಿ ಏರ್ಪಡಿಸಿದ್ದ ಬೇಯಿಸದೆ ಅಡುಗೆ ಮಾಡುವ ಸ್ಪರ್ಧೆಯ ಬಹುಮಾನ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರಲ್ಲಿ ಸಾಕಷ್ಟು ಪ್ರತಿಭೆಗಳಿವೆ, ಅವುಗಳನ್ನು ಸಮಾಜದ ಮುಂದೆ ಸಾದರಪಡಿಸಲು ವೇದಿಕೆ ಬೇಕು. ಈ ನಿಟ್ಟಿನಲ್ಲಿ ಜಿಲ್ಲಾ ಬ್ರಾಹ್ಮಣ ಮಹಾಸಭೆಯ ಮಹಿಳಾ ಘಟಕ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.



ಸಮಾಜದ ಸಂಘಟನೆಯಲ್ಲಿ ಮಹಿಳೆಯರು ಸಹ ಭಾಗವಹಿಸಿ ಸಮಾಜದ ಆಗು ಹೋಗುಗಳ ಬಗ್ಗೆ ತಿಳಿದುಕೊಳ್ಳಬೇಕು. ಎಲ್ಲದರಲ್ಲೂ ಮಹಿಳೆಯರು ಮುಂದೆ ಬರಬೇಕು ಎಂದ ಶೋಭಾ ರಾವ್, ಸಮಾಜದ ಅಭಿವೃದ್ಧಿಗೆ ಸಂಘಟನೆ ಅವಶ್ಯವಾಗಿ ಬೇಕು. ಸಂಘಟನಾಕಾರರ ಜೊತೆ ಮಹಿಳೆಯರು ಸಹ ಕೈಜೋಡಿಸಬೇಕು ಎಂದು ಹೇಳಿದರು.ಬಾಗಲಕೋಟೆ ಕೋ–ಆಪ್ ಬ್ಯಾಂಕಿನ ಅಧ್ಯಕ್ಷ, ಪಕ್ವಾನ ಗ್ರುಪ್ ಮಾಲಿಕ ಪವನ ಸಿಮಿಕೇರಿ ಮತ್ತು ಜಿಲ್ಲಾ ಬ್ರಾಹ್ಮಣ ಮಹಾಸಭೆಯ ಪ್ರಧಾನ ಕಾರ್ಯದರ್ಶಿ ಅನಂತ ಮಳಗಿ ನಿರ್ಣಾಯಕರಾಗಿ, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಜಿಲ್ಲಾ ಬ್ರಾಹ್ಮಣ ಮಹಾಸಭೆಯ ಖಜಾಂಚಿ ಅನಂತ ಉಮರ್ಜಿ ಮಾತನಾಡಿ, ಸಂಘಟನೆಯಲ್ಲಿ ಮಹಿಳೆಯರ ಪಾತ್ರ ಅವಶ್ಯವಾಗಿದೆ. ಸಮಾಜ ಘಾತುಕ ಶಕ್ತಿಗಳ ವಿರುದ್ಧ ಹೋರಾಡುವಲ್ಲಿ ಮಹಿಳೆಯರು ಸದಾ ಸಂಘಟಿತರಾಗಿರಬೇಕು. ಸಂಘಟನೆಗಳು ಮಾಡುವ ಕಾರ್ಯಗಳ ಜೊತೆ ಕೈಜೋಡಿಸಬೇಕು ಎಂದರು. ದಾಸಶ್ರೇಷ್ಠ ಕನಕದಾಸರ ಬಗ್ಗೆ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಶಿಲ್ಪಾ ಹರಿಮಂದಿರ ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಸ್ನೇಹಾ ಜೋರಾಪೂರ, ಸಂಘಟನೆಗೆ ಎಲ್ಲರ ಸಹಕಾರ ಅಗತ್ಯ. ಮಹಿಳಾ ಘಟಕ ಹಲವಾರು ಕಾರ್ಯಕ್ರಮಗಳ ರೂಪ ರೇಷೆ ಸಿದ್ಧಪಡಿಸಿದೆ. ಎಲ್ಲ ಕಾರ್ಯಕ್ರಮಗಳಿಗೂ ಮಹಿಳೆಯರ ಸಹಕಾರ ಬೇಕು ವಿನಂತಿಸಿದರು.

ಬಾಗಲಕೋಟೆ ಜಿಲ್ಲಾ ಬ್ರಾಹ್ಮಣ ಮಹಾಸಭೆಯ ಅಧ್ಯಕ್ಷ ಭಾಸ್ಕರ ಮನಗೂಳಿ ಉಪಸ್ಥಿತರಿದ್ದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನಂತ ಮಳಗಿ ನಿರ್ಣಾಯಕರಾಗಿ ಆಗಮಿಸಿದ್ದರು.7 ಮಹಿಳಾ ಮಂಡಳಿಗಳು ಭಾಗವಹಿಸಿದ್ದ ಸ್ಪರ್ಧೆಯಲ್ಲಿ ವಿಜಯ ವಿಠ್ಠಲ ಭಜನಾ ಮಂಡಳಿ ಪ್ರಥಮ ಸ್ಥಾನ, ಪ್ರಸನ್ನ ವೆಂಕಟ ಭಜನಾ ಮಂಡಳಿ ದ್ವಿತೀಯ ಸ್ಥಾನ ಪಡೆದರೆ, ರುಕ್ಮಿಣಿ ಭಜನಾ ಮಂಡಳಿ ಹಾಗೂ ಹರೇ ಶ್ರೀನಿವಾಸ ಭಜನಾ ಮಂಡಳಿ ತೃತೀಯ ಸ್ಥಾನ ಪಡೆದವು. ಚೇತನಾ ಭಜನಾ ಮಂಡಳಿ, ದಾಸನಿಧಿ ಭಜನಾ ಮಂಡಳಿ, ಸಮನಾ ಭಜನಾ ಮಂಡಳಿ ಸಮಾಧಾನಕರ ಬಹುಮಾನವನ್ನು ಪಡೆದವು. ಮಹಿಳಾ ಘಟಕದ ಸಂಘಟನಾ ಕಾರ್ಯದರ್ಶಿ ಸಂಗೀತಾ ಕಲಾಲಬಂಡಿ, ಸದಸ್ಯರಾದ ಸುಮನ ದೇಶಪಾಂಡೆ, ಆರತಿ ಬರಗಿ ಮತ್ತಿತರರು ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಶ್ವೇತಾ ಮುತಾಲಿಕ ಹಾಗೂ ಶ್ರೀರಕ್ಷಾ ನಾಗಸಂಪಿಗೆ ಭಕ್ತಿಗೀತೆ ಹಾಡಿದರು. ಮಹಿಳಾ ಘಟಕದ ಉಪಾಧ್ಯಕ್ಷೆ ಡಾ.ಅಶ್ವಿನಿ ಮಾರ್ಕೋಂಡ ಸ್ವಾಗತಿಸಿದರು. ಚಂದ್ರಿಕಾ ಜೋಶಿ ನಿರೂಪಿಸಿದರು. ಸುಮಾ ಮಳಗಿ ವಂದಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)